ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI


ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 57 RNI Number : KNKAN/25/A2770 03-03-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :57 ರಾಯಚೂರು 03-03-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ಸೌದಿ, ಬಹ್ರೇನ್ ದೊರೆಗಳ ಜೊತೆ ಪ್ರಧಾನಿ ಮೋದಿ ಫೋನ್ ಸಂಭಾಷಣೆ: ಇರಾನ್ ದಾಳಿಗೆ ಖಂಡನೆ



ನವದೆಹಲಿ: ಇಸ್ರೇಲ್ ಮತ್ತು ಅಮೆರಿಕ ಸೇರಿ ಇರಾನ್ ಮೇಲೆ ದಾಳಿ ನಡೆಸಿದ್ದರ ನಡುವೆ, ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬಹ್ರೇನ್ ದೊರೆ ಹಮದ್ ಬಿನ್ ಇಸಾ ಅಲ್ ಖಲೀಫಾ, ಸೌದಿ ಅರೇಬಿಯಾದ ರಾಜಕುಮಾರ ಮತ್ತು ಪ್ರಧಾನಿಯೂ ಆಗಿರುವ ಮೊಹಮ್ಮದ್ ಬಿನ್ ಸಲ್ಮಾನ್ ಅವರಿಗೆ ಫೋನ್ ಕರೆ ಮಾಡಿ ಮಾತನಾಡಿದರು. ಎರಡೂ ದೇಶಗಳ ಮೇಲೆ ಇರಾನ್ ನಡೆಸಿದ ದಾಳಿಯನ್ನು ಖಂಡಿಸಿದರು.

ಇಬ್ಬರು ನಾಯಕರೊಂದಿಗಿನ ದೂರವಾಣಿ ಸಂಭಾಷಣೆಯಲ್ಲಿ, ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಯ ಮರುಸ್ಥಾಪನೆ ಅತ್ಯಂತ ಮಹತ್ವದ್ದಾಗಿದೆ. ಈ ಕಷ್ಟದ ಸಮಯದಲ್ಲಿ ಅಲ್ಲಿ ವಾಸಿಸುವ ಭಾರತೀಯ ಸಮುದಾಯದ ರಕ್ಷಣೆಗೆ ನಿಂತಿದ್ದಕ್ಕೆ ಧನ್ಯವಾದ ಸಲ್ಲಿಸಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿನ ಬಿಕ್ಕಟ್ಟಿನ ಪರಿಸ್ಥಿತಿಯ ಬಗ್ಗೆ ಸೌದಿ ಅರೇಬಿಯಾದ ರಾಜಕುಮಾರ ಮತ್ತು ಪ್ರಧಾನಿಯೂ ಆಗಿರುವ ಪ್ರಿನ್ಸ್ ಮೊಹಮ್ಮದ್ ಬಿನ್ ಸಲ್ಮಾನ್ ಅವರೊಂದಿಗೆ ಚರ್ಚಿಸಿ, ಸೌದಿ ಅರೇಬಿಯಾದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆ ಉಲ್ಲಂಘಿಸುವ ಇರಾನ್ ದಾಳಿಗಳನ್ನು ಭಾರತ ಖಂಡಿಸುತ್ತದೆ ಎಂದು ಪ್ರಧಾನಿ ಹೇಳಿದ್ದಾರೆ.

ಬಹ್ರೇನ್ ಅಧ್ಯಕ್ಷರ ಜೊತೆ ಸಂಭಾಷಣೆ: ಇತ್ತ, ಬಹ್ರೇನ್ ದೊರೆ ಹಮದ್ ಬಿನ್ ಇಸಾ ಅಲ್ ಖಲೀಫಾ ಅವರೊಂದಿಗೂ ದೂರವಾಣಿ ಸಂಭಾಷಣೆ ನಡೆಸಿರುವ ಪ್ರಧಾನಿ ಮೋದಿ ಅವರು, ಭಾರತವು ಬಹ್ರೇನ್ ಮೇಲಿನ ಇರಾನ್ ದಾಳಿಯನ್ನು ಖಂಡಿಸುತ್ತದೆ. ಸಂಕಷ್ಟದ ಸಮಯದಲ್ಲಿ ಬಹ್ರೇನ್‌ನಲ್ಲಿರುವ ಭಾರತೀಯ ಸಮುದಾಯದ ಜೊತೆ ನಿಂತಿದ್ದಕ್ಕೆ ಧನ್ಯವಾದ ಸಲ್ಲಿಸಿದರು.

ಇದಕ್ಕೂ ಮೊದಲು ಪ್ರಧಾನಿ ಮೋದಿ ಅವರು, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ಫೋನ್‌ನಲ್ಲಿ ಸಂಭಾಷಣೆ ನಡೆಸಿ ಬೆಂಬಲ ನೀಡಿದ್ದರು.

ಗಲ್ಫ್ ರಾಷ್ಟ್ರದಲ್ಲಿ ವಾಸವಾಗಿರುವ ಭಾರತೀಯ ಸಮುದಾಯವನ್ನು

3ನೇ ಪುಟಕ್ಕೆ

ಯುದ್ಧಪೀಡಿತ ದೇಶಗಳಲ್ಲಿ ಸಿಲುಕಿರುವ ಕನ್ನಡಿಗರ ರಕ್ಷಣೆಗೆ ಕೋರಿ ಪ್ರಧಾನಿಗೆ ಸಿಎಂ ಪತ್ರ

ಬೆಂಗಳೂರು: ಮಧ್ಯಪ್ರಾಚ್ಯ ಯುದ್ಧಪೀಡಿತ ಪ್ರದೇಶಗಳಲ್ಲಿ ಸಿಲುಕಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಕರೆ ತರುವಂತೆ ಕೋರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದಿದ್ದಾರೆ.

ಮಧ್ಯಪ್ರಾಚ್ಯದ ಕೆಲವು ದೇಶಗಳಲ್ಲಿನ ಪ್ರಚಲಿತ ಪರಿಸ್ಥಿತಿಯ ಹಿನ್ನೆಲೆಯಲ್ಲಿ, ಹಲವಾರು ರಾಷ್ಟ್ರಗಳು - ವೈಮಾನಿಕ ಸಂಚಾರ ಬಂದ್ ಘೋಷಿಸಿವೆ. ಇದರ ಪರಿಣಾಮವಾಗಿ ಅಂತಾರಾಷ್ಟ್ರೀಯ ವಿಮಾನಯಾನ ಕಾರ್ಯಾಚರಣೆಗಳಲ್ಲಿ ಅಡಚಣೆಯಾಗಿದೆ. ವಿಮಾನ ಪ್ರಯಾಣದ ವ್ಯತ್ಯಯದಿಂದಾಗಿ ಕರ್ನಾಟಕ ಸೇರಿದಂತೆ ದೇಶದ ಹೆಚ್ಚಿನ ಸಂಖ್ಯೆಯ ಪ್ರಯಾಣಿಕರು ಪೀಡಿತ ಮಧ್ಯಪ್ರಾಚ್ಯ ದೇಶಗಳಲ್ಲಿ, ವಿಶೇಷವಾಗಿ ಯುಎಇನಲ್ಲಿ ಸಿಲುಕಿಕೊಂಡಿದ್ದಾರೆ.

ಯುದ್ಧದ ಪರಿಸ್ಥಿತಿ ಉಂಟಾಗಿರುವುದರಿಂದ



ಸಿಲುಕಿರುವ ಕನ್ನಡಿಗರು ಹಾಗೂ ಅವರ ಕುಟುಂಬಸ್ಥರು ಆತಂಕಕ್ಕೀಡಾಗಿದ್ದಾರೆ. ಈ ಸಂಬಂಧ ಸಮನ್ವಯತೆ ಸಾಧಿಸಿ, ಕನ್ನಡಿಗರ ರಕ್ಷಣೆ ಹಾಗೂ ಅವರ ವಾಪಸಾತಿಗಾಗಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕೋರಿ ಮುಖ್ಯ ಕಾರ್ಯದರ್ಶಿ ವಿದೇಶಾಂಗ ಸಚಿವಾಲಯಕ್ಕೆ ಪತ್ರ ಬರೆದಿದ್ದಾರೆ. ನಾಗರಿಕ ವಿಮಾನಯಾನ ಸಚಿವಾಲಯಕ್ಕೂ ಪತ್ರ ಬರೆದು ಸಮನ್ವಯತೆ ಸಾಧಿಸಿ, ಸಿಲುಕಿರುವ ಪ್ರಯಾಣಿಕರಿಗೆ ಅಗತ್ಯ ಸಹಕಾರ, ದಂಡ ವಿನಾಯಿತಿ, ಮಧ್ಯಂತರ ನೆರವು ನೀಡುವಂತೆ ಕೋರಲಾಗಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಬಿಗಡಾಯಿಸಿರುವ ಪರಿಸ್ಥಿತಿ ಹಿನ್ನೆಲೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರುತ್ತೇನೆ. ರಾಜತಾಂತ್ರಿಕ ಸಂಪರ್ಕವನ್ನು ಬಲಪಡಿಸಬೇಕು. ಭಾರತೀಯ ರಾಯಭಾರಿ ಕಚೇರಿ ಮೂಲಕ ನಿರಂತರ ನಿಗಾ, ಸುರಕ್ಷತೆ ಮತ್ತು ಕನ್ನಡಿಗರಿಗೆ ಮಾರ್ಗದರ್ಶನ ನೀಡುವಂತೆ ಕೋರಿದ್ದಾರೆ. ಅದೇ ರೀತಿ ಸಿಲುಕಿರುವವರನ್ನು ವಾಪಸ್ ಕರೆತರಲು ವಾಪಸಾತಿ ವಿಮಾನಗಳ ವ್ಯವಸ್ಥೆ ಸಿದ್ಧಪಡಿಸಬೇಕು. ವಿದೇಶಾಂಗ ಸಚಿವಾಲಯ, ನಾಗರಿಕ ಸಚಿವಾಲಯ, ರಾಜ್ಯ ಸರ್ಕಾರಗಳು ಹಾಗೂ ವಿಮಾನ ನಿರ್ವಾಹಕರ ಜೊತೆ ಸಮರ್ಪಕ ಸಂಪರ್ಕ ಸಾಧಿಸಲು ಅಂತರ ಸಚಿವಾಲಯ ಕಾರ್ಯಪಡೆ ಸ್ಥಾಪಿಸುವಂತೆ ಪತ್ರದಲ್ಲಿ ಕೋರಿದ್ದಾರೆ.

ಪೀಡಿತ ಪ್ರದೇಶಗಳಲ್ಲಿ ಸಿಲುಕಿರುವ ದೇಶದ ಜನರು ಹಾಗೂ ಕನ್ನಡಿಗರ ಕುಟುಂಬಸ್ಥರಿಗಾಗಿ

3ನೇ ಪುಟಕ್ಕೆ

ಆಯುಷ್ಮಾನ್ ಭಾರತ್ ಯೋಜನೆಯಡಿ ನೋಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ಸೌಲಭ್ಯ

ರಾಯಚೂರು ಮಾರ್ಚ್ 02

ಕಡು ಬಡವರು, ಆರ್ಥಿಕ ದುರ್ಬಲ ವರ್ಗದವರು, ದೈನಂದಿನ ದುಡಿಮೆಯಿಂದಲೇ ಜೀವನ ನಿರ್ವಹಣೆ ಮಾಡಬೇಕಾದ ಕುಟುಂಬಗಳು ತುರ್ತು ಶಸ್ತ್ರಚಿಕಿತ್ಸೆ ಗಾಗಿ ಗುಣಮಟ್ಟದ ಆರೋಗ್ಯ ಚಿಕಿತ್ಸೆ ಯನ್ನು ಪಡೆಯಲು ಸಹಾಯಕವಾಗುವಂತೆ ಭಾರತ ಸರಕಾರ ಹಾಗೂ ಕರ್ನಾಟಕ ಸರಕಾರ ಜಂಟಿಯಾಗಿ ಒಟ್ಟು 1650 ವಿವಿಧ ಚಿಕಿತ್ಸಾ ವಿಧಾನಗಳಿಗೆ ಉಚಿತ ಚಿಕಿತ್ಸೆ ಯನ್ನು ಆಯುಷ್ಮಾನ್ ಭಾರತ- ಪ್ರಧಾನಮಂತ್ರಿ ಜನಾರೋಗ್ಯ ಯೋಜನಾ- ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ (ಎಬಿ-ಪಿಎಮ್ಜೆವೈ-ಸಿಎಮ್-ಆರ್ಕೆ) ಯೋಜನೆಯಡಿ ಫಲಾನುಭವಿಗಳಿಗೆ ಉಚಿತ ಚಿಕಿತ್ಸೆ ಯನ್ನು ಒದಗಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಕೋರಿದ್ದಾರೆ.

ಹೃದಯ ಸಂಬಧ್ದಿ, ಮೂತ್ರಪಿಂಡ, ಕಿಡ್ನಿ, ಕ್ಯಾನ್ಸರ್, ಸುಟ್ಟಗಾಯಗಳು, ಗಂಭಿರ ಅಪಘಾತ, ಕಾಕ್ಲಿಯರ್ ಇಂಪ್ಲಾಟ್ ಅಳವಡಿಕೆ, ಮೊಣಕಾಲು, ಸೊಂಟದ ಬದಲಿ ಚಿಕಿತ್ಸೆ ಯು ಸೇರಿದಂತೆ ಗಂಭೀರ ಖಾಯಿಲೆಗಳಿಗೆ ಒಟ್ಟು 1650 ವಿವಿಧ ಚಿಕಿತ್ಸಾ ವಿಧಾನಗಳಿಗೆ ಜಿಲ್ಲೆಯ ಎಲ್ಲ ಸರಕಾರಿ ಆರೋಗ್ಯ ಕೇಂದ್ರಗಳಲ್ಲಿ



ಸೇವೆ, ಚಿಕಿತ್ಸೆ ಯನ್ನು ನೀಡಲಾಗುತ್ತಿದೆ. ಸರಕಾರದೊಂದಿಗೆ ಒಡಂಬಡಿಕೆ ಮಾಡಿಕೊಂಡ ನೋಂದಾಯಿತ ಖಾಸಗಿ ಆಸ್ಪತ್ರೆಗಳ ಮೂಲಕ ಫಲಾನುಭವಿಗಳಿಗೆ ಉಚಿತ ಚಿಕಿತ್ಸೆ ಯನ್ನು ಒದಗಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

ಇತ್ತೀಚೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ರಾಯಚೂರು ಲೋಕಸಭಾ ಕ್ಷೇತ್ರದ ಸಂಸದರಾದ ಜಿ. ಕುಮಾರ ನಾಯಕ ಅವರ ಅಧ್ಯಕ್ಷತೆಯ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದೀಶಾ) ಸಭೆಯಲ್ಲಿ ಸಂಸದರು ಸೂಚಿಸಿದಂತೆ ಈಗಾಗಲ್ಲೇ ಯೋಜನೆಯ ಕುರಿತು ಜನತೆಗೆ ಸಿಬ್ಬಂದಿಯವರ ಮೂಲಕ ಮಾಹಿತಿ ನೀಡಲಾಗುತ್ತಿದ್ದು, ಜಿಲ್ಲೆಯ ಪ್ರತಿ ನಾಗರಿಕರು ಯೋಜನೆಯಡಿ ಸೌಲಭ್ಯ ಪಡೆದು ಆರ್ಥಿಕ ಹೊರೆಯಿಂದ ಮುಕ್ತರಾಗಲು ಸದುಪಯೋಗಕ್ಕಾಗಿ ವಿನಂತಿಸಿದ್ದಾರೆ.

ಯೋಜನೆಯಡಿ ತಜ್ಞತೆಯ ಚಿಕಿತ್ಸಾ ಸೌಲಭ್ಯ: ತುರ್ತು ಸಂದರ್ಭಗಳಲ್ಲಿ 169 ಚಿಕಿತ್ಸಾ ವಿಧಾನ ಸೌಲಭ್ಯ, ಗಂಭೀರ ಆರೋಗ್ಯ ಸಮಸ್ಯೆಗಳಿಗೆ 900 ಚಿಕಿತ್ಸಾ ವಿಧಾನ ಸೌಲಭ್ಯ, ದ್ವಿತೀಯ ಹಂತದ 254 ಚಿಕಿತ್ಸಾ ವಿಧಾನಗಳು, ಪ್ರಾಥಮಿಕ ಹಂತದ 40 ಚಿಕಿತ್ಸಾ ವಿಧಾನ ಸೇರಿದಂತೆ ಒಟ್ಟು 1650 ವಿವಿಧ ಚಿಕಿತ್ಸಾ ವಿಧಾನಗಳನ್ನು ಉಚಿತವಾಗಿ ಒದಗಿಸಲಾಗುವುದು.

ಯೋಜನೆಯ ಫಲಾನುಭವಿಗಳು: ಬಿಪಿಎಲ್ ಕಾರ್ಡ್ ಹೊಂದಿದ ಕುಟುಂಬದ ಸದಸ್ಯರಿಗೆ ವಾರ್ಷಿಕ ರೂಪಾಯಿ 5 ಲಕ್ಷಗಳ ವರೆಗೆ ಉಚಿತ ಚಿಕಿತ್ಸಾ ವೆಚ್ಚ ಭರಿಸಲಾಗುವುದು.

3ನೇ ಪುಟಕ್ಕೆ

ದ್ವಿತೀಯ ಪಿಯುಸಿ ಪರೀಕ್ಷೆ; 50 ವಿದ್ಯಾರ್ಥಿಗಳು ಗೈರು ಹಾಜರಿ

ರಾಯಚೂರು,ಮಾ.02

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ಯಿಂದ 2026ರ ಮಾರ್ಚ್ 02ರ ಸೋಮವಾರ ದಂದು ನಡೆದ ದ್ವಿತೀಯ ಪಿಯುಸಿ-01ರ ಭೂಗೋಳ ಶಾಸ್ತ ಹಾಗೂ ಸಂಖ್ಯಾಶಾಸ್ತ ವಿಷಯದ ಪರೀಕ್ಷೆಯಲ್ಲಿ ಒಟ್ಟು 50 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.

ಜಿಲ್ಲೆಯ 43 ಪರೀಕ್ಷೆ ಕೇಂದ್ರಗಳಲ್ಲಿ ಭೂಗೋಳ ಶಾಸ್ತ ವಿಷಯದಲ್ಲಿ ಒಟ್ಟು 586 ನೋಂದಣೆಯಾಗಿದ್ದು, 557 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ. 29 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.

3ನೇ ಪುಟಕ್ಕೆ

ಇಪಿಎಫ್ ಕಚೇರಿಯಿಂದ ಆರ್‌ಆರ್‌ಸಿ ಮೊತ್ತ ಪಾವತಿಸಲು ಸೂಚನೆ

ರಾಯಚೂರು ಮಾ. 02-

ಉದ್ಯೋಗಿಗಳ ಭವಿಷ್ಯ ನಿಧಿ ಮತ್ತು ಇತರ ನಿಯಮಾವಳಿ ಕಾಯ್ದೆ, 1952 (ಇಪಿಎಫ್ ಎಮ್‌ಪಿ ಆ್ಯಕ್ಟ್ 1952) ರ ಸೆಕ್ಷನ್ 8 ಅಡಿಯಲ್ಲಿ ಜಾರಿ ಮಾಡಲಾದ ವಸೂಲಿ ಪ್ರಮಾಣ ಪತ್ರಗಳು (ಆರ್‌ಆರ್‌ಸಿಎಸ್) ವಿರುದ್ಧವಾಗಿ ಹೊರಡಿಸಲಾದ ಎಲ್ಲಾ ಸಂಸ್ಥೆಗಳು / ಉದ್ಯೋಗದಾತರಿಗೆ ತಿಳಿಸಲಾಗಿದೆ. ಆ ಪ್ರಮಾಣ ಪತ್ರಗಳಲ್ಲಿ ನಿರ್ದಿಷ್ಟಪಡಿಸಿದ ಬಾಕಿ ಮೊತ್ತವನ್ನು ವಸೂಲಿ ಪ್ರಕ್ರಿಯೆಗಳಿಗೆ ಅನುಗುಣವಾಗಿ ಅಳವಡಿಸಲಾದ ದ್ವಿತೀಯ ಮತ್ತು ತೃತೀಯ ಅನುಸೂಚಿಗಳ ಅನ್ವಯ ವಸೂಲಿ ಮಾಡಲಾಗುತ್ತದೆ.

ಎಲ್ಲಾ ಸಂಸ್ಥೆಗಳು ತಕ್ಷಣವೇ ಆರ್‌ಆರ್‌ಸಿ ಮೊತ್ತವನ್ನು ಸಂಪೂರ್ಣವಾಗಿ ಪಾವತಿಸಲು ಸೂಚನೆ ನೀಡಲಾಗಿದೆ. ಈ ಪ್ರಕಟಣೆ, ಯಾವುದೇ ನ್ಯಾಯಾಲಯ ಅಥವಾ ನ್ಯಾಯಮಂಡಳಿ ವಸೂಲಿ ಪ್ರಕ್ರಿಯೆಗಳನ್ನು ತಾತ್ಕಾಲಿಕವಾಗಿ ನಿಲ್ಲಿಸಿರುವ ಮತ್ತು ಆ ತಾತ್ಕಾಲಿಕ ನಿಲುಗಡೆ ಪ್ರಸ್ತುತ ಜಾರಿಯಲ್ಲಿರುವ ಪ್ರಕರಣಗಳಿಗೆ ಅನ್ವಯಿಸುವುದಿಲ್ಲ ಎಂದು ವಸೂಲಿ ಅಧಿಕಾರಿ ಮತ್ತು ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತರಾದ ನೀರಜ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಸಕಿ ಕರೆಮ್ಮ ಅಧ್ಯಕ್ಷತೆಯಲ್ಲಿ ತ್ರೈ ಮಾಸಿಕ ಕೆಡಿಪಿ ಸಭೆ



ದೇವದುರ್ಗ,ಮಾ:2 ಕಲ್ಯಾಣ ಅಸ್ತ್ರ :

ಕೆ ಡಿ ಪಿ ಪ್ರಗತಿ ಪರಿಶೀಲನ ಸಭೆಯಲ್ಲಿ ಗಣಿ ಮತ್ತು ಭೂ ಇಲಾಖೆಯ ಅಧಿಕಾರಿಗಳಿಗೆ ಶಾಸಕಿ ಕರೆಮ್ಮ ನಾಯಕ್ ತರಾಟೆಗೆ ತೆಗೆದುಕೊಂಡು ನಮ್ಮ ಕ್ಷೇತ್ರದಲ್ಲಿ ಇರುವ ಮರಳನ್ನು ಸೊಲ್ಲಾಪುರ್ ಮತ್ತು ಗುಲ್ಬರ್ಗ ಜಿಲ್ಲೆಗಳಿಗೆ ಅಕ್ರಮವಾಗಿ ಮರಳನ್ನು ಸಾಗಿಸುತ್ತಿದ್ದು ಕ್ಷೇತ್ರದ ಜನಸಾಮಾನ್ಯರಿಗೆ ಮರಳು ಸಿಗದೆ ತೊಂದರೆ ಅನುಭವಿಸುತ್ತಿದ್ದಾರೆ, ಮರಳಿನ ಗಾಡಿಗೆ ನಂಬರ್ ಇಲ್ಲದೇ ಬಹು ದೊಡ್ಡ ಲಾರಿ ಟಿಪ್ಪರ್ ಗಳಿಗೆ ನಂಬರ್ ಇರುವುದಿಲ್ಲ ಇದನ್ನು ಅಧಿಕಾರಿಗಳು ಕಂಡು ಕಾಣದಂತೆ ಮೌನ ವಹಿಸಿರುವದು ಅನುಮಾನಕ್ಕೆ ಎಡೆ ಮಾಡಿಕೊಟ್ಟಿದೆ ಎಂದು ಶಾಸಕಿ ಅಧಿಕಾರಿಗಳ ಮೇಲೆ ಗರಂ ಆಗಿರುವ ಘಟನೆ ಇಂದಿನ ಕೆ, ಡಿ, ಪಿ, ಸಭೆಯಲ್ಲಿ ನಡೆಯಿತು, ಅಧಿಕಾರಿಗಳು ಕ್ಷೇತ್ರದ ಗ್ರಾಮೀಣ ಪ್ರದೇಶ ದಲ್ಲಿ ಇರುವ ಜನರ ಮೂಲ ಬೂತ ಸಮಸ್ಸೆ ಗಳನ್ನು ಪರಿಹರಿಸಲು ಕ್ರಮ ವಹಿಸಬೇಕು ನಿರ್ಲಕ್ಷ ಮಾಡಿದರೆ ನಾನು ಸುಮ್ಮನಿರಲ್ಲ ಎಂದು ಕರೆಮ್ಮ.ಜಿ.ನಾಯಕ್ ಇಂದಿನ ಕೆ, ಡಿ, ಪಿ, ಸಭೆಯಲ್ಲಿ ಹೇಳಿದರು.



ನಮ್ಮ ಕರ್ನಾಟಕ ಸೇನೆ ಪದಾಧಿಕಾರಿಗಳ ಆಯ್ಕೆ

ಸಿರವಾರ,ಮಾ.2-

ಕನ್ನಡ ನೆಲ, ಜಲ, ಭಾಷೆ, ಶಿಕ್ಷಣ,ಉದ್ಯೋಗ, ಗ್ರಾಮೀಣ ಪ್ರದೇಶಗಳ ಸಮಸ್ಯೆಯನ್ನು ಪರಿಹರಿಸಲು ಹೋರಾಟ ಮಾಡಬೇಕು ಎಂದು ನಮ್ಮ ಕರ್ನಾಟಕ ಸೇನೆಯ ಜಿಲ್ಲಾಧ್ಯಕ್ಷರಾದ ಕೆ.ಕೊಂಡಪ್ಪ ಹೇಳಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಮ್ಮ ಕರ್ನಾಟಕ ಸೇನೆ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿ ಎಲ್ಲರು ಒಗ್ಗಟ್ಟಾಗಿ ಜನರ ಸಮಸ್ಯೆಗೆ ಸ್ಪಂದಿಸುವ ಮೂಲಕ ಜನರಲ್ಲಿ ಜಾಗ್ರತಿ ಮೂಡಿಸುವ ಕೆಲಸದ ಜೊತೆಗೆ ಸಂಘಟನೆಯ ಬೆಳೆಸಬೇಕು ಎಂದರು. ಈ ಸಂದರ್ಭದಲ್ಲಿ ರಾಜ್ಯ ಸಂಚಾಲಕ ಭೀಮನಗೌಡ, ಜಿಲ್ಲಾ ಸಂ.ಕಾ ವೀರೇಶ ನಾಯಕ, ತಾಲೂಕು ಘಟಕ ನೂತನ ಅಧ್ಯಕ್ಷ ನಾಗರಾಜ ದೊರೆ ಚಾಗಭಾವಿ, ಮಾರುತಿ ನಾಯಕ ದೇವದುರ್ಗ, ರಂಗಪ್ಪ ನಾಯಕ, ಅರಕೇರಿ ತಾಲೂಕು ಘಟಕ ಯುವ ಘಟಕ, ಯಲ್ಲಪ್ಪ ನಾಯಕ, ಕಾರ್ಯದರ್ಶಿ, ಕರವೇ ಮುಖಂಡ ಡಿ.ಯಮನೂರ ಸೇರಿದಂತೆ ಅನೇಕರು ಇದ್ದರು.

ತಹಸೀಲ್ದಾರ ಕಛೇರಿಯಲ್ಲಿ ರೇಣುಕಾಚಾರ್ಯರ ಜಯಂತಿ

ಸಿರವಾರ,ಮಾ.2-

ಶ್ರೀ ರೇಣುಕಾಚಾರ್ಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ತಹಸೀಲ್ದಾರ ಕಛೇರಿಯಲ್ಲಿ ಸರಳವಾಗಿ ರೇಣುಕಾಚಾರ್ಯರ ಜಯಂತಿ ಆಚರಣೆ ಮಾಡ ಲಾಯಿತು. ನಾಡತಹಸೀಲ್ದಾರ ಶ್ರೀನಿವಾಸ ರೇಡ್ಡಿ, ಎಫ್ ಡಿ ಎ ಈರೇಶ, ಶ್ರೀ ಚನ್ನವೀರಯ್ಯಸ್ವಾಮಿ, ದೇವೆಂದ್ರಯ್ಯಸ್ವಾಮಿ, ಶೀವಲಿಂಗಯ್ಯ ಸ್ವಾಮಿ,

ಚನ್ನಬಸ್ಸಯ್ಯಸ್ವಾಮಿ ಶಾಖಾಪೂರು, ವಿರುಪಾಕ್ಷಯ್ಯಸ್ವಾಮಿ ಬಸ್ಸಾಪೂರು, ಸೋಮಶೇಖರ



ಸ್ವಾಮಿ, ಸಂತೋಷಕುಮಾರ, ಸೂಗುರಯ್ಯಸ್ವಾಮಿ, ಶ್ರೀನಾಥಸ್ವಾಮಿ ಗದ್ದಿಗೆಮಠ, ಸಿದ್ದಲಿಂಗಯ್ಯಸ್ವಾಮಿ, ಎಸ್ ಡಿ ಎ ಅಮರ,ದಯಾನಂದ ಸೇರಿದಂತೆ ಇನ್ನಿತರರು ಇದ್ದರು.

ಖನಿಜ ಪರಿಶೋಧನಾ ಸಾಮರ್ಥ್ಯ ಹೆಚ್ಚಳ ಕ್ರಮ; ಮ್ಯಾಗ್ನೆಟಿಕ್ ಸೆನ್ಸರ್ ಬಳಸಿ ಸರ್ವೆ

ರಾಯಚೂರು ಮಾ.02

ಕರ್ನಾಟಕದ ಯಾದಗಿರಿ, ರಾಯಚೂರು, ಚಿಕ್ಕಬಳ್ಳಾಪುರ, ಕೋಲಾರ, ಶ್ರೀ ಸತ್ಯಸಾಯಿ (ಪುಟ್ಟಪರ್ತಿ) ಮತ್ತು ತುಮಕೂರು ಜಿಲ್ಲೆಗಳು ಸೇರಿದಂತೆ ತೆಲಂಗಾಣ ಮತ್ತು ಆಂಧ್ರಪ್ರದೇಶದ ನಾರಾಯಣ ಪೇಟೆದ ಕೆಲವು ಭಾಗಗಳಲ್ಲಿ 2026ರ ಜನವರಿ ಮೊದಲ ವಾರದಿಂದ ಮ್ಯಾಗ್ನೆಟಿಕ್ ಸೆನ್ಸರ್‌ಗಳನ್ನು ಬಳಸಿಕೊಂಡು ಹೆಲಿಕಾಪ್ಟರ್‌ಗಳಲ್ಲಿ ಸರ್ವೆ ನಡೆಸಲಾಗುತ್ತಿದೆ.

ಈ ಕಾರ್ಯಕ್ರಮದಡಿಯಲ್ಲಿ ಕರ್ನಾಟಕ ಹೆಚ್-02 ಮತ್ತು ಹೆಚ್-03 ಬ್ಲಾಕ್‌ಗಳ ಸಮೀಕ್ಷೆಗಳನ್ನು ನೆಲಮಟ್ಟದಿಂದ 200 ಅಡಿ ಎತ್ತರದಿಂದ 1000 ಅಡಿ ಎತ್ತರದಿಂದ (ಎಜಿಎಲ್) ಹೆಚ್ಚಿನ ರೆಸಲ್ಯೂಶನ್ ಡೇಟಾವನ್ನು ಸಂಗ್ರಹಿಸುತ್ತದೆ.

ಟಿಡಿಇಎಮ್ ವಿಧಾನವು ಕಾಂತೀಯ ದತ್ತಾಂಶದೊದಿಗೆ ಸಂಯೋಜಿಸಲ್ಪಟ್ಟದ್ದು, ಭೂಗತ ಭೂವೈಜ್ಞಾನಿಕ ರಚನೆಗಳನ್ನು ಅರ್ಥಮಾಡಿಕೊಳ್ಳಲು ಸಹಾಯ ಮಾಡುತ್ತದೆ. ಮತ್ತು ಅಮೂಲ್ಯವಾದ ಖನಿಜ ನಿಕ್ಷೇಪಗಳೊಂದಿಗೆ ಸಂಬಧಿಸಿದ ವಾಹಕ ವಲಯಗಳನ್ನು ಸೂಚಿಸುತ್ತದೆ. ಇದು ಭಾರತದ ಖನಿಜ ಪರಿಶೋಧನಾ ಸಾಮರ್ಥ್ಯಗಳನ್ನು ಹೆಚ್ಚಿಸಲು ಮತ್ತು ಅದರ ಗಣಿಗಾರಿಕೆ ಕ್ಷೇತ್ರದ ಸುಸ್ಥಿರ ಅಭಿವೃದ್ಧಿಗೆ ಕೊಡುಗೆ ನೀಡುವ ವಿಶಾಲ ಉಪಕ್ರಮದ ಒಂದು ಭಾಗವಾಗಿದೆ.

ಮೆಸ್ಸರ್ಸ್ ಎಕ್ಸ್ಕಾಲಿಬರ್ ಮೆರ್ಕ್‌ಫಾ ಪ್ರೈವೇಟ್ ಲಿಮಿಟೆಡ್ ಹೆಲಿಬೋರ್ನ್ ಟೈಮ್ ಡೊಮೇನ್ ಎಲೆಕ್ಟ್ರೋಮ್ಯಾಗ್ನೆಟಿಕ್ (ಟಿಡಿಇಎಮ್) ಮತ್ತು ಮ್ಯಾಗ್ನೆಟಿಕ್ ಸಮೀಕ್ಷೆಗಳಿಗಾಗಿ ಯೋಜನಾ ಅನುಷ್ಠಾನ ಸಂಸ್ಥೆ (ಪಿಐಎ) ಆಗಿದೆ.

ಯೋಜನೆಯ ಪೂರ್ಣಗೊಂಡ ನಂತರ ಈ ಅಮೂಲ್ಯ ದತ್ತಾಂಶ ಸರ್ಕಾರ ಮತ್ತು ಖಾಸಗಿ ಪರಿಶೋಧನಾ ಸಂಸ್ಥೆಗಳಿಗೆ ರಾಷ್ಟ್ರೀಯ ಭೂವಿಜ್ಞಾನ ದತ್ತಾಂಶ ಸಂಗ್ರಹಣಾ ಪೋರ್ಟಲ್ (ಎನ್‌ಜಿಡಿಆರ್) ಮೂಲಕ ಲಭ್ಯವಾಗುವಂತೆ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಲಾಗುವುದು.

ಈ ಸಮೀಕ್ಷೆಯ ಸಂಶೋಧನೆಗಳನ್ನು ಪರಿಶೋಧನಾ ತಂತ್ರಗಳನ್ನು ಪರಿಷ್ಕರಿಸಲು ಮತ್ತು ಭವಿಷ್ಯದ ಸಂಪನ್ಮೂಲ ಅಭಿವೃದ್ಧಿ ಯೋಜನೆಗಳನ್ನು ಬೆಂಬಲಿಸಲು ಬಳಸಲಾಗುತ್ತದೆ ಎಂದು ಭಾರತದ ಭೂವೈಜ್ಞಾನಿಕ ಸಮೀಕ್ಷೆಯ ಭೂಬೌತಶಾಸ್ತ್ಜ್ಞರಾದ ಎಮ್.ನಾಗದಿವ್ಯಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಧ್ಯಪ್ರಾಚ್ಯ ದೇಶಗಳಲ್ಲಿನ ಬಿಕ್ಕಟ್ಟು -ರಾಯಚೂರು ಜಿಲ್ಲೆಯ ಪ್ರಯಾಣಿಕರ ನೆರವಿಗಾಗಿ ಸಹಾಯವಾಣಿ

ರಾಯಚೂರು,ಮಾ.02 ಮಾರ್ಚ್.01(ಕರ್ನಾಟಕ ವಾರ್ತೆ)

ಮಧ್ಯಪ್ರಾಚ್ಯದ ಕೆಲವು ದೇಶಗಳಲ್ಲಿ ಪ್ರಚಲಿತದಲ್ಲಿರುವ ಅಸ್ಥಿರ ಪರಿಸ್ಥಿತಿಯಿಂದಾಗಿ ಅಂತರಾಷ್ಟ್ರೀಯ ವಿಮಾನಯಾನ ಸೇವೆಗಳಲ್ಲಿ ವ್ಯತ್ಯಯ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ರಾಯಚೂರು ಜಿಲ್ಲೆಯ ಸಾರ್ವಜನಿಕರ ಹಿತದೃಷ್ಟಿಯಿಂದ ಜಿಲ್ಲಾಡಳಿತವು ಈ ಕೆಳಗಿನ ಮಾಹಿತಿಯನ್ನು ಹಂಚಿಕೊಂಡಿದೆ:

ವೈಮಾನಿಕ ನಿರ್ಬಂಧ ಮತ್ತು ಪ್ರಚಲಿತ ಸ್ಥಿತಿ

ಇರಾನ್, ಇಸ್ರೇಲ್, ಲೆಬನಾನ್, ಸೌದಿ ಅರೇಬಿಯಾ ಸೇರಿದಂತೆ ಒಟ್ಟು 11 ದೇಶಗಳ ವೈಮಾನಿಕ ಮಾರ್ಗಗಳನ್ನು () ಮಾರ್ಚ್ 2ರವರೆಗೆ ಮುಚ್ಚಲಾಗಿದೆ.

ಈ ಅನಿರೀಕ್ಷಿತ ಅಡಚಣೆಯಿಂದಾಗಿ ಹಾಗೂ ಕರ್ನಾಟಕದ ಅನೇಕ ಪ್ರಯಾಣಿಕರು ಯುಎಇ (ದುಬೈ) ಸೇರಿದಂತೆ ವಿವಿಧ ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಸಿಲುಕಿಕೊಂಡಿದ್ದಾರೆ.

ಜಿಲ್ಲಾಡಳಿತದ ಕ್ರಮಗಳು :

ಮಾನ್ಯ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರ ನಿರ್ದೇಶನದಂತೆ, ರಾಜ್ಯ ಮತ್ತು ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ 247 ಕಾರ್ಯನಿರ್ವಹಿಸುತ್ತಿವೆ.

ವಿದೇಶಾಂಗ ವ್ಯವಹಾರಗಳ ಸಚಿವಾಲಯ ಮತ್ತು ಭಾರತೀಯ ರಾಯಭಾರಿ ಕಚೇರಿಗಳು ನೀಡುವ ಸೂಚನೆಗಳನ್ನು ಜಿಲ್ಲಾಡಳಿತವು ನಿರಂತರವಾಗಿ ಗಮನಿಸುತ್ತಿದೆ.

ಸಹಾಯವಾಣಿ ಸಂಖ್ಯೆಗಳಿಗೆ

ರಾಯಚೂರು ಜಿಲ್ಲೆಯ ನಿವಾಸಿಗಳು ಅಥವಾ ಅವರ ಸಂಬಂಧಿಕರು ಹೆಚ್ಚಿನ ಮಾಹಿತಿಗಾಗಿ ಮತ್ತು ಸಹಾಯಕ್ಕಾಗಿ ಸಂಪರ್ಕಿಸಬಹುದು:

ರಾಯಚೂರು ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ 08532-226383 ಅಥವಾ

ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ 080-22340676, 080-22253707 , ಟೋಲ್ ಫ್ರೀ ಸಂಖ್ಯೆ: 1070 ಗೆ ಕರೆ ಮಾಡಿ ಮಾಹಿತಿ ಹಾಗೂ ಸಹಾಯ ಪಡೆಯಬಹುದು.

ಸಾರ್ವಜನಿಕರಿಗೆ ಪ್ರಮುಖ ಸೂಚನೆಗಳು:

ಮಧ್ಯಪ್ರಾಚ್ಯ ದೇಶಗಳಲ್ಲಿರುವ ಕರ್ನಾಟಕದ ನಿವಾಸಿಗಳು ಹಾಗೂ ಜಿಲ್ಲೆಯವರಿದ್ದಲ್ಲಿ ಅಲ್ಲಿನ ಸ್ಥಳೀಯ ಸರ್ಕಾರಗಳು ನೀಡುವ ಸುರಕ್ಷತಾ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

ಸಂಕಷ್ಟದಲ್ಲಿರುವವರು ಆಯಾ ದೇಶದ ಭಾರತೀಯ ರಾಯಭಾರಿ ಕಚೇರಿಯ ಸಹಾಯವಾಣಿಗೆ ಕರೆ ಮಾಡಬೇಕು ಅಥವಾ 'ಸಾರಥಿ ಸಹಾಯತಾ' ( ) ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬೇಕು.

ವೀಸಾ ಸಂಬಂಧಿತ ಸಮಸ್ಯೆಗಳಿದ್ದಲ್ಲಿ ಹತ್ತಿರದ ಎಫ್.ಆರ್.ಆರ್.ಒ () ಕಚೇರಿಯನ್ನು ಸಂಪರ್ಕಿಸಬೇಕೆಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಜಗದ್ಗುರು ಶ್ರೀ ರೇಣುಕಾಚಾರ್ಯರು ೀರಶೈವ ಧರ್ಮದ ಮಹಾನ್ ಶರಣರು : ಸಮಾನತೆಯ ಪ್ರತೀಕ

ಯಾದಗಿರಿ, ಮಾ.02-

ಜಗದ್ಗುರು ಶ್ರೀ ರೇಣುಕಾಚಾರ್ಯರು ೀರಶೈವ ಧರ್ಮದ ಮಹಾನ್ ಶರಣರಾಗಿದ್ದು, ಇವರ ತತ್ವ,ಸಿದ್ದಾಂತ, ಬದುಕು ಮತ್ತು ಧಾರ್ಮಿಕ ಸಾಧನೆಗಳು ಭಾರತೀಯ ಇತಿಹಾಸದಲ್ಲಿ ಮಹತ್ವಪೂರ್ಣ ಸ್ಥಾನ ಪಡೆದಿವೆ ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಹೇಳಿದರು.

ನಗರದ ಲಕ್ಷ್ಮೀ ದೇವಸ್ಥಾನದಲ್ಲಿ ಜಿಲ್ಲಾಡಳಿತ, ಜಿಪಂ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶ್ರೀ ರೇಣುಕಾಚಾರ್ಯ ಜಯಂತ್ಯೋತ್ಸವ ಸುತಿ ಸಂಯುಕ್ತಾಶ್ರಯದಲ್ಲಿ ಭಾನುವಾರ ಆಯೋಜಿಸಿದ್ದ ಜಗದ್ಗುರು ಶ್ರೀ ರೇಣುಕಾಚಾರ್ಯರ ಜಯಂತ್ಯೋತ್ಸವ ಕಾರ್ಯಕ್ರಮ ಅಂಗವಾಗಿ ಅವರ ಭಾವಚಿತ್ರಕ್ಕೆ ಮಾರ್ಲಾಣೆ ಮಾಡಿಗೌರವ ಅರ್ಪಿಸಿ ಅವರು ಮಾತನಾಡಿದರು.

ಇವರ ಬದುಕು ಮತ್ತು ತತ್ವಗಳನ್ನು ವರಿಸುವ ಹಲವು ಪುರಾಣಗಳು ಮತ್ತು ಗ್ರಂಥಗಳು ಕನ್ನಡದಲ್ಲಿವೆ. ಜಗದ್ಗುರು ಶ್ರೀರೇಣುಕಾಚಾರ್ಯರು ಆಂಧ್ರ ಪ್ರದೇಶದ ಕೊಲ್ಲಿಪಾಕ್ ಎಂಬ ಸ್ಥಳದಲ್ಲಿ ಹುಟ್ಟಿದರೆಂದು ನಂಬಲಾಗಿದೆ. ಕೆಲವೊಂದು ಗ್ರಂಥಗಳು ಇವರನ್ನು ಪರಮಶಿವನ ಅವತಾರ ಎಂದು ಗುರುತಿಸುತ್ತವೆ ಎಂದರು.

ರೇಣುಕಾಚಾರ್ಯರು ಬಾಲ್ಯದಲ್ಲೇ ಭಕ್ತಿಂದ ಪರಿಪೂರ್ಣರಾಗಿದ್ದರು. ಋುಗಳ ಜೊತೆಯಲ್ಲಿ ನಿರಂತರ ಜ್ಞಾನಸಾಧನೆ ಮಾಡಿ, ಶೈವ ತತ್ವಗಳನ್ನು ಆಳವಾಗಿ ಅಧ್ಯಯನ ಮಾಡಿದ್ದರು. ಅವರ ತತ್ವಾದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕೆಂದರು.

ಯುವ ಮುಖಂಡ ಮಹೇಶರೆಡ್ಡಿ ಮುದ್ನಾಳ್ ಮಾತನಾಡಿ, ಜಗದ್ಗುರು ರೇಣುಕಾಚಾರ್ಯರ ತತ್ವಗಳು ಇಂದು ಸಮಾಜದ ಸಮಾನತೆ, ಧಾರ್ಮಿಕ ಸಾಮರಸ್ಯ ಮತ್ತು ಆಧ್ಯಾತ್ಮಿಕ ಪ್ರಗತಿಗೆ ಆಧುನಿಕ ದಾರಿದೀಪದಂತಿವೆ ಎಂದರು.



ಶೈವ ತತ್ವಶಾಸ್ತ್ರವನ್ನು ಜನಸಾಮಾನ್ಯರಿಗೆ ಪರಿಚುಸಿ, ಅದನ್ನು ಜೀವನದ ಭಾಗವನ್ನಾಗಿ ಮಾಡಿದ ಮಹಾನ್ ಶರಣ. ಇವರ ಬದುಕು ಮತ್ತು ತತ್ತ್ವಗಳು ಕನ್ನಡ ಸಮಾಜಕ್ಕೆ ಮಾತ್ರವಲ್ಲ, ಶ್ವಕ್ಕೆ ಪ್ರಾಮುಖ್ಯತೆಯನ್ನು ಹೊಂದಿವೆ ಎಂದು ಅವರು ಹೇಳಿದರು.

ಉಪನ್ಯಾಸ ನೀಡಿದ ಉಪನ್ಯಾಸಕಿ ಜ್ಯೋತಿ ಲತಾ ತಡಿಬಿಡಿ ಮಠ, ರೇಣುಕಾಚಾರ್ಯರು ಶೈವ ತತ್ವಶಾಸ್ತ್ರವನ್ನು ಜನಸಾಮಾನ್ಯರಿಗೆ ತಲುಪಿಸಲು ಹಾಗೂ ಅದನ್ನು ದೈನಂದಿನ ಜೀವನದ ಭಾಗವನ್ನಾಗಿ ಮಾಡಲು ಶ್ರುಸಿದರು.

ಅವರು ಇಷ್ಟಲಿಂಗ ಧಾರಣೆಯ ಮೂಲಕ ಭಗವಂತನನ್ನು ವೈಯಕ್ತಿಕ ಅನುಭವದ ಮೂಲಕ ಅರಿತುಕೊಳ್ಳಬೇಕೆಂಬ ತತ್ವವನ್ನು ಪ್ರಚಾರ ಮಾಡಿದರು.

ಅಹಂ ಬ್ರಹ್ಮಾಸ್ಮಿ ಮತ್ತು ಶಿವೋಹಂ ಎಂಬ ತತ್ವಗಳಿಗೆ ೀರಶೈವ ಚಿಂತನೆಗಳಲ್ಲಿ ಹೆಚ್ಚಿನ ಪ್ರಾಮುಖ್ಯತೆ ನೀಡಿದರು. ಅವಮಾನಿತ ವರ್ಗಗಳನ್ನು ಪ್ರೀತಿಸಿ, ಅವರಿಗೆ ತತ್ವಶಾಸ್ತ್ರದ ಮತ್ತು ಧಾರ್ಮಿಕ ಶಿಕ್ಷಣವನ್ನು ನೀಡಿದರು. ಅವರ ತತ್ತ್ವಗಳು ಇ?ಲಿಂಗವನ್ನು ಧರಿಸುವ ಮೂಲಕ ನಿತ್ಯ ಶಿವನೊಂದಿಗೆ ಸಂಬಂಧವನ್ನು ಕಾಪಾಡಬೇಕೆಂಬ ತತ್ವವನ್ನು ಅವರು ಬೋಧಿಸಿದರು. ಶೈವ ಸಮುದಾಯವನ್ನು ಶ್ರೇ?ತೆಯ ಮೇಲ್ಮಟ್ಟಕ್ಕೆ ತರಲು ಶ್ರುಸಿದರೆಂದರು.

ಕಾರ್ಯಕ್ರಮದಲ್ಲಿ ಕೌಳೂರು ಮಠದ ಶ್ರೀಗಳಾದ ಸಿದ್ದರಾಮ ದೇವರು, ಕಡೆಚೂರಿನ ಶ್ರೀ ಗುರು ಮೂರ್ತಿ, ಅಬ್ಬೆತುಮಕೂರರಿನ ಶಿವಶೇಖರ ಶಿವಾಚಾರ್ಯ, ಯುಡಾ ಅಧ್ಯಕ್ಷ ಬಾಬುರಾವ ಕಾಡ್ಲೂರ್, ತಹಸೀಲ್ದಾರ ಸುರೇಶ ಅಂಕಲಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇ ಮಠಪತಿ, ಲಕ್ಷ್ಮಿ ದೇವಸ್ಥಾನ ಅಧ್ಯಕ್ಷ ಸದಾಶಿವಪ್ಪ ಚಂದನಕೇರಾ, ಜಂಗಮ ಸಮಾಜದ ಅಧ್ಯಕ್ಷ ಚನ್ನೀರಯ್ಯ ಸ್ವಾ ಕೌಳ್ಳೂರು, ಮಲ್ಲಣ್ಣಗೌಡ ಕೌಳ್ಳೂರ್, ಮಹೇಶ ಸ್ವಾ, ಶ್ವನಾಥಯ್ಯ ನಾಯ್ಕಲ್ ಸೇರಿದಂತೆ ಇತರರಿದ್ದರು. ಆರಂಭದಲ್ಲಿ ಲಕ್ಷ್ಮೀ ದೇವಸ್ಥಾನದಿಂದ ಶ್ರೀ ರೇಣುಕಾಚಾರ್ಯ ಅವರ ಭಾವಚಿತ್ರದ ಅದ್ದೂರಿ ಮೆರವಣಿಗೆ ನಡೆುತು.

ಹೋಳಿ ಶಾಂತತಾ ಸಭೆ 5 ರಿಂದ 7 ವರೆಗೆ ಮೂರು ದಿನ ಹೋಳಿ ಸಂಭ್ರಮ

ಸೌಹಾರ್ದತೆಯಿಂದ ಹೋಳಿ ಹಬ್ಬ ಆಚರಿಸಲು ಡಿಸಿ ಕರೆ



ಬಾಗಲಕೋಟೆ,ಫೆ.28-

ಸಹೋದರತ್ವ ಮತ್ತು ಸೌಹಾರ್ದತೆಗೆ ಪ್ರತೀಕವಾದ ಹೋಳಿ ಹಬ್ಬವನ್ನು ಶಾಂತಿಯುತವಾಗಿ, ಪರಸ್ಪರ ಗೌರವದಿಂದ ಹಬ್ಬವನ್ನು ಆಚರಿಸಬೇಕೆಂದು ಜಿಲ್ಲಾಧಿಕಾರಿ ಸಂಗಪ್ಪ ಕರೆ ನೀಡಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಶನಿವಾರ ಹೋಳಿ ಹಬ್ಬದ ಕುರಿತು ಜರುಗಿದ ಶಾಂತತಾ ಸಭೆಯ ಅದ್ಯಕ್ಷತೆ ವಹಿಸಿ ಮಾತನಾಡಿದ ಅವರು ಹೋಳಿ ಆಚರಣೆಯಲ್ಲಿ ಕಲಕತ್ತಾ ಹೊರತುಪಡಿಸಿದರೆ ದೇಶದಲ್ಲಿಯೇ ಬಾಗಲಕೋಟೆ ಎರಡನೇ ಸ್ಥಾನದಲ್ಲಿದೆ. ಈ ಐತಿಹಾಸಿ ಹೋಳಿಯನ್ನು ಯಾವುದೇ ಅಹಿತಕರ ಘಟನೆಗೆ ಅವಕಾಶ ಕೊಡದೇ ಶಾಂತಿ ಹಾಗೂ ಸಂಭ್ರಮದಿಂದ ಆಚರಿಸು ವಂತೆ ಜಿಲ್ಲಾಧಿಕಾರಿಗಳು ಕರೆ ನೀಡಿದರು.

ಹಬ್ಬದ ಆಚರಣೆಗೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಎಲ್ಲ ರೀತಿಯ ಸಹಕಾರ ನೀಡಲಾಗುತ್ತಿದೆ. ಹಬ್ಬದ ಬಂದೋಬಸ್ತಗಾಗಿ ಹೊರಗಡೆಯಿಂದ ಬಂದ ಪೊಲೀಸ್ ಸಿಬ್ಬಂದಿಗಳಿಗೆ ಜೊತೆಗೆ ಸ್ಥಳೀಯ ಪೊಲೀಸ್ ಸಿಬ್ಬಂದಿಗಳನ್ನು ಸಹ ನಿಯೋಜಿಸಲಾಗುತ್ತಿದ್ದು, ಹಬ್ಬದ ಯಶಸ್ವಿಗೆ ಎಲ್ಲರೂ ಸಹಕರಿಸಬೇಕು. ಯಾವುದೇ ಅಹಿತಕರ ಘಟನೆಗೆ ಅವಕಾಶ ಕೊಡಬಾರದು. ಹಬ್ಬದ ಆಚರಣೆ ಹಿನ್ನಲೆಯಲ್ಲಿ ನಗರಸಭೆಯಿಂದ ಅಗತ್ಯ ಸ್ವಚ್ಛತೆ ಕ್ರಮ, ನೀರಿನ ವ್ಯವಸ್ಥೆ ಕೂಡಾ ಮಾಡಲಾಗುವುದೆಂದರು.

ಹೋಳಿ ಸಮಿತಿಯ ಪ್ರತಿನಿಧಿ ಮಹಾಬಳೇಶ ಗುಡಗುಂಟಿ ಮಾತನಾಡಿ ಮಾರ್ಚ 3 ರಿಂದ ಹೋಳಿ ಹಬ್ಬ ಪ್ರಾರಂಭಗೊಳ್ಳುತ್ತಿದ್ದು, ಮಾರ್ಚ 4 ರಂದು ಕಾಮದಹನವಾಗುತ್ತದೆ. ಮಾರ್ಚ 5 ರಿಂದ 7 ವರೆಗೆ ಮೂರು ದಿನಗಳ ಕಾಲ ಬಣ್ಣದೋಕುಳಿ ಜರು ಗಲಿದೆ. 5 ರಂದು ಕಿಲ್ಲಾ, ನವನಗರ ಹಾಗೂ ವಿದ್ಯಾಗಿರಿ, 6 ರಂದು ಹಳಪೇಟೆ, ಜೈನ ಪೇಟೆ ಹಾಗೂ ವೆಂಕಟಪೇಟೆ, 7 ರಂದು ಹೊಸಪೇಟೆ ಓಣಿಯಲ್ಲಿ ಬಣ್ಣದೋಕುಳಿ ನಡೆಯ ಲಿದೆ ಎಂದರು.

ಇದರ ಜೊತೆಗೆ ಸೋಗಿನ ಬಂಡಿ ಮೆರವಣಿಗೆ ಕೂಡಾ ಜರುಗಲಿದ್ದು, 4 ಕಿಲ್ಲಾ, 5 ಹಳಪೇಟೆ, 6 ಹೊಸಪೇಟೆ, 7 ಜೈನ ಪೇಟೆ, 8 ವೆಂಕಟಪೇಟೆ, ನವನಗರ ಹಾಗೂ ವಿದ್ಯಾಗಿರಿಯಲ್ಲಿ ನಡೆಯಲಿದೆ. 6 ರಂದು ನಗರದ ಬಸವೇಶ್ವರ ವೃತ್ತದ ಬಳಿ ಇರುವ ಹೋಳೆ ಆಂಜನೇಯ ದೇವಸ್ಥಾನದ ಆವರಣ ಹಾಗೂ 7 ರಂದು ಕಿಲ್ಲಾ ಅಂಬಾಭವಾನಿ ದೇವಸ್ಥಾನದ ಬಳಿ ರೇನ್‌ಡ್ಯಾನ್ಸ್ ನಡೆಯಲಿದೆ ಎಂದು ತಿಳಿಸಿದರು.

ಎ.ಎ.ದಂಡಿಯಾ, ಸಿಕಂದರ ಅಥಣಿ ಮಾತನಾಡಿ ರಂಜಾನ ತಿಂಗಳು ಆರಂಬಗೊಂಡು ಇದೇ ಸಮಯದಲ್ಲಿ ಹೋಳಿ ಹಬ್ಬ ಬಂದಿರುವದರಿಂದ ಎರಡು ಹಬ್ಬಗಳನ್ನು ಸೌಹಾರ್ದಿತವಾಗಿ ಸಂಭ್ರಮದಿಂದ ಆಚರಿಸಲಾಗುವುದೆಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋ ಯಲ್, ಅಪರ ಜಿಲ್ಲಾಧಿಕಾರಿ ಅಶೋ ಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಡಿವಾ ಯ್‌ಎಸ್‌ಪಿ ಗಜಾನನ ಸುತಾರ, ತಹಶೀಲ್ದಾರ ವಾಸುದೇವ ಸ್ವಾಮಿ ಸೇರಿದಂತೆ ಹೋಳಿ ಸಮಿತಿಯ ಪ್ರತಿನಿಧಿಗಳಾದ ಕಳಕಪ್ಪ ಬಾದ ವಾಡಗಿ, ಅಶೋಕ ಲಿಂಬಾವಳಿ, ಸಂಜೀವ ವಾಡಕರ, ನಾಗರಾಜ ಹದ್ಲಿ, ಪ್ರವೀಣ ಖಾತೇದಾರ, ರಾಜು ನಾಯಕ, ರವಿ ಕುಮಟಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

121 ನೇ ದಿನದ ಧರಣಿ ಅಂತ್ಯ ; ಹೋರಾಟಕ್ಕೆ ಹೊಸರೂಪಕ್ಕೆ ಸಲಹೆ

ಕೊಪ್ಪಳ,ಮಾ.02-

ನಗರಸಭೆ ಮುಂಭಾಗದಲ್ಲಿ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ಹಮ್ಮಿಕೊಂಡಿರುವ 121 ನೇ ದಿನದ ಬಲ್ಡೋಟ ತೊಲಗಿಸಿ ಧರಣಿಯಲ್ಲಿ ಅನೇಕ ಮುಖಂಡರು ವಿಭಿನ್ನ ಹೊಸರೂಪದ ಹೋರಾಟಕ್ಕೆ ಸಲಹೆ ನೀಡಿದರು. ರಾಜ್ಯೋತ್ಸ ವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಹೆಚ್. ಎಸ್. ಪಾಟೀಲ್ ಅವರು ಮಾತನಾಡಿ, ಕೇಂದ್ರ ಎನ್.ಡಿ.ಎ. ಮತ್ತು ರಾಜ್ಯ ಕಾಂಗ್ರೆಸ್ ಸರ್ಕಾರಗಳು ಒಬ್ಬರ ಮೇಲೊಬ್ಬರು ಹಾಕಿ ಇಷ್ಟು ದೊಡ್ಡ ಸಂಖ್ಯೆಯ ಜನರ ಆರೋಗ್ಯದ ಭವಿಷ್ಯವನ್ನು ಹಾಳು ಮಾಡುತ್ತಿದ್ದಾರೆ. ಅತ್ತ ಕೈಗಾರಿಕಾ ಮಂತ್ರಿ ಎಂ.ಬಿ. ಪಾಟೀಲ್ ಇನ್ನೂ ಕೊಪ್ಪಳಕ್ಕೆ ಬಂದು ಜನರ ಮನವೊಲಿಸುತ್ತೀನಿ, ಗವಿಶ್ರೀಗಳನ್ನು ಭೇಟಿ ಮಾಡಿ ಮಾತುಕತೆ ಮಾಡುತ್ತೀನಿ ಅನ್ನುತ್ತಿರುವದು ಅತ್ಯಂತ ಖೇದಕರ ಸಂಗತಿ. ಇಲ್ಲಿನ ಬಲ್ಡೋಟ ಮೊದಲು ಜಾಗ ಖಾಲಿ ಮಾಡಬೇಕು, ಅಲ್ಲಿಂದ ಉಳಿದ ಅನೇಕ ವಿಷಾನೀಲ ಉಗುಳುವ ಕಾರ್ಖಾನೆಗಳು ಹದ್ದುಬಸ್ತಿಗೆ ಬರಬೇಕು, ಯಾವುದೇ ಕಾರ್ಖಾನೆ ವಿಸ್ತರಣೆ ಆಗಬಾರದು ಎಂದರು.

ಜಂಟಿ ಕ್ರಿಯಾ ವೇದಿಕೆ ಸಂಚಾಲಕ ಮಂಜುನಾಥ ಜಿ. ಗೊಂಡಬಾಳ ಮಾತನಾಡಿ, ಕೊಪ್ಪಳ ಮತ್ತು ಭಾಗ್ಯನಗರಗಳಲ್ಲಿ ಬಲ್ಡೋಟ ಕಂಪನಿ ಜನರಿಗೆ ಹಾರುಬೂದಿ, ವಿಷಾನೀಲ, ಹೊಗೆ ಜೊತೆಗೆ ಮಂಕು ಬೂದಿ ಸಹ ಎರಚಲು ಜನರಿಗೆ ಸಣ್ಣ ಕೊಡುಗೆ ನೀಡಿ ಮರಳು ಮಾಡಲು ಪ್ರಯತ್ನ ಮಾಡುತ್ತಿದೆ, ಅದರ ಭಾಗವಾಗಿ ಸಿಮೆಂಟ್ ಬೆಂಚ್, ಟ್ರೀ ಗಾಡ್9 ಹಾಕುತ್ತಿದೆ, ಗಿಡಕ್ಕೆ ಒಂದು ದಿನ ನೀರು ಹಾಕದಿದ್ದರೂ ತಾವೇ ಗಿಡ ಹಾಕೀವಿ ಅನ್ನುವ ಹಾಗೆ ನಡೆದುಕೊಳ್ಳುತ್ತಿದೆ. ಕೊಪ್ಪಳದಲ್ಲಿ ಗಿಡ ನೆಟ್ಟು ಪರಿಸರ ಉಳಿಸುವ ಕಾಯಕ ಮಾಡುತ್ತಿದ್ದಾರೆ, ಗವಿಶ್ರೀಗಳೇ ಕಾರ್ಖಾನೆ ಓಡಿಸುವ ಪಣ ತೊಟ್ಟಿದ್ದು, ಜನರು ಸ್ವಯಂ ಪ್ರೇರಣೆಯಿಂದ ತಮ್ಮ ಬಳಿ ಇರುವ ಈ ಸಿಮೆಂಟ್ ಬೆಂಚ್ ಮತ್ತು ಟ್ರೀ ಗಾರ್ಡ್ ವಾಪಸ್ ಕೊಡಿ, ಈಗಾಗಲೆ ವಾಪಸ್ ಕೊಡುವ ಕಾರ್ಯಕ್ರಮ ಆರಂಭ ಮಾಡಿದ್ದು ಶೀಘ್ರ ಎಲ್ಲವನ್ನೂ ವಾಪಸ್ ಮಾಡಲಾಗುತ್ತದೆ, ಹಾಗೇ ವಾಪಸ್ ಮಾಡಿದ ಸ್ಥಳದಲ್ಲಿ ಸಂಸದ ರಾಜಶೇಖರ ಹಿಟ್ನಾಳ ಅವರ ನಿಧಿಯಿಂದ ಕೊಡಿಸಲಾಗುತ್ತದೆ ಎಂದರು.

ಧರ್ಮ ವೃಕ್ಷದ ತಾಯ್ಬೇರು ಶ್ರೀ ಜಗದ್ಗುರು ರೇಣುಕಾಚಾರ್ಯರು - ಶ್ರೀ ರಂಭಾಪುರಿ ಜಗದ್ಗುರುಗಳು

ಬಾಳೆಹೊನ್ನೂರು, ಮಾ.02-

ಬದುಕಿನ ಉತ್ಕರ್ಷತೆ ಮತ್ತು ಶ್ರೇಯಸ್ಸಿಗೆ ಧರ್ಮಾಚರಣೆ ಮುಖ್ಯ. ಅರಿತು ಬಾಳುವುದರಿಂದ ಜೀವನದಲ್ಲಿ ಸುಖ ಶಾಂತಿ ಪ್ರಾಪ್ತವಾಗುತ್ತದೆ. ವಿಶ್ವ ಬಂಧುತ್ವವನ್ನು ಸಾರಿದ ವೀರಶೈವ ಧರ್ಮ ವೃಕ್ಷದ ತಾಯ್ಬೇರಾಗಿ ಜೀವನ ದರ್ಶನದ ಅಮೂಲ್ಯ ಕೊಡುಗೆಯನ್ನು ಕೊಟ್ಟ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಶಿವಾದ್ವೈತ ಸಮಾವೇಶ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ ಪ್ರದಾನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಕಲ ಜೀವರಾಶಿಗಳಿಗೆ ಸದಾ ಒಳಿತನ್ನೇ ಬಯಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರು ಸತ್ಯ ಸಾಕ್ಷಾತ್ಕಾರ ಪಡೆದ ಪರಮಾಚಾರ್ಯರು. ಅವರ ನಡೆ ನುಡಿಗಳಲ್ಲಿ ಸತ್ಯದ ಬೆಳಕನ್ನು ಕಾಣುತ್ತೇವೆ. ಸತ್ಯವೇ ಅವರ ಜೀವನದ ಉಸಿರು ಹಸಿರು. ಜೀವ ಶಿವನಾಗುವ ಅಂಗ ಲಿಂಗವಾಗುವ ನರ ಹರನಾಗುವ ಭವಿ ಭಕ್ತನಾಗುವ ಆಧ್ಯಾತ್ಮ ಜ್ಞಾನವನ್ನು ಬೋಧಿಸಿದ ಶ್ರೇಯಸ್ಸು ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಭಗವತ್ ಕ್ಷೇತ್ರದಲ್ಲಿ ಅರಳಿದ ಅಮರ ಪುಷ್ಪ ಅವರು. ಸತ್ಯಾನುಭೂತಿಗಾಗಿ ಸಮಸ್ತ ಜಗತ್ತನ್ನೇ ಸರಿಸಿ ಬಂದವರೇ ಶ್ರೀ ಜಗದ್ಗುರು ರೇಣುಕಾಚಾರ್ಯರು. ಬ್ರಹ್ಮಾಂಡವನ್ನು ಸೂರ್ಯ ಬೆಳಗಿದರೆ ಪಿಂಡಾಂಡವನ್ನು ಪರಿಶುದ್ಧಗೊಳಿಸಿದ ಮಹಾತ್ಮರು ಜಾತಿ ಮತ ಪಂಥಗಳ ಗಡಿಯನ್ನು ಮೀರಿ ಮಾನವೀಯತೆಯ ಆದರ್ಶ ಮೌಲ್ಯಗಳನ್ನು ಬೆಳೆಸಿದ್ದನ್ನು ಮರೆಯಲಾಗದು. ಧಾರ್ಮಿಕ ಜಾಗೃತಿಯ ಜೊತೆಗೆ ಸಾಮಾಜಿಕ ಸತ್ಕಾಂತಿ ಎಸಗಿದ ಪ್ರಥಮಾಚಾರ್ಯರು. ಮಹಾಮುನಿ ಅಗಸ್ತ್ಯರಿಗೆ ಶಿವಾದ್ವೈತ ಸಿದ್ಧಾಂತ ಜ್ಞಾನವನ್ನು ಬೋಧಿಸಿ ಉದ್ಧರಿಸಿದ ಮಹಾನುಭಾವರು. ಅಷ್ಟಾವರಣ ಪಂಚಾಚಾರ ಮತ್ತು ಷಟ್ಸ್ಥಲಗಳ ಮೂಲಕ ಜೀವಾತ್ಮ ಪರಮಾತ್ಮನೆಡೆಗೆ ಕರೆದೊಯ್ಯುವ ಸನ್ಮಾರ್ಗ ತೋರಿದ ಶ್ರೀ ಜಗದ್ಗುರು ರೇಣುಕಾಚಾರ್ಯರನ್ನು ಸದಾ ಸ್ಮರಿಸುವ ಭಾವನೆ ಬೆಳೆದು ಬರಬೇಕಾಗಿದೆ. ವೀರಶೈವ ಧರ್ಮದ ಪ್ರಾಚೀನತೆ ಮತ್ತು ಪರಂಪರೆಯ ಜೊತೆಗೆ ಆಧುನಿಕ ಜೀವ ಜಗತ್ತಿಗೆ ಅನ್ವಯಿಸುವ ಜಾಗೃತ ವಿಚಾರಗಳನ್ನು ಹೊಂದಿದ ಶ್ರೇಷ್ಠ ಚಿಂತಕ ರವಿ ಹಂಜ್ ಅವರಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯ ಅತ್ಯುನ್ನತ ಪ್ರಶಸ್ತಿ ಕೊಟ್ಟಿರುವುದು ತಮಗೆ ತೃಪ್ತಿ ತಂದಿದೆ ಎಂದರು.

51 ಅಡಿ ಎತ್ತರದ ಶ್ರೀ ಜಗದ್ಗುರು ರೇಣುಕಾಚಾರ್ಯರ ಮಂಗಲ ಮೂರ್ತಿಯ ಪ್ರತಿಷ್ಠಾಪನೆ ಕಾರ್ಯಕ್ಕೆ ಭೂಮಿ ಪೂಜೆ ಸಲ್ಲಿಸಿ ಬಾಳೆಹೊನ್ನೂರು-ಶ್ರೀ ರಂಭಾಪುರಿ ಪೀಠದ ರಸ್ತೆ



ಅನಾವರಣಗೊಳಿಸಿ ಶಿವಾದ್ವೈತ ಸಿದ್ಧಾಂತ ಸಮಾವೇಶ ಉದ್ಘಾಟಿಸಿದ ರಾಜ್ಯದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ ಇದು ನನ್ನ ಜೀವನದ ಬಹು ದೊಡ್ಡ ಸೌಭಾಗ್ಯ. ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಶಿವಾದ್ವೈತ ಸಮಾವೇಶ ಉದ್ಘಾಟಿಸುವ ಅಹೋಭಾಗ್ಯ ಪ್ರಾಪ್ತವಾಗಿರುವುದು ಗುರು ಭಕ್ತಿಯ ಶಕ್ತಿಯೇ ಕಾರಣವೆಂದು ನಂಬಿರುತ್ತೇನೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ತತ್ವ ಸಿದ್ಧಾಂತಗಳು ಜೀವ ಜಗತ್ತಿನ ವಿಕಾಸಕ್ಕೆ ಅಡಿಪಾಯವಾಗಿವೆ. ಮಾನವ ಧರ್ಮಕ್ಕೆ ಜಯವಾಗಲಿ. ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ಸಾರಿದ ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ವಾಣಿಯನ್ನು ಯಾರೂ ಮರೆಯಲಾಗದು. ವೀರಗಂಗಾಧರ ಜಗದ್ಗುರುಗಳ ಆಶೀರ್ವಾದ ತಮ್ಮ ಬದುಕನ್ನೇ ಬದಲಾಯಿಸಿದೆ. ಧರ್ಮ ಪರಂಪರೆಯನ್ನು ಉಳಿಸಿ ಬೆಳೆಸಿಕೊಂಡು ಹೋಗುವ ಅವಶ್ಯಕತೆಯಿದೆ. ಶ್ರೀ ರಂಭಾಪುರಿ ಪೀಠ ಕ್ರಿಯಾಕರ್ತೃತ್ವ ಶಕ್ತಿ ದೊಡ್ಡದು. ಇಂದು ಮಠದ ಭಕ್ತನಾಗಿ ಇಲ್ಲಿಗೆ ಬಂದಿದ್ದೇನೆ. ಕ್ಷೇತ್ರದ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಸಹಕರಿಸುವೆ ಎಂದರು.

ಬಿ.ಜೆ.ಪಿ.ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ ವೀರಶೈವ ಪಂಚ ಪೀಠಗಳು ರಾಷ್ಟ್ರೀಯ ಗುರು ಪೀಠಗಳಾಗಿವೆ. ಶ್ರೀ ಜಗದ್ಗುರು ರೇಣುಕಾಚಾರ್ಯರಿಂದ ಸಂಸ್ಥಾಪಿತಗೊಂಡ ಪೀಠವೇ ಶ್ರೀಮದ್ ರಂಭಾಪುರಿ ಪೀಠ. ಸಾಮರಸ್ಯ ಸೌಹಾರ್ದತೆಯ ಬದುಕಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಕೊಟ್ಟ ಕೊಡುಗೆ ಅಪಾರ. ಶ್ರೀ ರಂಭಾಪುರಿ ಜಗದ್ಗುರುಗಳು ಸಮಾಜವನ್ನು ತಿದ್ದಿ ತೀಡಿ ಜನತೆಯನ್ನು ಸನ್ಮಾರ್ಗದತ್ತ ಕರೆದೊಯ್ಯುವ ಮಹತ್ಕಾರ್ಯ ಮಾಡುತ್ತಿದ್ದಾರೆ. ಸಮಾಜವನ್ನು ಒಡೆದಾಳುವ ನೀತಿಯನ್ನು ಧಿಕ್ಕರಿಸಿ ಒಗ್ಗಟ್ಟಿನಿಂದ ಒಂದಾಗಿ ಬಾಳುವ ಮೂಲಕ ಸಮಾಜದ ಹಿತದೃಷ್ಟಿಯಿಂದ ಮುಂದುವರಿಯೋಣ ಎಂದ ಅವರು ಮಲಯಾಚಲ ಸುಂದರ ಪರಿಸರದಲ್ಲಿ 51 ಅಡಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಶಿಲಾಮಂಗಲ ಮೂರ್ತಿ ಸ್ಥಾಪನೆಗೊಳಿಸುವ ಕಾರ್ಯ ಪ್ರಾರಂಭವಾಗಿದ್ದು ಸಂತೋಷ ತಂದಿದೆ. ಈ ಮಹತ್ಕಾರ್ಯಕ್ಕೆ ನೆರವು ಸಹಕಾರ ಕೊಡುವುದಾಗಿ ಭರವಸೆಯಿತ್ತರು.

ಭಾರತ ಸರಕಾರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ, ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಹ್ಲಾದ ಜೋಶಿ ಮಾತನಾಡಿ ಸಕಲ ಜೀವ ರಾಶಿಗಳಿಗೆ ಒಳ್ಳೆಯದನ್ನು ಬಯಸುವುದೇ ಮಹಾತ್ಮರ ಜೀವನದ ಗುರಿಯಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಹಿಂದೂ ಸಂಸ್ಕೃತಿಯನ್ನು ಬೆಳೆಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಮುಕ್ಕೋಟಿ ಗುರು ರೂಪ ಧರಿಸಿ ಶ್ರೀ ಲಂಕೆಯಲ್ಲಿ 3 ಕೋಟಿ ಶಿವಲಿಂಗಗಳನ್ನು ಸ್ಥಾಪಿಸಿದ ಕೀರ್ತಿ ಶ್ರೀ ಜಗದ್ಗುರು ರೇಣುಕರಿಗಿದೆ. ಇಂದಿನ ಜಗದ್ಗುರುಗಳವರು ನಿರಂತರ ಸಂಚರಿಸಿ ಜನರಲ್ಲಿ ಧಾರ್ಮಿಕ ಪ್ರಜ್ಞೆ ಮತ್ತು ರಾಷ್ಟ್ರ ಪ್ರಜ್ಞೆ ಬೆಳೆಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ ಎಂದರು.

ಅ.ಭಾ.ವೀರಶೈವ ಶಿವಾಚಾರ್ಯ ಸಂಸ್ಥೆ ಹೊರತಂದ ವೀರಶೈವ ಪರಂಪರೆ ಕೃತಿಯನ್ನು ಬಿಡುಗಡೆ ಮಾಡಿದ ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಮಾತನಾಡಿ ನನ್ನ ಬಹು ಜನ್ಮದ ಪುಣ್ಯದ ಫಲವೆಂದು ಭಾವಿಸುವೆ. ವೀರಶೈವ ಲಿಂಗಾಯತ ಎರಡೂ ಒಂದೇ ಎಂಬುದು ನಮ್ಮ ಗಟ್ಟಿ ಧ್ವನಿಯಾಗಿರಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರ ಧಾರೆಗಳು ಎಲ್ಲಾ ಕಾಲಕ್ಕೂ ಎಲ್ಲರಿಗೂ ಅನ್ವಯಿಸುತ್ತವೆ ಶ್ರೀ ಜಗದ್ಗುರುಗಳವರ ಸತ್ಯ ಸಂಕಲ್ಪಗಳು ಸಾಕಾರಗೊಳ್ಳುವ ಕಾರ್ಯ ನಡೆಯುತ್ತಿದೆ. ಆದಷ್ಟು ಬೇಗ ಕೈಕೊಂಡ ಕಾರ್ಯ ಪೂರ್ಣಗೊಳ್ಳಲಿ. ಆ ಮಹತ್ಕಾರ್ಯಕ್ಕೆ ನನ್ನ ಸಹಕಾರ ಇದೆ ಎಂದರು. ದಾವಣಗೆರೆ ನಗರದಲ್ಲಿ ಈ ಹಿಂದೆ ಪೀಠಾಚಾರ್ಯರ-ಶಿವಾಚಾರ್ಯರ ಶೃಂಗ ಸಮ್ಮೇಳನ ಅದ್ದೂರಿಯಾಗಿ ನೆರವೇರಿಸಿ ಕೊಟ್ಟ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರಿಗೆ ''ರಾಜಧರ್ಮ ಸೇವಾ ಸಂಜೀವಿನಿ'' ಪ್ರಶಸ್ತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಅನುಗ್ರಹಿಸಿ ಆಶೀರ್ವದಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಅತ್ಯುನ್ನತ ಪ್ರಶಸ್ತಿ ಪುರಸ್ಕೃತರಾದ ಸಾಹಿತ್ಯ ಸಂಶೋಧಕರಾದ ರವಿ ಹಂಜ್ ಅವರು ಮಾತನಾಡಿ ವೀರಶೈವ ಧರ್ಮ ಸಾಹಿತ್ಯ ಅಪಾರವಾದುದು. ಸತ್ಯ ಸೈದ್ಧಾಂತಿಕ ನೆಲೆ ಮೂಲಗಳನ್ನು ಮರೆಯದೇ ಅವುಗಳನ್ನು ಉಳಿಸಿ ಬೆಳೆಸುವ ಕೆಲಸವಾಗಬೇಕಾಗಿದೆ. ವೀರಶೈವ ಧರ್ಮವನ್ನು ಛಿದ್ರಗೊಳಿಸುತ್ತಿರುವ ಕೆಲವರ ವರ್ತನೆ ಸರಿಯಾದುದಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಸತ್ಕಾಂತಿ ಎಲ್ಲ ಕ್ರಾಂತಿಗಳಿಗೆ ಸೆಲೆಯಾಗಿದೆ. ಸತ್ಯದ ನಿಲುವು ಗಟ್ಟಿಗೊಳಿಸುವ ಕಾರ್ಯವನ್ನು ನಾನು ಮಾಡುತ್ತಿದ್ದೇನೆ. ನನ್ನ ಪ್ರಯತ್ನವನ್ನು ಕಂಡು ಶ್ರೀ ರಂಭಾಪುರಿ ಜಗದ್ಗುರುಗಳು ಬಹು ದೊಡ್ಡ ಪ್ರಶಸ್ತಿ ಅನುಗ್ರಹಿಸಿವುರುವುದು ನನ್ನ ಪೂರ್ವ ಜನ್ಮದ ಸುಕೃತ ಮತ್ತು ಪೂರ್ವಜರ ಆಶೀರ್ವಾದ ಎಂದು ಭಾವಿಸುವೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಸಂಶೋಧನೆಯಲ್ಲಿ ತೊಡಗಿಸಿಕೊಂಡು ಸಾಹಿತ್ಯ ಸೇವೆ ಮುಂದುವರಿಸುತ್ತೇನೆ ಎಂದರು. ಶೃಂಗೇರಿ ಶಾಸಕ ಟಿ.ಡಿ.ರಾಜೇಗೌಡ, ಮಾಜಿ ಸಚಿವ ಡಿ.ಎನ್. ಜೀವರಾಜ್, ಬೆಂಗಳೂರಿನ ಶಿವಶಂಕರಪ್ಪ ಸಾಹುಕಾರ್, ಹಾಸನದ ಸಿದ್ದೇಶ್ ನಾಗೇಂದ್ರ ಭಾಗವಹಿಸಿದ್ದರು.

ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರಾದ ಡಾ.ಪ್ರಭು ಸಾರಂಗದೇವ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ವಾಯ್ಸ್ ಆಫ್ ವೀರಶೈವ ಲಿಂಗಾಯತ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡಿದರು. ಕಾರ್ಯದರ್ಶಿ ಶಿವಗಂಗಾ ಕ್ಷೇತ್ರದ ಡಾ.ಮಲಯ ಶಾಂತಮುನಿ ಶಿವಾಚಾರ್ಯ ಸ್ವಾಮಿಗಳು ಸಹಭಾಗಿತ್ವ ವಹಿಸಿ ಮಾತನಾಡಿದರು.

ತರೀಕೆರೆಯ ಕೂಡ್ಲೂರು ಬಸಪ್ಪ ಶಿವಮೂರ್ತಿ, ತುಮಕೂರಿನ ಬಿ.ಫಾಲಾಕ್ಷಯ್ಯ, ಬೆಂಗಳೂರಿನ ನಾಗರತ್ನ ಗಣೇಶ್ ಕುಮಾರ, ಸ್ನೇಹ ಶ್ರೀ ಶಿವಕುಮಾರಯ್ಯ ಎನ್., ಕೊಲ್ಲಾಪುರದ ಶಾಂತಮ್ಮ-ಶ್ರೀ ಪರಮೇಶ್ವರಯ್ಯ, ಕನ್ನಳ್ಳಿಯ ಎಸ್.ಶಾಂತರಾಜು, ಸಿದ್ಧಲಿಂಗಸ್ವಾಮಿ ಜಿ. ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಹುಬ್ಬಳ್ಳಿಯ ಪ್ರಕಾಶ ಬೆಂಡಿಗೇರಿ ಸ್ವಾಗತಿಸಿದರು. ಶ್ರೀ ಜಗದ್ಗುರು ರುದ್ರಮುನೀಶ್ವರ ವಸತಿ ಪ್ರೌಢಶಾಲೆಯ ಹಾಲುಸ್ವಾಮಿ ಮತ್ತು ತಂಡದವರು ಭರತ ನಾಟ್ಯ ಪ್ರದರ್ಶನ ನೀಡಿದರು. ಶಿವಮೊಗ್ಗದ ಶಾಂತಾ ಆನಂದ ಹಾಗೂ ಸವಣೂರಿನ ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

ಶಿಲಾನ್ಯಾಸ ಭೂಮಿ ಪೂಜೆ: ಸಮಾರಂಭಕ್ಕೂ ಮುನ್ನ 51 ಅಡಿ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂಗಲ ಶಿಲಾ ಮೂರ್ತಿ ಪ್ರತಿಷ್ಠಾಪನೆಯ ಶಿಲಾನ್ಯಾಸ ಭೂಮಿ ಪೂಜೆಯನ್ನು ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ರಾಜ್ಯದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೆರವೇರಿಸಿದ ನಂತರ ಬಾಳೆಹೊನ್ನೂರು-ಶ್ರೀ ರಂಭಾಪುರಿ ಪೀಠದ ಮೂಲಕ ಮೇಲ್ಸಾಲ್ ರಸ್ತೆ ಉದ್ಘಾಟನೆ ಮಾಡಿದರು. ಇದೇ ಸಂದರ್ಭದಲ್ಲಿ ಶ್ರೀ ರಂಭಾಪುರಿ ಪೀಠದ ನೂತನ ಪುಷ್ಕರಣಿಯನ್ನು ಕೇಂದ್ರದ ಮತ್ತು ರಾಜ್ಯದ ಸಚಿವರು, ಸಂಸದರು, ಶಾಸಕರು, ವಿವಿಧ ಮಠಾಧೀಶರು ಉಪಸ್ಥಿತರಿದ್ದರು. ಸಮಾರಂಭದ ನಂತರ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ ಸಡಗರ ಸಂಭ್ರಮದಿಂದ ಜರುಗಿತು.



ಶಾಸಕ ರಾಘವೇಂದ್ರ ಹಿಟ್ನಾಳ ಸಚಿವ ಸ್ಥಾನದ ಆಕಾಂಕ್ಷಿ : ರಾಜಶೇಖರ್ ಪುನರುಚ್ಚಾರ

ಗಂಗಾವತಿ,ಫೆ.28-

ಕೊಪ್ಪಳ ವಿಧಾನ ಸಭಾ ಕ್ಷೇತ್ರದಿಂದ ಮೂರು ಬಾರಿ ಆಯ್ಕೆಯಾಗಿರುವ ರಾಘವೇಂದ್ರ ಹಿಟ್ನಾಳ್ ಅವರು ಸಚಿವ ಸ್ಥಾನ ಆಕಾಂಕ್ಷಿಯಾಗಿದ್ದಾರೆ ಎಂದು ಸಂಸದ ರಾಜಶೇಖರ್ ಹಿಟ್ನಾಳ್ ಪುನರುಚ್ಚಿಸಿದರು.

ನಗರದಲ್ಲಿ ಜರುಗಿದ ಪೌರ ನೌಕರರ ರಾಜ್ಯ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದ ನಂತರ ಪತ್ರಕರ್ತರೊಂದಿಗೆ ಮಾತನಾಡಿದರು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಂದು ವೇಳೆ ಸಚಿವ ಸಂಪುಟ ಪುನರಚಿಸಿದರೆ ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ್ ಅವರಿಗೆ ಸಚಿವ ಸ್ಥಾನ ನೀಡಲೆ ಬೇಕು. ಅವರು ಮೂರು ಬಾರಿ ಶಾಸಕರಾಗಿ, ಎರಡು ಬಾರಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷವನ್ನು ಸಂಘಟಿಸಿದ್ದಾರೆ. ಅವರ ಹಿರಿತನಕ್ಕೆ ಸಚಿವ ಸ್ಥಾನನೀಡ ಬೇಕು ಮತ್ತು ಪ್ರಬಲ ಆಕಾಂಕ್ಷಿಯಾಗಿದ್ದಾರೆ ಎಂದರು.

ಮುಖ್ಯಮಂತ್ರಿಗಳ ಬದಲಾವಣೆ ಕೂಗು ಕೇಳಿ ಬರುತ್ತದೆ ಎನ್ನುವದಕ್ಕೆ ಇದು ಮಾದ್ಯಮದವರ ಸೃಷ್ಟಿಯಾ ಗಿದೆ. ಉಪ ಮುಖ್ಯಮಂತ್ರಿ ಡಿಕೆ. ಶಿವಕುಮಾರ ಬಣ, ಸಿದ್ದರಾಮಯ್ಯ ಅವರ ಬಣ ಎಂದು ಮಾಧ್ಯಮ ದವರೇ ಸೃಷ್ಟಿ ಮಾಡುತ್ತಿದ್ದಾರೆ ಎಂದ ಅವರು ಬರ್ತ್ ಡೆ ಮತ್ತು ವಿದೇಶ ಪ್ರವಾಸಕ್ಕೆ ಶಾಸಕರು ಹೋದರೆ ತಪ್ಪೇ ಎಂದು ಮರು ಪ್ರಶ್ನೆಸಿಸಿದರು. ಮುಖ್ಯಮಂತ್ರಿಗಳ ಬದಲಾವಣಯೆ ಪ್ರಶ್ನಯೇ ಇಲ್ಲ. ಐದು ವರ್ಷ ಸಿದ್ದರಾಮಯ್ಯ ಅವರೇ ಮುಖ್ಯ ಮಂತ್ರಿಯಾಗಿ ಇರುತ್ತಾರೆ ಎಂದರು. ಪರಿಶಿಷ್ಟ ಜಾತಿಯವರಿಗೆ ಮುಖ್ಯ ಮಂತ್ರಿ ಸ್ಥಾನ ನೀಡ ಬೇಕೆಂಬ ಧ್ವನಿ ಉದ್ಭವಿಸಿದೆ ಎನ್ನುವದಕ್ಕೆ ಆ ವಿಷಯ ಕಾಂಗ್ರೆಸ್ ವರಿಷ್ಠರಿಗೆ ಬಿಟ್ಟಿದ್ದು ಎಂದರು. ರಾಜ್ಯದಲ್ಲಿ ಅಭಿವೃದ್ಧಿ ಯೇ ಮೂಲ ಮಂತ್ರವಾಗಿದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮ ಯ್ಯ ಅವರು ಅಭಿವೃದ್ದಿಗೆ ಒತ್ತು ಕೊಡುತ್ತಿದ್ದಾರೆ ಎಂದರು.

ಎಸ್.ಐ.ಆರ್. ಕಾರ್ಯ: ಮತದಾರರು ಮಾರ್ಚ್ 2 ಹಾಗೂ 5 ರಂದು ಬಿ.ಎಲ್.ಓ. ಅವರಿಗೆ ಭೇಟಿಯಾಗಿ ಮ್ಯಾಪಿಂಗ್ ಮಾಡಿಕೊಳ್ಳಲು ಸೂಚನೆ

ಕಲಬುರಗಿ,ಮಾ.02-

ಮುಖ್ಯ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಮುಂಬರುವ ದಿನಗಳಲ್ಲಿ ಎಸ್.ಐ.ಆರ್. ಕಾರ್ಯ ಪ್ರಾರಂಭವಾಗಲಿದ್ದು, ಇದರ ಹಿನ್ನೆಲೆಯಲ್ಲಿ ಇದೇ ಮಾರ್ಚ್ 2 ಹಾಗೂ ಮಾರ್ಚ್ 5 ರಂದು ಬೆಳಿಗ್ಗೆ 10 ರಿಂದ ಸಾಯಂಕಾಲ 5 ಗಂಟೆಯವರೆಗೆ ತಾವು ಮತದಾನ ಮಾಡುವ ಕೇಂದ್ರದ ಬಿ.ಎಲ್.ಓ ಇವರನ್ನು ಭೇಟಿಯಾಗಿ ತಮ್ಮ ಮತದಾನದ ಗುರುತಿನ ಚೀಟಿಯೊಂದಿಗೆ 2002 ರಲ್ಲಿ ತಾವು ಮತದಾನ ಮಾಡಿದ ಗುರುತಿನ ಚೀಟಿ ಅಥವಾ ಮತದಾನ ಮಾಡಿದ ಮತಕ್ಷೇತ್ರ/ ಮತದಾನ ಕೇಂದ್ರ/ ಕ್ರಮ ಸಂಖ್ಯೆ ಮಾಹಿತಿಯೊಂದಿಗೆ ಮ್ಯಾಪಿಂಗ್ ಮಾಡಿಕೊಳ್ಳಬೇಕೆಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ನಗರ ವ್ಯಾಪ್ತಿಯಲ್ಲಿ ನಿರೀಕ್ಷಿತ ಪ್ರಮಾ ಣ ದಲ್ಲಿ ಮ್ಯಾಪಿಂಗ್ ಆಗದಿರುವ ಪ್ರಯುಕ್ತ ಎಸ್.ಐ.ಆರ್ ಕಾರ್ಯ ಸುಗಮವಾಗಿ ನಡೆಯಲು 2002 ರಲ್ಲಿ ಮತದಾನ ಮಾಡಿದ ಮತದಾರರನ್ನು 2025 ಮತದಾರರ ಪಟ್ಟಿಯಲ್ಲಿ ಗುರುತಿಸಿ ಸದರಿ ಮತದಾರರ ಮತ್ತು 40 ವರ್ಷಕ್ಕಿಂತ ಮೇಲ್ಪಟ್ಟ ಮ್ಯಾಪಿಂಗ್ ಆದ ಮತದಾರರ ಸಂತತಿಯವರನ್ನು (18 ವರ್ಷ ಮೇಲ್ಪಟ್ಟ 40 ವರ್ಷ ಒಳಗಿನ) ಮತದಾರರನ್ನು ಗುರುತಿಸಿ ಮ್ಯಾಪಿಂಗ್ ಮತ್ತು ಪೋಜಿನಿ ಕಾರ್ಯ ಪೂರ್ಣಗೊಳಿಸಬೇಕಾಗಿದೆ ಎಂದು ಅವರು ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ಸೌದಿ, ಬಹ್ರೇನ್ ದೊರೆಗಳ ಜೊತೆ ಪ್ರಧಾನಿ ಮೋದಿ ಫೋನ್ ಸಂಭಾಷಣೆ: ಇರಾನ್ ದಾಳಿಗೆ ಖಂಡನೆ

ಸುರಕ್ಷಿತವಾಗಿ ನೋಡಿಕೊಂಡಿದ್ದಕ್ಕಾಗಿ ಯುಎಇ ಅಧ್ಯಕ್ಷರಿಗೆ ಪ್ರಧಾನಿ ಮೋದಿ ಧನ್ಯವಾದ ತಿಳಿಸಿದ್ದರು. ಹಾಗೆಯೇ ಉದ್ವಿಗ್ನತೆ ನಿವಾರಣೆ, ಪ್ರಾದೇಶಿಕ ಶಾಂತಿ, ಭದ್ರತೆ ಮತ್ತು ಸ್ಥಿರತೆಯನ್ನು ಭಾರತ ಬೆಂಬಲಿಸಲಿದೆ ಎಂದು ಪ್ರತಿಪಾದಿಸಿದ್ದರು.

ಖಮೇನಿ ಹತ್ಯೆಗೆ ಇರಾನ್ ಪ್ರತೀಕಾರ: ಇರಾನ್‌ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರನ್ನು ಅಮೆರಿಕ ಮತ್ತು ಇಸ್ರೇಲ್ ಜಂಟಿ ದಾಳಿ ನಡೆಸಿ ಹತ್ಯೆ ನಡೆಸಿದ್ದವು. ಇದಕ್ಕೆ ಪ್ರತೀಕಾರವಾಗಿ ಇರಾನ್ ಸೇನೆಯು ಇಸ್ರೇಲ್, ಬಹ್ರೇನ್ ಮತ್ತು ಸೌದಿ ಅರೇಬಿಯಾ ಸೇರಿದಂತೆ ಪಶ್ಚಿಮ ಏಷ್ಯಾದ ದೇಶಗಳಲ್ಲಿನ ಅಮೆರಿಕದ ಸೇನಾ ನೆಲೆಗಳ ಮೇಲೆ ಸರಣಿ ಕ್ಷಿಪಣಿಗಳನ್ನು ಹಾರಿಸಿತ್ತು.

ಯುದ್ಧಪೀಡಿತ ದೇಶಗಳಲ್ಲಿ ಸಿಲುಕಿರುವ ಕನ್ನಡಿಗರ ರಕ್ಷಣೆಗೆ ಕೋರಿ ಪ್ರಧಾನಿಗೆ ಸಿಎಂ ಪತ್ರ

ನೋಂದಣಿ, ಟ್ರಾಕಿಂಗ್ ಮತ್ತು ರಿಯಲ್ ಟೈಂ ಸಲಹೆ ಸೂಚನೆ ಹಂಚಲು ಕೇಂದ್ರೀಕೃತ ಡಿಜಿಟಲ್ ವ್ಯವಸ್ಥೆ ಆರಂಭಿಸುವಂತೆ ಕೋರಿದ್ದಾರೆ. ಪ್ರಯಾಣಿಕರ ಸಂರಕ್ಷಣೆ ಶಿಷ್ಟಾಚಾರ ಪಾಲಿಸಬೇಕು ಎಂದು ಮನವಿ ಮಾಡಿದ್ದಾರೆ.

ಕರ್ನಾಟಕ ಸರ್ಕಾರ ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ () ಮತ್ತು ಎಲ್ಲಾ ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರಗಳನ್ನು () ಪೂರ್ಣ ಪ್ರಮಾಣದಲ್ಲಿ ಸಕ್ರಿಯಗೊಳಿಸಿದೆ. ಇವು ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲು ಮತ್ತು ಅಗತ್ಯ ನೆರವು ನೀಡಲು 247 ಕಾರ್ಯನಿರ್ವಹಿಸುತ್ತಿವೆ ಎಂದಿದ್ದಾರೆ. ಕೇಂದ್ರ ಅಧಿಕಾರಿಗಳ ಜೊತೆ ಸಮನ್ವಯತೆ ಸಾಧಿಸಲು ಹಿರಿಯ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದು ವಿವರಿಸಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿ ಸಾವಿರಾರು ಕನ್ನಡಿಗರು ನೆಲೆಸಿದ್ದು, ರಾಷ್ಟ್ರದ ಆರ್ಥಿಕ ಬಲವರ್ಧನೆಗೆ ಅಪಾರ ಕೊಡುಗೆ ನೀಡುತ್ತಿದ್ದಾರೆ. ಈ ಸಂದಿಗ್ಧ ಪರಿಸ್ಥಿತಿಯಲ್ಲಿ ತುರ್ತು, ಸಮನ್ವಯತೆಯ ಮತ್ತು ಮಾನವೀಯತೆಯ ರಾಷ್ಟ್ರೀಯ ಸ್ಪಂದನೆಯ ಅಗತ್ಯ ಇದೆ. ಭಾರತ ಸರ್ಕಾರ ಈ ನಿಟ್ಟಿನಲ್ಲಿ ಅಗತ್ಯ, ತುರ್ತು ಕ್ರಮಗಳನ್ನು ತೆಗೆದುಕೊಳ್ಳಲಿದೆ ಎಂಬ ವಿಶ್ವಾಸವಿದೆ. ಕರ್ನಾಟಕ ಸರ್ಕಾರ ಈ ಸಂಬಂಧ ತನ್ನ ಸಂಪೂರ್ಣ ಸಹಕಾರವನ್ನು ನೀಡಲಿದೆ ಎಂದು ಪತ್ರ ಮುಖೇನ ಸಿಎಂ ಭರವಸೆ ನೀಡಿದ್ದಾರೆ.

ಆಯುಷ್ಮಾನ್ ಭಾರತ್ ಯೋಜನೆಯಡಿ ನೋಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ಸೌಲಭ್ಯ

ಎಪಿಎಲ್ ಕಾರ್ಡ್ದಾರರಿಗೆ ವಾರ್ಷಿಕ ರೂಪಾಯಿ ಒಂದು ಲಕ್ಷ ಐವತ್ತು ಸಾವಿರಗಳ ವರೆಗೆ ಉಚಿತ ಚಿಕಿತ್ಸಾ ವೆಚ್ಚದ ಸೌಲಭ್ಯವಿದೆ.

ಆಸ್ಪತ್ರೆಗಳ ವಿವರ, ದೊರೆಯುವ ಸೌಲಭ್ಯ: ರಾಯಚೂರಿನ ನವೋದಯ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ , ಸಾಮಾನ್ಯ ಶಸ್ತ್ರಚಿಕಿತ್ಸೆ , ಕಣ್ಣಿನ ತೊಂದರೆ, ಎಲುಬು ಕೀಲು, ಕಿವಿ ಮೂಗು ಗಂಟಲು ತಜ್ಞರು, ಪ್ರಸೂತಿ ತಜ್ಞತೆ, ಮೂತ್ರ ಪಿಂಡ ಕಾಯಿಲೆಗೆ ಚಿಕಿತ್ಸೆ ನೀಡಲಾಗುವುದು.

ಹೊಸಮನಿ ಆಸ್ಪತ್ರೆಯಲ್ಲಿ ಪ್ರಸೂತಿ ತಜ್ಞರು, ವಿಜಯ ಪಾಲಿ ಕ್ಲಿನಿಕ್ ಮತ್ತು ನರ್ಸಿಂಗ್ ಹೋಮ್‌ನಲ್ಲಿ ಹೃದಯ ರೋಗ ಚಿಕಿತ್ಸೆ , ಬೆಟ್ಟದೂರ ಆಸ್ಪತ್ರೆಯಲ್ಲಿ ಹೃದಯ ರೋಗ ಚಿಕಿತ್ಸೆ , ಧರಣಿ ಆಸ್ಪತ್ರೆಯಲ್ಲಿ ಹೃದಯ ರೋಗ ಚಿಕಿತ್ಸೆ , ಎಮ್.ಕೆ ಭಂಡಾರಿ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ , ಸಾಮಾನ್ಯ ಶಸ್ತ್ರಚಿಕಿತ್ಸೆ , ಕಣ್ಣಿನ ತೊಂದರೆ, ಚಿಕಿತ್ಸೆ , ಎಲುಬು ಕೀಲು ತಜ್ಞತೆ, ಪ್ರಸೂತಿ ತಜ್ಞತೆ, ಕ್ಯಾನ್ಸ ರ್ ಚಿಕಿತ್ಸೆ , ಶಸ್ತ್ರ ಚಿಕಿತ್ಸೆ , ದಂತ ಚಿಕಿತ್ಸೆ , ಮೊಣಕಾಲು ಬದಲಿ/ ಸೊಂಟ ಬದಲಿ ಶಸ್ತ್ರ ಚಿಕಿತ್ಸೆ ನಂದಿನಿ ಆಸ್ಪತ್ರೆಯಲ್ಲಿ ಸಾಮಾನ್ಯ ಶಸ್ತ್ರ ಚಿಕಿತ್ಸೆ ಸೌಲಭ್ಯ, ಎಲುಬು ಕೀಲು ತಜ್ಞತೆ, ಮೂತ್ರ ಪಿಂಡ ಕಾಯಿಲೆಗೆ ಚಿಕಿತ್ಸೆ ಹಾಗೂ ಮಾನ್ವಿಯ ಅಶ್ವಿನಿ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ , ಸಾಮಾನ್ಯ ಶಸ್ತ್ರ ಚಿಕಿತ್ಸೆ , ಎಲುಬು ಕೀಲು ತಜ್ಞತೆ, ಸಿಂಧನೂರಿನ ಶ್ರೀ ರೇಣುಕಾ ಆಸ್ಪತ್ರೆಯಲ್ಲಿ ಸ್ತ್ರೀರೋಗ ತಜ್ಞತೆ, ಸಾಮಾನ್ಯ ಔಷಧಿ ಚಿಕಿತ್ಸೆ , ಸಾಮಾನ್ಯ ಶಸ್ತ್ರಚಿಕಿತ್ಸೆ ಸೌಲಭ್ಯ, ಎಲುಬು ಕೀಲು ತಜ್ಞತೆ, ಮೂತ್ರಪಿಂಡ ಕಾಯಿಲೆಗೆ ಚಿಕಿತ್ಸೆ , ಶಾಂತಿ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ , ಸಾಮಾನ್ಯ ಶಸ್ತ್ರಚಿಕಿತ್ಸೆ ಸೌಲಭ್ಯ, ಎಲುಬು ಕೀಲು ತಜ್ಞತೆ, ಮೂತ್ರಪಿಂಡ ಕಾಯಿಲೆಗೆ ಚಿಕಿತ್ಸೆ , ಆದರ್ಶ ಆಸ್ಪತ್ರೆಯಲ್ಲಿ ಸ್ತ್ರೀ ರೋಗ ತಜ್ಞತೆ, ಸಾಮಾನ್ಯ ಔಷಧಿ ಚಿಕಿತ್ಸೆ , ಸಾಮಾನ್ಯ ಶಸ್ತ್ರಚಿಕಿತ್ಸೆ ಸೌಲಭ್ಯ, ಎಲುಬು ಕೀಲು ತಜ್ಞತೆ, ಕೇರ್ ಆಸ್ಪತ್ರೆಯಲ್ಲಿ ಸಾಮಾನ್ಯ ಔಷಧಿ ಚಿಕಿತ್ಸೆ , ಸಹನಾ ಆಸ್ಪತ್ರೆಯಲ್ಲಿ ಮಕ್ಕಳ ಆರೋಗ್ಯ ಸಮಸ್ಯೆಗಳಿಗೆ ಚಿಕಿತ್ಸೆ , ವೀರ ಗಂಗಾಧರ ಆಸ್ಪತ್ರೆಯಲ್ಲಿ ಸ್ತ್ರೀರೋಗ ತಜ್ಞತೆ, ಸಾಮಾನ್ಯ ಔಷಧಿ ಚಿಕಿತ್ಸೆ , ಸಾಮಾನ್ಯ ಶಸ್ತ್ರ ಚಿಕಿತ್ಸೆ ಹಾಗೂ ಮಸ್ಕಿಯ ಅನ್ನಪೂರ್ಣ ಆಸ್ಪತ್ರೆಯಲ್ಲಿ ಎಲುಬು ಕೀಲು ಚಿಕಿತ್ಸೆ ಮಾಡಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದ್ವಿತೀಯ ಪಿಯುಸಿ ಪರೀಕ್ಷೆ; 50 ವಿದ್ಯಾರ್ಥಿಗಳು ಗೈರು ಹಾಜರಿ

ಸಂಖ್ಯಾಶಾಸ್ತ ವಿಷಯದಲ್ಲಿ ಒಟ್ಟು 700 ನೋಂದಣೆಯಾಗಿದ್ದು, 679 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ. 21 ವಿದ್ಯಾರ್ಥಿಗಳು ಗೈರು ಹಾಜರಿಯಾ ಗಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಭಾರಿ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಕೃಷಿ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ ದೇಶಿ ತಳಿ ಸಂರಕ್ಷಣೆ, ಪ್ರದರ್ಶನ

ದೇಶಿ ತಳಿ ಉಳಿಸಿ ಬೆಳೆಸುವ ಕೆಲಸವಾಗಲಿ

ಬಾಗಲಕೋಟೆ, ಫೆ.28-

ರೈತರು ತಲೆತಲಾಂತರದಿಂದ ಬೆಳೆಯಲಾಗುತ್ತಿರುವ ದೇಶಿ ತಳಿಗಳನ್ನು ಉಳಿಸಿ ಬೆಳೆಸುವ ಕೆಲಸ ವಾಗಬೇಕೆಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪೂರ ಹೇಳಿದರು.



ನವನಗರದ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಆವರಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಮತು ಕೃಷಿ ಸಂಬಂಧಿಸಿದ ಇಲಾಖೆಗಳ ಸಹ ಯೋಗದಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ನೂತನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಅವರು ಒಂದು ಕಡೆ ಬೆಳೆಯುತ್ತಿರುವ ಜನಸಂಖ್ಯೆಗೆ ಆಹಾರ ಕೊಡಬೇಕು. ಇನ್ನೊಂದು ಕಡೆ ಅದಕ್ಕೆ ತಕ್ಕಂತೆ ಆಹಾರ ಉತ್ಪಾದನೆ ಮಾಬೇಕಿದೆ. ಇದರ ನಡುಗೆ ಆಹಾರಧಾನ್ಯದಲ್ಲಿ ರುಚಿಯನ್ನು ಕಳೆದುಕೊಳ್ಳಲಾಗುತ್ತಿದೆ ಎಂದರು.

ಹೆಚ್ಚಿನ ಉತ್ಪಾದನೆ ಮಾಡುವ ಉದ್ದೇಶದಿಂದ ಅನೇಕ ರಾಸಾಯ ನಿಕಗಳನ್ನು ಸಿಂಪರಣೆ ಮಾಡಲಾಗು ತ್ತಿದೆ. ಇದರಿಂದ ಮಣ್ಣಿನ ಫಲವತ್ತತೆ ಕಳೆದುಕೊಳ್ಳುವದರ ಜೊತೆಗೆ ರುಚಿ ಕೂಡಾ ಹಾಳುಮಾಡಿಕೊಳ್ಳ ಲಾಗು ತ್ತಿದೆ. ಆರೋಗ್ಯವಂತ ಜೀವನಕ್ಕೆ ಬೇಕಾಗುವ ಆಹಾರ ಉತ್ಪಾದನೆ ಆಗಬೇಕಿದೆ. ಈ ನಿಟ್ಟಿನಲ್ಲಿ ಸರಕಾರ ದೇಶಿ ತಳಿಗಳನ್ನು ಉಳಿಸಿ ಸಂರಕ್ಷಿಸುವ ಕೆಲಸ ಮಾಡುತ್ತಿದೆ. ರೈತರಿಗೆ ದೇಶಿ ತಳಿಗಳ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಕೃಷಿ ಇಲಾಖೆಯಿಂದ ತರಬೇತಿ ಸಹ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಅಂದಾಜು 99.74 ಲಕ್ಷ ರೂ.ಗಳ ವೆಚ್ಚದಲ್ಲಿ ಸುಸಜ್ಜಿತವಾಗಿ ಕೃಷಿ ತರಬೇತಿ ಕಟ್ಟಡವನ್ನು ನಿರ್ಮಿಸಲಾಗಿದೆ. ಈ ತರಬೇತಿ ಕೇಂದ್ರದಲ್ಲಿ ಊಟ ವಸತಿಯೊಂದಿಗೆ ತರಬೇತಿ ನೀಡಲಾಗುತ್ತದೆ. ಅಲ್ಲದೇ ಜಿಲ್ಲೆಯಲ್ಲಿ ರೈತರು ಬೆಳೆಯುವ ತರಕಾರಿ, ಹಣ್ಣು ಸೇರಿದಂತೆ ಇತರೆ ಬೆಳೆಗಳು ಹಾಳಾಗದಂತೆ ಶೇಖರಿ ಸಲು ನಬಾರ್ಡ ಯೋಜನೆಯಡಿ 9.51 ಕೋಟಿ ರೂ.ಗಳ ವೆಚ್ಚದಲ್ಲಿ 2500 ಮೆಟ್ರಿಕ್ ಟನ್ ಸಾಮರ್ಥ್ಯವುಳ್ಳ ಶೀತಲ ಘಟಕ ನಿರ್ಮಿಸಲಾಗುತ್ತಿದ್ದು, ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ಜಿಲ್ಲೆಯ ಪ್ರಮುಖ ಬೆಳೆಗಳಲ್ಲಿ ಒಂದಾದ ಕಬ್ಬು ಬೆಳೆಯಲ್ಲಿ ಮಣ್ಣಿನ ಆರೋಗ್ಯ ಮತ್ತು ನೀರಿನ ಸಮಗ್ರ ನಿರ್ವಹಣೆಗಾಗಿ ಜಿಲ್ಲೆಯ ಎಲ್ಲ ತಾಲೂಕಿನಲ್ಲಿ 14 ಸಕ್ಕರೆ ಕಾರ್ಖಾನೆ ವ್ಯಾಪ್ತಿಯಡಿ 1000 ಹೆಕ್ಟೆರ್ ಪ್ರದೇಶದಲ್ಲಿ ರೈತರನ್ನು ಆಯ್ಕೆ ಮಾಡಿಕೊಂಡು ಹನಿ ನೀರಾವರಿ ಘಟಕ ಅನುಷ್ಠಾನ, ಕಬ್ಬಿನ ಬೆಳೆಯಲ್ಲಿ ಕೃತಕ ಬುದ್ದಿಮತ್ತೆ (ಎಐ) ತಂತ್ರಜ್ಞಾನ ಮೂಲಕ ಕಬ್ಬು ಬೆಳೆ ಪ್ರಾತ್ಯಕ್ಷಿಕೆ ಮಾಡಲಾಗುತ್ತಿದೆ. ಇದರಿಂದ ನೀರಿನ ಮಿತವ್ಯಯ ಬಳಕೆ, ರಸಗೊಬ್ಬರ ಉಳಿತಾಯ, ಕೀಟನಾಶಕದ ಅವಲಂಬನೆ ಕಡಿಮೆ ಮಾಡಬಹು ದಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲ ಸೌಲಭ್ಯ ಅಬಿವೃದ್ದಿ ನಿಗಮದ ಅಧ್ಯಕ್ಷ ಎಸ್.ಜಿ. ನಂಜಯ್ಯನಮಠ ಮಾತನಾಡಿ ಬೆಳೆಯುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಆಹಾರ ಉತ್ಪಾದನೆ ಪ್ರಮಾಣ ಹೆಚ್ಚಿಸುವ ಅಗತ್ಯವಿದೆ. ಒಂದು ಜನಸಂಖ್ಯೆ ದಿನದಿಂದ ದಿನಕ್ಕೆ ಬೆಳೆಯುತ್ತಿದೆ. ಆದರೆ ಭೂಮಿ ಹೆಚ್ಚಳವಾಗುವದಿಲ್ಲ. ಇದನ್ನು ಅರಿಯಬೇಕಿದೆ. ಹೊಸ ಹೊಸ ತಳಿಗಳ ಸಂಶೋಧನೆಯಿಂದ ಉತ್ಪಾದನೆ ಪ್ರಮಾಣ ಹೆಚ್ಚಿಸಿ ಈಗ ಬೇರೆ ದೇಶಕ್ಕೆ ರಪ್ತು ಮಾಡಲಾಗುತ್ತಿದೆ. ಹೆಚ್ಚಿನ ಉತ್ಪಾದನೆ ಮಾಡುವದರ ಜೊತೆಗೆ ಗುಣಮಟ್ಟಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದರು.

ಈ ಸಂದರ್ಭದಲ್ಲಿ ರಾಜ್ಯ ಮಟ್ಟದ ಕೃಷಿ ಪ್ರಶಸ್ತಿ ಪಡೆದ ಸುನೀತಾ ಮನೋಹರ ಮೇಟಿ, ರಾಮನಗೌಡ ಪಾಟೀಲ, ಸಿದ್ದುಬಾ ಪಾಂಡು ಮಾಡಿಕ ಅವರನ್ನು ಸನ್ಮಾನಿಸಲಾ ಯಿತು. ಇದರ ಜೊತೆಗೆ ಪಿಎಂಎಫ್ ಎಂಇ ಯೋಜನೆಯ ಫಲಾನುಭವಿ ಗಳಿಗೆ ಸಾಲ ಮಂಜೂರಾತಿ ಪ್ರಮಾಣ ಪತ್ರ, ಮಣ್ಣು ಆರೋಗ್ಯ ಚೀಟಿ ವಿತರಣೆ ಹಾಗೂ ಕಬ್ಬಿನಲ್ಲಿ ರವದಿಯ ನಿರ್ವಹಣೆ, ನೈಸರ್ಗಿಕ ಕೃಷಿಯ ಮಾಹಿತಿವುಳ್ಳ ಪೋಸ್ಟರಗಳನ್ನು ಬಿಡುಗಡೆ ಮಾಡಲಾಯಿತು. ಪ್ರಾರಂ ಭದಲ್ಲಿ ದೇಶಿ ತಳಿಗಳ ಪ್ರದರ್ಶನ ವೀಕ್ಷಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅನೀಲ ಕುಮಾರ ದಡ್ಡಿ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಹಾಂತೇಶ ಹಟ್ಟಿ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ತೋವಿವಿಯ ಡೀನ್ ಡಾ.ತಮ್ಮಯ್ಯ, ಕೃಷಿ ಜಂಟಿ ನಿರ್ದೇಶಕ ರುದ್ರೇಶ ಟಿ.ಎಸ್, ಉಪ ಕೃಷಿ ನಿರ್ದೇಶಕ 'ರಾದ ಕೆ.ಎಸ್. ಅಗಸನಾಳ, ಮಂಜುಳಾ ಬಸವರಡ್ಡಿ, ಸಹಾಯಕ ಕೃಷಿ ನಿರ್ದೇಶಕ ಆರ್.ಬಿ.ಬಿದರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಾರ್ಚ್ 2 ಮತ್ತು 5ಕ್ಕೆ ಮತದಾರರ ಪಟ್ಟಿ ಮ್ಯಾಪಿಂಗ್ ಅಭಿಯಾನ -ಬಿ.ಫೌಜಿಯಾ ತರನ್ನುಮ್

ಕಲಬುರಗಿ,ಫೆ.02-

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ ಪೂರ್ವಸಿದ್ಧತೆ ಭಾಗವಾಗಿ 2022ರ ಮತದಾರರ ಪಟ್ಟಿಗೆ 2025ರ ಮತದಾರರ ಪಟ್ಟಿಯನ್ನು ಮ್ಯಾಪಿಂಗ್ ಮಾಡುವ ಕುರಿತು ಮಾರ್ಚ್ 2 ಮತ್ತು 5 ರಂದು ಬೆಳಿಗ್ಗೆ 8 ರಿಂದ ಸಂಜೆ 6 ಗಂಟೆ ವರೆಗೆ ವಿಶೇಷ ಅಭಿಯಾನ ಕೈಗೊಂಡಿದ್ದು, ಜೇವರ್ಗಿ, ಗುಲಬರ್ಗಾ ಗ್ರಾಮೀಣ, ಗುಲಬರ್ಗಾ ದಕ್ಷಿಣ ಹಾಗೂ ಗುಲಬರ್ಗಾ ಉತ್ತರ ವಿಧಾನಸಭಾ ಮತಕ್ಷೇತ್ರಗಳ ಮತದಾರರು ಸಕ್ರಿಯವಾಗಿ ಭಾಗವಹಿಸಬೇಕು ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ರಾಜ್ಯದಲ್ಲಿ ಎಪ್ರಿಲ್-2026ರಲ್ಲಿ ವಿಶೇಷ ಮತದಾರರ ತೀವ್ರ ಪರಿಷ್ಕರಣೆ ನಡೆಸಲು ಉದ್ದೇಶಿಸಿದ್ದು, ರಾಜ್ಯದ ಮುಖ್ಯ ಚುನಾವಣಾಧಿಕಾರಿ ನಿರ್ದೇಶನದಂತೆ ಜಿಲ್ಲೆಯಲ್ಲಿ ಬರುವ ಒಟ್ಟು 9 ವಿಧಾನ ಸಭಾ ಮತಕ್ಷೇತ್ರಗಳಲ್ಲಿ 2002ರ ಮತದಾರರ ಪಟ್ಟಿಗೆ 2025 ರ ಮತದಾರರ ಪಟ್ಟಿ ಮ್ಯಾಪಿಂಗ್ ಕಾರ್ಯ ಪೂರ್ವಸಿದ್ಧತಾ ಕಾರ್ಯ ಮಾಡಲಾಗುತ್ತಿದೆ. ಇದರಲ್ಲಿ 35-ಜೇವರ್ಗಿ, 43-ಕಲಬುರಗಿ ಗ್ರಾಮೀಣ, 44-ಗುಲಬರ್ಗಾ ದಕ್ಷಿಣ ಹಾಗೂ 45-ಗುಲಬರ್ಗಾ ಉತ್ತರ ವಿಧಾನಸಭಾ ಮತಕ್ಷೇತ್ರಗಳ ಮ್ಯಾಪಿಂಗ್ ಪ್ರಗತಿ ಕಡಿಮೆ ಇರುವುದರಿಂದ ಇದೀಗ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದಿದ್ದಾರೆ.

ಮೇಲ್ಕಂಡ ವಿಧಾನಸಭಾ ಮತಕ್ಷೇತ್ರಗಳಲ್ಲಿ ಬರುವ ಎಲ್ಲಾ ಮತಗಟ್ಟೆಗಳಲ್ಲಿ ಮಾರ್ಚ್ 2 ಮತ್ತು 5 ರಂದು ಬಿ.ಎಲ್.ಓ ಅವರು ಮ್ಯಾಪಿಂಗ್ ಕಾರ್ಯದ ವಿಶೇಷ ಅಭಿಯಾನ ಕೈಗೊಳ್ಳಲಿದ್ದು, ಸಾಮಾನ್ಯ ವರ್ಗ, ವಿಶೇಷ ವರ್ಗದವರು, ಗಣ್ಯ ವ್ಯಕ್ತಿಗಳು, ರಾಜಕೀಯ ವ್ಯಕ್ತಿಗಳು, ರಾಜಕಾರಣಿಗಳು ಮತ್ತು ಅವರ ಕುಟುಂಬಗಳು, ಪಕ್ಷದ ಕಾರ್ಯಕರ್ತರು, ಹಿರಿಯ ವ್ಯಕ್ತಿಗಳು, ಕೇಂದ್ರ, ರಾಜ್ಯ ಸರಕಾರಿ, ಅರೆ ಸರಕಾರಿ ನೌಕರರು, ಖಾಸಗಿ ವಲಯದ ನೌಕರರು ಹಾಗೂ ಇವರ ಕುಟುಂಬದವರು, ಅಸಂಘಟಿತ ನೌಕರರು, ಸಂಘಟಿತ ನೌಕರರು, ಸರ್ಕಾರೇತರ ಸಂಸ್ಥೆಗಳು, ಶಾಲಾ ಕಾಲೇಜು ನೌಕರರು, ಹಿರಿಯ ನಾಗರಿಕರು ಹಾಗೂ ಇವರ ಕುಟುಂಬದವರು, ವೃತ್ತಿಪರ ನಿರತ ವ್ಯಕ್ತಿಗಳು ಹಾಗೂ ಅವರ ಕುಟುಂಬದವರ ಹೆಸರುಗಳು ಕೈಬಿಟ್ಟು ಹೋಗದಂತೆ ಮ್ಯಾಪಿಂಗ್ ಕಾರ್ಯ ಮಾಡುವ ನಿಟ್ಟಿನಲ್ಲಿ ತಮ್ಮ ಹೆಸರು ಬಿಟ್ಟು ಹೋಗದಂತೆ ಮತದಾರರು ಸಕ್ರಿಯವಾಗಿ ಅಭಿಯಾನದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಜಿಲ್ಲಾ ಚುನಾವಣಾಧಿಕಾರಿಗಳು ಕೋರಿದ್ದಾರೆ.

ಕಲಬುರಗಿ-ಬೀದರ ಜಿಲ್ಲೆಯ 7,200 ಕೋಟಿ ರೂ. ಮೊತ್ತದ ಬಹು ಗ್ರಾಮ ಕುಡಿಯುವ ನೀರು ಯೋಜನೆ ಕೇಂದ್ರಕ್ಕೆ ಕಳುಹಿಸಲು ಸಭೆ ಒಪ್ಪಿಗೆ

ಕಲಬುರಗಿ,ಫೆ.28-

ಕಲಬುರಗಿ ಮತ್ತು ಬೀದರ ಜಿಲ್ಲೆಯ ಗ್ರಾಮಗಳಿಗೆ ನಾರಾಯಣಪುರ ಡ್ಯಾಂನಿಂದ ನೀರು ತಂದು ಬಹುಗ್ರಾಮ ಯೋಜನೆಯಡಿ ಜಿಲ್ಲೆಯ ಜನವಸತಿ ಪ್ರದೇಶದಗಳಿಗೆ ಕುಡಿಯುವ ನೀರು ಪೂರೈಕೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರ 50-50 ಅನು ದಾನದಡಿ ಯೋಜನೆ ಕೈಗೆತ್ತಿಕೊಳ್ಳಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಶನಿವಾರ ಇಲ್ಲಿ ಜರುಗಿದ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಮೇಲ್ವಿಚಾರಣೆ (ದಿಶಾ) ಸಭೆ ಒಪ್ಪಿಗೆ ಸೂಚಿಸಿದೆ.

ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ ಅವರ ಅಧ್ಯಕ್ಷತೆಯಲ್ಲಿ ಇಲ್ಲಿನ ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಮೇಲ್ವಿಚಾರಣೆ (ದಿಶಾ) ಸಭೆಯಲ್ಲಿ ಯೋಜನೆ ಅನುಷ್ಠಾನ ಮತ್ತು ಆರಂಭಿಕ 5 ವರ್ಷದ ನಿರ್ವಹಣೆಗೆ ಒಟ್ಟಾರೆ 7,200 ಕೋಟಿ ರೂ. ಅವಶ್ಯಕತೆ ಇದ್ದು, ಕೇಂದ್ರ ತನ್ನಪಾಲಿನ ಹಣ ನೀಡಲು ಇಂದಿನ ಸಭೆಯಲ್ಲಿ ಕುಲಂಕುಷವಾಗಿ ಚರ್ಚಿಸಲಾಗಿ ಈಗಾಗಲೆ ಬೀದರ ದಿಶಾ ಸಭೆಯಲ್ಲಿ ಒಪ್ಪಿಗೆ ಸೂಚಿಸಿದ್ದರಿಂದ ಇಲ್ಲಿಯೂ ಅನುಮೋದನೆ ನೀಡಲಾಯಿತು.

ಗ್ರಾಮೀಣ ಕುಡಿಯುವ ನೀರು ಮತ್ತು ಸರಬರಾಜು ಯೋಜನೆಯ ಕಾರ್ಯನಿರ್ವಾಹಕ ಅಭಿಯಂತ ಜಗದೇವ ಜೀವಣಗಿ ಮಾತನಾಡಿ, ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ ವಿರುವ 11 ಎಂ.ವಿ.ಎಸ್. ಯೋಜನೆಗಳಿದ್ದಾಗಿಯೂ ಬೇಸಿಗೆ ನೀರಿಗೆ ಹಾಹಾಕಾರ ಇದೆ. ಜಿಲ್ಲೆಯಲ್ಲಿ ಪಂಚ ನದಿಗಳಿದ್ದರು ನೀರಿನ ಅಭಾವ ತುಂಬಾ ಹೆಚ್ಚಿದೆ. ಜಿಲ್ಲೆ ಮಳೆಯಾಶ್ರಿತ



ಪ್ರದೇಶವಾಗಿರುವುದಿಂದ ಈ ಯೋಜನೆ ವರದಾನವಾಗಲಿದೆ. ಕಲಬುರಗಿ ಜಿಲ್ಲೆಯ 1,235 ಮತ್ತು ಬೀದರ ಜಿಲ್ಲೆಯ 900 ಸೇರಿ ಒಟ್ಟು 2,135 ಜನವಸತಿಗಳಿಗೆ ನೀರು ಪೂರೈಸುವ ಯೋಜನೆ ಇದಾಗಿದ್ದು, ಮುಂದಿನ 2,058 ಜನಸಂಖ್ಯೆ ಅನುಗುಣವಾಗಿ ಡಿ.ಪಿ.ಆರ್. ತಯಾ ರಿಸಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ವರ್ಚುವಲ್ ಮೂಲಕ ಸಭೆಯಲ್ಲಿ ಭಾಗವಹಿಸಿದ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಮಾತನಾಡಿ, ಬಹುಗ್ರಾಮ ಯೋಜನೆಗೆ ಕೇಂದ್ರ ಸರ್ಕಾರ ತನ್ನ ಪಾಲಿನ ಹಣ ನೀಡಬೇಕಾಗುತ್ತದೆ. ಅನೇಕ ಕೇಂದ್ರ ಪುರಸ್ಕೃತ ಯೋಜನೆಗೆಳಿಗೆ ಹಣ ನೀಡಿಲ್ಲ. ಹೀಗಾಗಿ ಇಂದಿನ ಸಭೆಯಲ್ಲಿ ಇದಕ್ಕೆ ಅನುಮೋದನೆ ನೀಡಬೇಕು ಎಂದರಲ್ಲದೆ ಆರ್.ಡಿ.ಪಿ.ಆರ್. ಇಲಾಖೆಯು ಸಣ್ಣ ನೀರಾವರ ಇಲಾಖೆಯ ಸಹಯೋಗದೊಂದಿಗೆ ಕಳೆದ 15-20 ವರ್ಷಗಳಿಂದ ಬೇಸಿಗೆಯಲ್ಲಿ ನೀರಿನ ಸಮಸ್ಯೆಗೆ ತುತ್ತಾಗುವ ಗ್ರಾಮಗಳಲ್ಲಿ ಜಲ ಸಮೃದ್ಧಿ ಯೋಜನೆ ರೂಪಿಸಿ ನೀರಿನ ಭದ್ರತೆ ತರಲು ಯೋಜನೆ ರೂಪಿಸಲಾಗುತ್ತಿದೆ ಎಂದರು.

ಇನ್ನು ಕೃಷಿ ಇಲಾಖೆ ಚರ್ಚೆ ವೇಳೆಯಲ್ಲಿ ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ, ಎರಡು ವರ್ಷ ಹಿಂದೆ ನೆಟೆ ರೋಗ, ಈ ವರ್ಷ ಹಚ್ಚಿನ ಮಳೆಯಿಂದ ತೊಗರಿ ಬೆಳೆ ವಿವಿಧ ರೋಗಕ್ಕೆ ತುತ್ತಾಗಿದ್ದರಿಂದ ರೈತರು ಹೈರಾಣಾಗಿದ್ದಾರೆ. ಪ್ರತಿ ವರ್ಷ ಹೀಗೆ ಆದರೆ ರೈತ ಬದುಕು ಕಟ್ಟಿಕೊಳ್ಳೋದು ಹೇಗೆ ಎಂದು ಜಮಡಿ ಕೃಷಿ ನಿರ್ದೇ ಶಕ ಸಮದ್ ಪಟೇಲ್ ಅವರನ್ನು ಪ್ರಶ್ನಿಸಿದ ಅವರು, ಇದಕ್ಲೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಯಾವ ತಳಿಯ ಬೀಜ ಬಿತ್ತಬೇಕೆಂದು ರೈತರಿಗೆ ಬಿತ್ತನೆ ಪೂರ್ವ ಮಾಹಿತಿ ನೀಡಬೇಕು. ಇದು ಅಭಿಯಾನದ ರೂಪದಲ್ಲಿ ಮಾಡಬೇಕು. ಇನ್ನು ಬೆಳೆ ವಿಮೆ ಯೋಜನೆಯಡಿ ಬೆಳೆ ಕಟಾವು ನಂತರ ಬರಬೇಕಾದ ಬೆಳೆ ವಿಮೆ ಸಹ ಸಕಾಲದಲ್ಲಿ ರೈತರಿಗೆ ಪಾವತಿಯಾಗುವಂತೆ ಇಲಾಖೆ ನೋಡಿಕೊಳ್ಳಬೇಕೆಂದು ಸೂಚಿಸಿದರು.

ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ನಿಟ್ಟನಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಜಿಲ್ಲೆಗೆ 431.57 ಕೋಟಿ ರೂ. ಬಿಡುಗಡೆ ಮಾಡಿದ್ದು, ಇದರಲ್ಲಿ ಇದೂವರೆಗೆ 247.69 ಕೋಟಿ ರೂ. ಖರ್ಚು ಮಾಡಿ 1,779 .98 ಹೆಕ್ಟೇರ್ ಪ್ರದೇಶ ವಿಸ್ತರಣೆಗೆ ರೈತರಿಗೆ ಸಹಾಯಧನ ನೀಡಲಾಗಿದೆ. ಇದಲ್ಲದೆ ಪಿ.ಎಂ.ಕೃಷಿ ಸಿಂಚಾಯಿ ಯೋಜನೆಯಡಿ 1,210 ಲಕ್ಷ ರೂ., ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ 14.40 ಲಕ್ಷ ರೂ., ಪರಂಪರಾಗತ ಕೃಷಿ ವಿಕಾಸ ಯೋಜನೆಯಡಿ 56.52 ಲಕ್ಷ ರೂ. ಅನುದಾನ ಜಿಲ್ಲೆಗೆ ಬಿಡುಗಡೆ ಮಾಡಿದೆ ಎಂಸು ತೋಟಗಾರಿಕೆ ಜಂಟಿ ನಿರ್ದೇಶಕ ಸಂತೋಷ ಇನಾಂದಾರ ಅವರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕರ್ನಾಟಕ ರೇಷ್ಮೆ ಅಭಿವೃದ್ಧಿ ನಿಗಮು ನಿಯಮಿತದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಶಾಸಕಿ ಕನೀಜ್ ಫಾತಿಮಾ, ಅಫಜಲಪೂರ ಶಾಸಕ ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಬಿ.ಜಿ.ಪಾಟೀಲ, ಶಶೀಲ ಜಿ. ನಮೋಶಿ, ಮಹಾನಗರ ಪಾಲಿಕೆಯ ಮೇಯರ್ ವರ್ಷಾ ರಾಜೀವ ಜಾನೆ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್. ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಸುಮಿತ್ ಪಾಟೀಲ, ಸಹಾಯಕ ಆಯುಕ್ತೆ ಸಾಹಿತ್ಯ ಸೇರಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿ ಸಿದ್ದರು. ವರ್ಚುವಲ್ ಮೂಲಕ ಬೀದರ ಸಂಸದ ಸಾಗರ ಖಂಡ್ರೆ, ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜ ಯ್ ಸಿಂಗ್, ಶಾಸಕರಾದ ಡಾ.ಅವಿ ನಾಶ , ಬಸವರಾಜ ಅವರು ಸಹ ಭಾಗವಹಿಸಿದ್ದರು.

ಮಾರ್ಚ್ 2 ಮತ್ತು 5ಕ್ಕೆ ಮತದಾರರ ಪಟ್ಟಿ ಮ್ಯಾಪಿಂಗ್ ಅಭಿಯಾನ

ಕಲಬುರಗಿ,ಮಾ.02-

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ ಪೂರ್ವಸಿದ್ದತೆ ಭಾಗವಾಗಿ 2022ರ ಮತದಾರರ ಪಟ್ಟಿಗೆ 2025ರ ಮತದಾರರ ಪಟ್ಟಿಯನ್ನು ಮ್ಯಾಪಿಂಗ್ ಮಾಡುವ ಕುರಿತು ಮಾರ್ಚ್ 2 ಮತುತಿ 5 ರಂದು ಬೆಳಿಗ್ಗೆ 8 ರಿಂದ ಸಂಜೆ 6 ಗಂಟೆ ವರೆಗೆ ವಿಶೇಷ ಅಭಿಯಾನ ಕೈಗೊಂಡಿದ್ದು,

ಜೇವರ್ಗಿ, ಗುಲ ಬರ್ಗಾ ಗ್ರಾಮೀಣ, ಗುಲಬರ್ಗಾ ದಕ್ಷಿಣ ಹಾಗೂ ಗುಲಬರ್ಗಾ ಉತ್ತರ ವಿಧಾನಸಭಾ ಮತಕ್ಷೇತ್ರಗಳ ಮತದಾರರು ಸಕ್ರಿಯವಾಗಿ ಭಾಗವಹಿಸಬೇಕು ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ರಾಜ್ಯದಲ್ಲಿ ಎಪ್ರಿಲ್ -2026ರಲ್ಲಿ ವಿಶೇಷ ಮತದಾರರ ತೀವ್ರ ಪರಿಷ್ಕರಣೆ ನಡೆಸಲು ಉದ್ದೇಶಿಸಿದ್ದು, ರಾಜ್ಯದ ಮುಖ್ಯ ಚುನಾವಣಾಧಿಕಾರಿ ನಿರ್ದೇಶನದಂತೆ ಜಿಲ್ಲೆಯಲ್ಲಿ ಬರುವ ಒಟ್ಟು 9 ವಿಧಾನ ಸಭಾ ಮತಕ್ಷೇತ್ರ ಗಳಲ್ಲಿ 2002ರ ಮತದಾರರ ಪಟ್ಟಿಗೆ 2025 ರ ಮತದಾರರ ಪಟ್ಟಿ ಮ್ಯಾಪಿಂಗ್ ಕಾರ್ಯ ಪೂರ್ವ ಸಿದ್ಧತಾ ಕಾರ್ಯ ಮಾಡಲಾಗುತ್ತದೆ. ಇದರಲ್ಲಿ 35-ಜೇವರ್ಗಿ,

43-ಕಲಬು ರಗಿ ಗ್ರಾಮೀಣ, 44-ಗುಲಬರ್ಗಾ ದಕ್ಷಿಣ ಹಾಗೂ 45-ಗುಲಬರ್ಗಾ ಉತತಿರ ವಿಧಾನಸಭಾ ಮತಕ್ಷೇತ್ರ ಗಳ ಮ್ಯಾಪಿಂಗ್ ಪ್ರಗತಿ ಕಡಿಮೆ ಇರುವುದರಿಂದ ಇದೀಗ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದಿದ್ದಾರೆ.

ಮೇಲ್ಕಂಡ ವಿಧಾನಸಭಾ ಮತಕ್ಷೇತ್ರಗಳಲ್ಲಿ ಬರುವ ಎಲ್ಲಾ ಮತಗಟ್ಟೆಗಳಲ್ಲಿ ಮಾರ್ಚ್ 2 ಮತ್ತು 5 ರಂದು ಬಿ.ಎಲ್.ಓ ಅವರು ಮ್ಯಾಪಿಂಗ್ ಕಾರ್ಯದ ವಿಶೇಷ ಅಭಿಯಾನ ಕೈಗೊಳ್ಳಲಿದ್ದು, ಈ ನಿಟ್ಟಿನಲ್ಲಿ ತಮ್ಮ ಹೆಸರು ಬಿಟ್ಟು ಹೋಗದಂತೆ ಮತದಾರರು ಸಕ್ರಿಯವಾಗಿ ಅಭಿಯಾನದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಜಿಲ್ಲಾ ಚುನಾವಣಾಧಿಕಾರಿಗಳು ಕೋರಿದ್ದಾರೆ.

ಎಸ್.ಐ.ಆರ್. ಕಾರ್ಯ: ಮತದಾರರು ಮಾರ್ಚ್ 2 ಹಾಗೂ 5 ರಂದು ಬಿ.ಎಲ್.ಓ. ಅವರಿಗೆ ಭೇಟಿಯಾಗಿ ಮ್ಯಾಪಿಂಗ್ ಮಾಡಿಕೊಳ್ಳಲು ಸೂಚನೆ


ಕಲಬುರಗಿ,ಮಾ.02-

ಮುಖ್ಯ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಮುಂಬರುವ ದಿನಗಳಲ್ಲಿ ಎಸ್.ಐ.ಆರ್. ಕಾರ್ಯ ಪ್ರಾರಂಭವಾಗಲಿದ್ದು, ಇದರ ಹಿನ್ನೆಲೆಯಲ್ಲಿ ಇದೇ ಮಾರ್ಚ್ 2 ಹಾಗೂ ಮಾರ್ಚ್ 5 ರಂದು ಬೆಳಿಗ್ಗೆ 10 ರಿಂದ ಸಾಯಂಕಾಲ 5 ಗಂಟೆಯವರೆಗೆ ತಾವು ಮತದಾನ ಮಾಡುವ ಕೇಂದ್ರದ ಬಿ.ಎಲ್.ಓ ಇವರನ್ನು ಭೇಟಿಯಾಗಿ ತಮ್ಮ ಮತದಾನದ ಗುರುತಿನ ಚೀಟಿಯೊಂದಿಗೆ 2002 ರಲ್ಲಿ ತಾವು ಮತದಾನ ಮಾಡಿದ ಗುರುತಿನ ಚೀಟಿ ಅಥವಾ ಮತದಾನ ಮಾಡಿದ ಮತಕ್ಷೇತ್ರ/ ಮತದಾನ ಕೇಂದ್ರ/ ಕ್ರಮ ಸಂಖ್ಯೆ ಮಾಹಿತಿಯೊಂದಿಗೆ ಮ್ಯಾಪಿಂಗ್ ಮಾಡಿಕೊಳ್ಳಬೇಕೆಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಸದರಿ ಮತದಾರರ ಮತ್ತು 40 ವರ್ಷಕ್ಕಿಂತ ಮೇಲ್ಪಟ್ಟ ಮ್ಯಾಪಿಂಗ್ ಆದ ಮತದಾರರ ಸಂತತಿಯವರನ್ನು (18 ವರ್ಷ ಮೇಲ್ಪಟ್ಟ 40 ವರ್ಷ ಒಳಗಿನ) ಮತದಾರರನ್ನು ಗುರುತಿಸಿ ಮ್ಯಾಪಿಂಗ್ ಮತ್ತು ಪ್ರೊಜಿನಿ ಕಾರ್ಯ ಪೂರ್ಣಗೊಳಿಸಬೇಕಾಗಿದೆ ಎಂದು ಅವರು ತಿಳಿಸಿದ್ದಾರೆ.

ಹೊಸ ಪ್ರಿಯಕರನೊಂದಿಗೆ ಸೇರಿ ಮಾಜಿ ಪ್ರಿಯಕರನ ಕೊಂದ ಕಿರುತೆರೆ ನಟಿ! ಮೂವರು ಸೆರೆ

ಬೆಂಗಳೂರು: ನಗರದ ಬಾಗಲಗುಂಟೆ ಠಾಣಾ ವ್ಯಾಪ್ತಿಯ ವಿಜಯಲಕ್ಷ್ಮಿ ಬಡಾವಣೆಯಲ್ಲಿ ಇತ್ತೀಚಿಗೆ ನಡೆದಿದ್ದ ಮೋಹನ್ ಕೃಷ್ಣ (45) ಎಂಬವರ ನಿಗೂಢ ಹತ್ಯೆ ಪ್ರಕರಣಕ್ಕೆ ಅಚ್ಚರಿಯ ಟ್ವಿಸ್ಟ್ ಸಿಕ್ಕಿದೆ. ಹೊಸ ಪ್ರಿಯಕರನೊಂದಿಗೆ ಸೇರಿ ತನ್ನ ಮಾಜಿ ಪ್ರಿಯಕರನನ್ನು ಕಿರುತೆರೆ ಸಹ ನಟಿಯೊಬ್ಬರು ಹತ್ಯೆಗೈದಿರುವುದು ಪೊಲೀಸರ ತನಿಖೆಯಲ್ಲಿ ಬಯಲಾಗಿದೆ. ಕಿರುತೆರೆ ನಟಿ ಬಿಂದು, ವಿನಯ್ ಹಾಗೂ ಧನುಷ್ ಎಂಬ ಮೂವರು ಆರೋಪಿಗಳನ್ನು ಬಂಧಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.



ಪ್ರಕರಣದ ವಿವರ: ಸಣ್ಣಪುಟ್ಟ ಫೈನಾನ್ಸ್ ಮಾಡುತ್ತಿದ್ದ ಮೋಹನ್ ಕೃಷ್ಣ ತನ್ನ ಪತ್ನಿಯನ್ನು ಬಿಟ್ಟು ಬಿಂದು ಜೊತೆ ಲಿವಿಂಗ್ ರಿಲೇಷನ್‌ಶಿಪ್‌ನಲ್ಲಿದ್ದ. ಬಿಂದು ಕೂಡ ಪತಿಯಿಂದ ದೂರವಾಗಿದ್ದಳು. ಭಜರಂಗಿ, ಪೊಲೀಸ್ ಕ್ವಾರ್ಟರ್ಸ್, ಕಾಲಭೈರವ ಸಿನಿಮಾಗಳಲ್ಲಿ ಸಣ್ಣಪುಟ್ಟ ಪಾತ್ರಗಳಲ್ಲಿ ಬಿಂದು ನಟಿಸಿದ್ದಳು. ಎರಡು ತಿಂಗಳ ಹಿಂದಷ್ಟೇ ಬಿಂದು ಹಾಗೂ ಮೋಹನ್ ಕೃಷ್ಣ ಇಬ್ಬರೂ ಬಂದು ವಿಜಯಲಕ್ಷ್ಮಿ ಬಡಾವಣೆಯಲ್ಲಿರುವ ನಟರಾಜ್ ಎಂಬವರ ಮನೆಯನ್ನು ಬಾಡಿಗೆಗೆ ಪಡೆದಿದ್ದರು.

ಕರಾರುಪತ್ರದ ವಿಚಾರವಾಗಿ ಮಾತನಾಡಿದಾಗ ಒಂದೇ ತಿಂಗಳಿಗೆ ಮನೆ ಖಾಲಿ ಮಾಡುವುದಾಗಿ ಹೇಳಿದ್ದರಿಂದ ಮಾಲೀಕರು ಕರಾರುಪತ್ರವನ್ನು ಮಾಡಿಕೊಂಡಿರಲಿಲ್ಲ ಎಂದು ಮಾಲೀಕರು ಹೇಳಿದ್ದರು. ಮನೆ ಬಳಿ ಬಂದಾಗೆಲ್ಲ ಬಾಗಿಲು ಹಾಕಿರುತ್ತಿತ್ತು. ಮಾರ್ಚ್ 1ರಂದು ಮನೆಯೊಳಗಿಂದ ದುರ್ವಾಸನೆ ಬರುತ್ತಿದ್ದರಿಂದ ಪರಿಶೀಲನೆ ನಡೆಸಿದಾಗ ಮೋಹನ್ ಕೃಷ್ಣನ ಶವ ಕೊಳೆತ ಸ್ಥಿತಿಯಲ್ಲಿ ಪತ್ತೆಯಾಗಿದೆ. ತಕ್ಷಣ ಸ್ಥಳೀಯರು ಬಾಗಲುಗುಂಟೆ ಠಾಣೆ ಪೊಲೀಸರಿಗೆ ಮಾಹಿತಿ ನೀಡಿದ್ದರು. ತನಿಖೆ ಕೈಗೆತ್ತಿಕೊಂಡ ಪೊಲೀಸರು ಮೊಬೈಲ್ ಲೊಕೇಶನ್ ಮತ್ತು ಕಾಲ್ ರೆಕಾರ್ಡ್ ಆಧರಿಸಿ ಬಿಂದು, ವಿನಯ್ ಹಾಗೂ ಧನುಷ್‌ನನ್ನು ಬಂಧಿಸಿ ವಿಚಾರಣೆ ನಡೆಸಿದಾಗ ಸತ್ಯಾಂಶ ಬಯಲಾಗಿದೆ.

ಮೋಹನ್ ಕೃಷ್ಣನ ಜೊತೆಯಲ್ಲಿದ್ದಾಗಲೇ ವಿನಯ್ ಜೊತೆ ಬಿಂದು ಪ್ರೀತಿಯಲ್ಲಿ ಬಿದ್ದಿದ್ದಳು. ವಿನಯ್ ಸಹ ಆಕೆಯನ್ನು ಮದುವೆಯಾಗುವ ಇಂಗಿತ ವ್ಯಕ್ತಪಡಿಸಿದ್ದ. ಮದುವೆಗೆ ಮೋಹನ್ ಕೃಷ್ಣ ಅಡ್ಡಿಯಾಗಬಹುದು ಎಂದು ಇಬ್ಬರೂ ಸಹ ಆತನ ಹತ್ಯೆಗೆ ಸ್ಕೆಚ್ ಹಾಕಿದ್ದರು. ಫೆಬ್ರವರಿ 18ರಂದು ರಾತ್ರಿ ಮೋಹನ್ ಕೃಷ್ಣ, ಬಿಂದು, ಆಕೆಯ ಹೊಸ ಪ್ರಿಯಕರ ವಿನಯ್ ಹಾಗೂ ಧನುಷ್ ಎಲ್ಲರೂ ಸೇರಿ ಪಾರ್ಟಿ ಮಾಡಿದ್ದರು. ಈ ವೇಳೆ ಕುಡಿದ ಮತ್ತಿನಲ್ಲಿದ್ದ ಮೋಹನ್ ಬಿಂದುವಿನ ಮೇಲೆ ಲೈಂಗಿಕ ದೌರ್ಜನ್ಯಕ್ಕೆ ಮುಂದಾಗಿದ್ದ. ಆಗ ಅಲ್ಲೇ ಇದ್ದ ವಿನಯ್ ಕೋಪಗೊಂಡು ತನ್ನ ಬಳಿಯಿದ್ದ ಚಾಕುವಿನಿಂದ ಮೋಹನ್ ಕೃಷ್ಣನಿಗೆ ಮನಬಂದಂತೆ ಇರಿದಿದ್ದ. ಆತ ಜೋರಾಗಿ ಕಿರುಚಾಡಲು ಶುರು ಮಾಡಿದಾಗ ಮೂವರೂ ಸೇರಿ ಆತನ ಮುಖಕ್ಕೆ ಮತ್ತು ಮೂಗಿಗೆ ಸೆಲ್ಲೋ ಟೇಪ್ ಸುತ್ತಿ ಉಸಿರುಗಟ್ಟಿಸಿ ಹತ್ಯೆಗೈದಿದ್ದರು. ಬಳಿಕ ಮನೆ ಬಾಗಿಲು ಹಾಕಿಕೊಂಡು ಪರಾರಿಯಾಗಿದ್ದರು ಎಂದು ಪೊಲೀಸರು ತಿಳಿಸಿದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ನಿಮ್ಮೂರು ಸುದ್ದಿ

ಸಂಪಾದಕೀಯ

ಇರಾನ್ ಮೇಲೆ ಅಮೆರಿಕ-ಇಸ್ರೇಲ್ ದಾಳಿ: ಅಮೆರಿಕಕ್ಕೆ ಧಿಕ್ಕಾರ ಘೋಷಣೆ



ಅಮೆರಿಕ-ಇಸ್ರೇಲ್ ಜಂಟಿಯಾಗಿ ಇರಾನ್ ಮೇಲೆ ವೈಮಾನಿಕ ದಾಳಿ ನಡೆಸಿದ್ದು, ಇದರಿಂದಾಗಿ ಇರಾನ್ ಸುಪ್ರೀಂ ಲೀಡರ್ ಆಯತೊಲ್ಲಾ ಅಲಿ ಖಮೇನಿ ಹತ್ಯೆಗೀಡಾಗಿದ್ದಾರೆ. ಇವರ ನಿಧನದ ಸುದ್ದಿಯನ್ನು ಕೇಳುತ್ತಿದ್ದಂತೆ ರಾಜ್ಯದ ಮಿನಿ ಇರಾನ್ ಎಂದೇ ಗುರುತಿಸಿಕೊಂಡಿರುವ ಚಿಕ್ಕಬಳ್ಳಾಪುರದ ಅಲಿಪುರದಲ್ಲಿ ಶೋಕ ಮಡುಗಟ್ಟಿದ್ದು, ಅಲ್ಲಿನ ಗ್ರಾಮಸ್ಥರು ಸ್ವಯಂ ಪ್ರೇರಿತವಾಗಿ ಅಂಗಡಿಗಳನ್ನು ಬಂದ್ ಮಾಡಿ, 3 ದಿನಗಳ ಕಾಲ ಕರಾಳ ದಿನವೆಂದು ಶೋಕಾರಚಣೆ ಮಾಡಲು ಮುಂದಾಗಿದ್ದಾರೆ.

ಸುಮಾರು 25,000 ಜನರಿರುವ ಪ್ರಧಾನ ಶಿಯಾ ಮುಸ್ಲಿಂ ಜನಸಂಖ್ಯೆ ಮತ್ತು ಇಸ್ಲಾಮಿಕ್ ಗಣರಾಜ್ಯದೊಂದಿಗಿನ ಆಳವಾದ ಐತಿಹಾಸಿಕ, ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಸಂಬಂಧಗಳಿಂದಾಗಿ ದೀರ್ಘಕಾಲದಿಂದಲೂ ಮಿನಿ ಇರಾನ್ ಎಂದು ಕರೆಯಲ್ಪಡುತ್ತಿದ್ದ ಅಲಿಪುರ ನಿವಾಸಿಗಳು ಬೀದಿಗಿಳಿದು ಖಮೇನಿಯ ಭಾವಚಿತ್ರಗಳನ್ನು ಹೊತ್ತುಕೊಂಡು, ಕಪ್ಪು ಧ್ವಜಗಳನ್ನು ಹಿಡಿದು ಶಾಂತಿಯುತ ಮೆರವಣಿಗೆಗಳಲ್ಲಿ ಪಾಲ್ಗೊಂಡಿದ್ದಾರೆ. ದಾಳಿಗಳನ್ನು ಖಂಡಿಸಿ ಘೋಷಣೆಗಳನ್ನು ಕೂಗುತ್ತಿದ್ದಾರೆ. ಸ್ಥಳೀಯ ನಾಯಕರು ಸರ್ವೋಚ್ಚ ನಾಯಕನ ಮರಣವನ್ನು ಮುಸ್ಲಿಂ ಜಗತ್ತಿಗೆ ದೊಡ್ಡ ನಷ್ಟ ಎಂದು ಬಣ್ಣಿಸಿದ್ದಾರೆ.

ಅಲಿಪುರದಲ್ಲಿ, ಈ ಸುದ್ದಿ ವೈಯಕ್ತಿಕವಾಗಿ ಎಲ್ಲರ ಗಮನ ಸೆಳೆದಿದೆ. 1981ರಲ್ಲಿ ಭಾರತ ಪ್ರವಾಸದ ಸಮಯದಲ್ಲಿ ಖಮೇನಿ ಸ್ವತಃ ಈ ಗ್ರಾಮಕ್ಕೆ ಭೇಟಿ ನೀಡಿದ್ದರು. ಆಗ ಅವರಿನ್ನೂ ಇರಾನಿನ ಪರಮೋಚ್ಚ ನಾಯಕ ಆಗಿರಲಿಲ್ಲ. ಅವರು ಗ್ರಾಮಕ್ಕೆ ಆಗಮಿಸಿದ್ದರ ನೆನಪು ಸ್ಥಳೀಯರಲ್ಲಿ ಇನ್ನೂ ಹಸಿರಾಗಿದೆ.

ಇರಾನಿನ ಬೆಂಬಲದೊಂದಿಗೆ ಅಲಿಪುರದಲ್ಲಿ ನಿರ್ಮಿಸಲಾದ ಆಸ್ಪತ್ರೆಯನ್ನು ಖಮೇನಿ ಉದ್ಘಾಟಿಸಿದ್ದರು. ಬಳಿಕ ಅಲ್ಲಿಯ ವಿದ್ವಾಂಸರು ಮತ್ತು ನಿವಾಸಿಗಳೊಂದಿಗೆ ಸಮಯ ಕಳೆದಿದ್ದು, ಸಮುದಾಯ ಮತ್ತು ಇರಾನ್ ನಡುವಿನ ಆಜೀವ ಬಾಂಧವ್ಯವನ್ನು ಬಲಪಡಿಸಿದ್ದರು ಎಂಬುದನ್ನು ಸ್ಥಳೀಯರು ನೆನಪಿಸಿಕೊಳ್ಳುತ್ತಿದ್ದಾರೆ. ಅಲ್ಲದೆ ಇಲ್ಲಿನ ಸುಮಾರು 25ಸಾವಿರಕ್ಕೂ ಅಧಿಕ ಶಿಯಾ ಮುಸ್ಲಿಂ ಪಂಗಡದವರು ಖಮೇನಿಯವರನ್ನು ತಮ್ಮ ಧರ್ಮಗುರು ಎಂದು ಭಾವಿಸುತ್ತಾರೆ.

ಅಲಿಪುರದ ಅನೇಕ ಕುಟುಂಬಗಳು ಇರಾನ್‌ನಲ್ಲಿ ಅಧ್ಯಯನ, ಕೆಲಸ ಮತ್ತು ವ್ಯಾಪಾರ ಮಾಡಿಕೊಂಡು ಬದುಕು ಕಟ್ಟಿಕೊಂಡಿವೆ. ಗ್ರಾಮದಲ್ಲಿ ಗುಮ್ಮಟಾಕಾರದ ಮಸೀದಿಗಳು, ಇಮಾಮ್ ಖಮೇನಿ ರಸ್ತೆ ಮತ್ತು ಇರಾನಿನ ಶಿಯಾ ಸಂಪ್ರದಾಯಗಳನ್ನು ಪ್ರತಿಧ್ವನಿಸುವ ಅಂಜುಮನ್-ಎ-ಜಾಫ್ರಿಯಾ ಟ್ರಸ್ಟ್‌ನಂತಹ ಸಂಸ್ಥೆಗಳೂ ಇವೆ.

ಈಗ ಈ ಗ್ರಾಮದ ಹಲವು ವಿದ್ಯಾರ್ಥಿಗಳು ಧಾರ್ಮಿಕ ಶಿಕ್ಷಣ ಸೇರಿದಂತೆ ವೈದ್ಯಕೀಯ ಶಿಕ್ಷಣವನ್ನು ಪಡೆಯಲು ಇರಾನ್ ಹೋಗಿರುವವರೆಲ್ಲರೂ ಈ ಯುದ್ದದಿಂದಾಗಿ ಅಪಾಯದಲ್ಲಿದ್ದು, ಶೀಘ್ರವೇ ಅವರು ಭಾರತಕ್ಕೆ ಸುರಕ್ಷಿತವಾಗಿ ಮರಳಲಿ ಎಂದು ಪ್ರಾರ್ಥನೆಗಳನ್ನೂ ಸಹ ನಡೆಸುತ್ತಿದ್ದಾರೆ.

ಸ್ಥಳೀಯ ಯುವಕ ಮಾತನಾಡಿ, ''ಖಮೇನಿ ಅವರು ಕೇವಲ ಶಿಯಾ ಸಮುದಾಯದ ಜನತೆಗಾಗಿ ಹೋರಾಟಗಳನ್ನು ನಡೆಸಲಿಲ್ಲ. ಬದಲಿಗೆ ಇಡೀ ಜಗತ್ತಿನ ಮಾನವೀಯತೆಗಾಗಿ ತುಡಿಯುತ್ತಿದ್ದ ಜೀವವದು. ಅಂತಹ ನಾಯಕನನ್ನು ಅಮೆರಿಕ ಇಂದು ಹೊಡೆದುರುಳಿಸಿದೆ. ಅಮೆರಿಕದ ಇಂತಹ ಅಮಾನವೀಯ ಕೃತ್ಯಕ್ಕೆ ಧಿಕ್ಕಾರ'' ಎಂದರು.

ಘಟನೆ ಹಿನ್ನೆಲೆ

ಪರಮಾಣು ಒಪ್ಪಂದದ ಮಾತುಕತೆಗೆ ಸ್ಪಂದಿಸದ ಇರಾನ್ ಮೇಲೆ ಅಮೆರಿಕ-ಇಸ್ರೇಲ್ ಜಂಟಿಯಾಗಿ ದಾಳಿ ನಡೆಸಿದ್ದು, ದಾಳಿಯಲ್ಲಿ ಇರಾನ್‌ನ ಪರಮೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಅವರನ್ನು ಹತ್ಯೆ ಮಾಡಲಾಗಿದೆ. ಅಲ್ಲದೆ ಇರಾನ್‌ನ ರಾಜಧಾನಿ ಟೆಹ್ರಾನ್ ಸೇರಿದಂತೆ ಪ್ರಮುಖ ನಗರಗಳಲ್ಲಿ ಸ್ಫೋಟದ ಸದ್ದು ಮೊಳಗಿದ್ದು, ಆಕಾಶದಲ್ಲಿ ದಟ್ಟವಾದ ಹೊಗೆ ಆವರಿಸಿದೆ. ಜನರು ಪ್ರಾಣಭಯದಿಂದ ಸುರಕ್ಷಿತ ಸ್ಥಳಗಳತ್ತ ಓಡುತ್ತಿರುವುದು ಕಂಡುಬಂದಿದೆ. ಈ ದಾಳಿಯಲ್ಲಿ ಕೇವಲ ಸೇನಾ ನೆಲೆಗಳು ಮಾತ್ರವಲ್ಲದೆ ನಾಗರಿಕ ಪ್ರದೇಶಗಳಿಗೂ ಹಾನಿಯಾಗಿದೆ.

ಇರಾನ್‌ನ 30ಕ್ಕೂ ಹೆಚ್ಚು ನಗರಗಳ ಮೇಲೆ ದಾಳಿ ನಡೆಸಲಾಗಿದೆ ಎಂದು ವರದಿಯಾಗಿದೆ. ರಾಜಧಾನಿ ಟೆಹ್ರಾನ್‌ನ ಜಮ್ಶೂರಿ, ಯೂನಿವರ್ಸಿಟಿ ಸ್ಟ್ರೀಟ್ ಮತ್ತು ಉತ್ತರ ಭಾಗದ ಸೈಯದ್ ಖಂದಾನ್ ಪ್ರದೇಶ, ಅಣುಶಕ್ತಿ ಸಂಶೋಧನಾ ಕೇಂದ್ರವಿರುವ ಇಸ್ಫಹಾನ್ ಮತ್ತು ನಟಾಂಜ್, ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಪ್ರಮುಖ ನೆಲೆಗಳು ಬಂದರು ನಗರಿ ಬುಶೆಹರ್ ಸೇರಿದಂತೆ ಪ್ರಮುಖ ನಗರ ಮೇಲೆ ವೈಮಾನಿಕ ದಾಳಿ ನಡೆಸಲಾಗಿದೆ.

ಇರಾನ್ - ಇಸ್ರೇಲ್ ಯುದ್ಧ ಭಾರತಕ್ಕೇನು ನಷ್ಟ?

ಇರಾನ್-ಇಸ್ರೇಲ್-ಅಮೆರಿಕ ನಡುವಿನ ಉದ್ವಿಗ್ನತೆ ಕೇವಲ ಮೂರು ದೇಶಗಳ ಸಮಸ್ಯೆಯಲ್ಲ. ಇದು ಜಾಗತಿಕ ಭದ್ರತೆ, ತೈಲ ಸರಬರಾಜು ಮತ್ತು ಆರ್ಥಿಕತೆ ಮೇಲೆ ಪರಿಣಾಮ ಬೀರುವ ಪ್ರಮುಖ ಬೆಳವಣಿಗೆಯಾಗಿದೆ. ದೀರ್ಘಕಾಲದ ಇಸ್ರೇಲ್-ಇರಾನ್ ಸಂಘರ್ಷವು ಭಾರತದ ಸರಕು ಸಾಗಣೆ (ಆಮದು-ರಫ್ತು) ಯೋಜನೆಗಳ ಮೇಲೆ ಪರಿಣಾಮ ಬೀರಬಹುದು. ಜಗತ್ತಿನ ಹಲವು ದೇಶಗಳಿಗೆ ದೊಡ್ಡ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ.


ಪರಮಾಣು ಒಪ್ಪಂದದ ಮಾತುಕತೆಗೆ ಸ್ಪಂದಿಸದ ಹಿನ್ನೆಲೆ, ಇರಾನ್ ಮೇಲೆ ಯುದ್ಧದಾಹಿ ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ದಾಳಿ ನಡೆಸುತ್ತಿದ್ದು, ಟೆಹ್ರಾನ್ ಸೇರಿದಂತೆ ಇರಾನ್‌ನ ಹಲವಾರು ಪ್ರದೇಶಗಳ ಮೇಲೆ ದಾಳಿ ನಡೆಸುತ್ತಿದೆ. ಸದ್ಯ ಮಧ್ಯಪ್ರಾಚ್ಯದಲ್ಲಿ ಯುದ್ಧದ ಭೀತಿ ಆವರಿಸಿದೆ. ಇರಾನ್ ಮೇಲೆ ಗದಾಪ್ರಹಾರ ನಡೆಸುತ್ತಿರುವ ಅಮೆರಿಕ ವಿಶ್ವದ ಸರ್ವಾಧಿಕಾರಿ ಪಟ್ಟಕ್ಕೇರುವ ದುರಾಸೆಯಲ್ಲಿದೆ.

ಇರಾನಿನ 30ಕ್ಕೂ ಹೆಚ್ಚು ನಗರಗಳ ಮೇಲೆ ದಾಳಿ ನಡೆಸಲಾಗಿದೆ ಎಂದು ವರದಿಯಾಗಿದೆ. ದೇಶದ ದಕ್ಷಿಣ ಭಾಗದ ಮಿನಾಬ್‌ನಲ್ಲಿರುವ ಬಾಲಕಿಯರ ಶಾಲೆಯಲ್ಲಿ ದಾಳಿಗೆ ಕನಿಷ್ಠ 85 ಮಂದಿ ಸಾವನ್ನಪ್ಪಿದ್ದಾರೆ. ಇರಾನ್‌ನ ಪರಮೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಅವರು ಹತ್ಯೆಯಾಗಿದ್ದಾರೆ. ಇರಾನ್ ಕೂಡ ಇಸ್ರೇಲ್ ರಾಜಧಾನಿ ಮತ್ತು ಪಶ್ಚಿಮ ಏಷ್ಯಾದಲ್ಲಿರುವ ಅಮೆರಿಕದ ವಾಯುನೆಲೆಗಳಿರುವ ಇರಾಕ್, ಇಸ್ರೇಲ್, ಕುವೈತ್, ಬಹ್ರೇನ್, ಕತಾರ್ ಯುಎಇಗಳನ್ನು ಗುರಿಯಾಗಿಸಿಕೊಂಡು ಪ್ರತೀಕಾರದ ದಾಳಿ ನಡೆಸಿದೆ. ಕತಾರ ಯುನೈಟೆಡ್ ಅರಬ್ ಎಮಿರೇಟ್ಸ್, ಬಹ್ರೇನ್ ಮತ್ತು ಕುವೈತ್‌ನಲ್ಲಿ ಸ್ಫೋಟಗಳ ಶಬ್ದಗಳು ಕೇಳಿಬಂದಿವೆ.

ಯುದ್ಧದ ಭೀಕರತೆ ಹೆಚ್ಚಾಗಿರುತ್ತದೆ. ಇದರಿಂದ ಭಾರತ ದೇಶಕ್ಕೆ, ನಮ್ಮ ರೈತರಿಗೆ, ನಮಗೆ ಆಗುವ ಅನಾನುಕೂಲಗಳೇನು ಎಂಬುದರ ಅರಿವೇಯೇ ಇಲ್ಲದ ಭಾರತದ ಕೆಲವು ಜನರು ಸಂಭ್ರಮಿಸುತ್ತಿದ್ದಾರೆ. ನಾಲ್ಕೈದು ದಿನಗಳ ಈ ಯುದ್ಧ ದೇಶ - ದೇಶಗಳ ನಡುವೆ ನಡೆಯುವ ವ್ಯವಹಾರಗಳನ್ನ ಮುಂದಿನ ಎರಡು ಮೂರು ದಶಕಗಳ ಕಾಲ ಬಾದಿಸುತ್ತದೆ. ದಶಕಗಳಿಂದ ದೇಶ - ದೇಶಗಳು ಕಟ್ಟಿಕೊಂಡು ಬಂದಿರುವ ಆರ್ಥಿಕ ವ್ಯವಸ್ಥೆಯನ್ನು ನುಚ್ಚು ನೂರು ಮಾಡುತ್ತದೆ. ನಾಗರಿಕತೆಯನ್ನು ಅನಾಗರಿಕಗೊಳಿಸುತ್ತದೆ. ಇದಕ್ಕೆಲ್ಲ ಮೂಲ ಅಮೆರಿಕದ ಸಾಮ್ರಾಜ್ಯ ಶಾಹಿ ನಡವಳಿಕೆ. ಈ ಹೋರಾಟಗಳಲ್ಲಿ ನಾವು ಯಾವಾಗಲೂ ಸಾಮ್ರಾಜ್ಯಶಾಹಿ ತನದಿಂದ ತೊಂದರೆ ಅನುಭವಿಸುತ್ತಿರುವವ ಪರವಾಗಿ ನಿಲ್ಲಬೇಕು. ಈ ಸಾಮಾನ್ಯ ತಿಳುವಳಿಕೆ ನಮ್ಮಲ್ಲಿ ಇರಬೇಕು. ಈ ಸಂಘರ್ಷವು ಈಗಾಗಲೇ ಭಾರತದ ಆರ್ಥಿಕ ಹಿತಾಸಕ್ತಿಗಳ ಮೇಲೆ ಪರಿಣಾಮ ಬೀರಲು ಆರಂಭಿಸಿದೆ ಎಂದು ವರದಿಗಳು ಹೇಳುತ್ತಿವೆ.

ಹೌದು, ಈ ದಾಳಿಗಳು ಹತ್ತಿರದ ತೈಲ ಉತ್ಪಾದಕ ಗಲ್ಫ್ ಅರಬ್ ದೇಶಗಳನ್ನು ಆತಂಕಕ್ಕೆ ದೂಡಿದೆ. ದೇಶಗಳಲ್ಲಿ ಉದ್ವಿಗ್ನತೆ ಹೆಚ್ಚಾದ ಹಿನ್ನೆಲೆ ತೈಲ ಬೆಲೆಗಳು ಏಳು ತಿಂಗಳ ಗರಿಷ್ಠ ಮಟ್ಟಕ್ಕೆ ತಲುಪಿವೆ. ದೇಶಗಳಲ್ಲಿ ಶಾಂತಿ ನೆಲೆಸಿದರೇ ಬೆಲೆಗಳು ಇಳಿಯಬಹುದು. ಇಲ್ಲವಾದರೇ ಬೆಲೆಗಳು ಹೆಚ್ಚಾಗಬಹುದು.

ಸದ್ಯ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ



ಬೆಲೆಗಳು ಏರಿಕೆಯಾಗಿವೆ. ಜಾಗತಿಕವಾಗಿ ತೈಲ ಆಮದುದಾರರಲ್ಲಿ ಒಂದಾಗಿರುವ ಭಾರತ ವಾರ್ಷಿಕವಾಗಿ ಸುಮಾರು 2 ಬಿಲಿಯನ್ ಬ್ಯಾರೆಲ್ ತೈಲವನ್ನ ಆಮದು ಮಾಡಿಕೊಳ್ಳುತ್ತದೆ. ಇದರಿಂದ ತೈಲ ಬೆಲೆಯಲ್ಲಿ ಪ್ರತಿ 1 ಡಾಲರ್ ಏರಿಕೆಯಿಂದ ಆಮದು ಬಿಲ್ ವರ್ಷಕ್ಕೆ 2 ಬಿಲಿಯನ್ ಡಾಲರ್ ಹೆಚ್ಚಾಗಬಹುದು. ಹೆಚ್ಚಿನ ತೈಲ ಬೆಲೆ ಭಾರತಕ್ಕೆ ಅನಾನೂಕೂಲಕರ. ಇಷ್ಟೇ ಅಲ್ಲ, ತೈಲ ಪೂರೈಕೆ ಅಸ್ತವ್ಯಸ್ತವಾಗುವ ಭಯವೂ ಇದೆ.

ವಿಶ್ವದಲ್ಲಿ ಬಳಸುವ ತೈಲ ಮತ್ತು ನೈಸರ್ಗಿಕ ಅನಿಲದ ಸುಮಾರು ಐದನೇ ಒಂದು ಭಾಗವಾಗಿರುವ ಹಾರ್ಮುಜ್ ಜಲಸಂಧಿಯ ಮೂಲಕ ಇಂಧನ ಹರಿವನ್ನು ಅಡ್ಡಿಪಡಿಸುವ ಅಪಾಯವೂ ಇದೆ. ಇದು ದೀರ್ಘಕಾಲದವರೆಗೂ ಮುಂದುವರೆದರೆ ಇನ್ನೂ ಅನಾನೂಕೂಲವಾಗಲಿದೆ. ಯುದ್ಧದ ಭೀತಿ ಹೆಚ್ಚಿದಂತೆ, ತೈಲ ಬೆಲೆಗಳು ವಾರದಲ್ಲಿ ಪ್ರತಿ ಬ್ಯಾರೆಲ್‌ಗೆ 72 ಡಾಲರ್‌ಗಿಂತ ಹೆಚ್ಚು ಏರಿಕೆಯಾಗಿದೆ. ಜಾಗತಿಕ ಆರ್ಥಿಕತೆಗೆ ಭಾರಿ ಪರಿಣಾಮ ಉಂಟಾಗುತ್ತದೆ.

ಹೀಗಿರುವಾಗ, ವಿಶ್ವದಲ್ಲಿಯೇ ಭಾರತ ಮೂರನೇ ಅತಿದೊಡ್ಡ ತೈಲ ಬಳಕೆದಾರನಾಗಿರುವಾಗ ಭಾರತಕ್ಕೆ ಎಷ್ಟು ಸಂಕಷ್ಟ ಉಂಟಾಗಬಹುದು ಎಂದು ಯೋಚನೆ ಮಾಡಿ! 40%ಕ್ಕಿಂತ ಹೆಚ್ಚು ತೈಲ ಇಲ್ಲಿಂದಲೇ ಭಾರತ ಪಡೆಯುವಾಗ ಅಡ್ಡಿಯುಂಟಾದರೇ ಏನಾಗಬಹುದು?

ಜೊತೆಗೆ, ಭಾರತೀಯ ಬಾಸ್ಮತಿ ಅಕ್ಕಿಗೆ ಅತಿದೊಡ್ಡ ಮಾರುಕಟ್ಟೆಯಾಗಿರುವ ಇರಾನ್‌ನಲ್ಲಿ ಅಂತಾರಾಷ್ಟ್ರೀಯ ವಹಿವಾಟುಗಳು ಸ್ಥಗಿತಗೊಳ್ಳುತ್ತಿರುವ ಹಿನ್ನೆಲೆ, ಭಾರತದ ಅಕ್ಕಿ ರಫ್ತಿನ ಮೇಲೂ ನೇರ ಪರಿಣಾಮ ಬೀಳುತ್ತಿದೆ. ಭಾರತದ ಒಟ್ಟು ಬಾಸ್ಮತಿ ಅಕ್ಕಿ ರಫ್ತಿನಲ್ಲಿ ನಾಲ್ಕನೇ ಒಂದು ಭಾಗ ಅಂದರೆ 25% ಇರಾನ್‌ಗೆ ಹೋಗುತ್ತದೆ. 20% ಅಕ್ಕಿ ಇರಾಕ್‌ಗೆ ರಫ್ತಾಗಿದೆ ಎಂದು ಅಖಿಲ ಭಾರತ ಅಕ್ಕಿ ರಫ್ತುದಾರರ ಸಂಘ ಹೇಳುತ್ತದೆ.

ಈ ರಫ್ತುಗಳು 20 ಲಕ್ಷ ಟನ್‌ಗಳಿಗಿಂತ ಹೆಚ್ಚು ಬಾಸ್ಮತಿ ಅಕ್ಕಿಯನ್ನು ಹೊಂದಿವೆ. ಇದರ ಒಟ್ಟು ಮೌಲ್ಯವು 1.09 ಲಕ್ಷ ಕೋಟಿ ರೂ.ಗಿಂತಲೂ ಹೆಚ್ಚಿದೆ. ಇರಾನ್‌ನಲ್ಲಿನ ಸಂಘರ್ಷವು ಇರಾಕ್‌ಗೆ ಹೋಗಬೇಕಾದ ಅಕ್ಕಿ ರಫ್ತಿನ ಮೇಲೂ ಪರಿಣಾಮ ಬೀರಲಿದೆ. ಈಗ, ಈ 1.09 ಲಕ್ಷ ಕೋಟಿ ರೂ. ಮೌಲ್ಯದ ವಹಿವಾಟು ಆತಂಕಕ್ಕೆ ಸಿಲುಕಿದೆ. ಈಗ ಯುದ್ಧ ಪ್ರಾರಂಭವಾಗಿದ ಹಿನ್ನೆಲೆ, ಭಾರತೀಯ ಬಾಸ್ಮತಿ ಅಕ್ಕಿ ರಫ್ತುಗಳು ವಾಸ್ತವಿಕವಾಗಿ ಸ್ಥಗಿತಗೊಂಡಿವೆ. ಭಾರತದ ಅಕ್ಕಿ ರಫ್ತಾಗದೆ, ಭಾರತೀಯ ಮಾರುಕಟ್ಟೆಯಲ್ಲಿ ಅಕ್ಕಿ ದಾಸ್ತಾನು ಹೆಚ್ಚುವ ಮತ್ತು ಬೆಲೆ ಕುಸಿಯುವ ಆತಂಕವೂ ಇದೆ. ಇದು, ಮಾರುಕಟ್ಟೆಯಲ್ಲಿ ಅನಿಶ್ಚಿತತೆಯನ್ನು ಹುಟ್ಟುಹಾಕಿದೆ.

ಇನ್ನು ಈ ಇರಾನ್ ಸಂಘರ್ಷದ ಪ್ರಭಾವ ಭಾರತದ ಮೇಲೆ ಕೇವಲ ಅಕ್ಕಿ ರಫ್ತಿನಲ್ಲಿ ಮಾತ್ರವಲ್ಲ, ಚಹಾ ರಫ್ತಿನ ಮೇಲೂ ಬೀರಲಿದೆ. 2024-25ರಲ್ಲಿ, ಭಾರತದಿಂದ ಇರಾನ್‌ಗೆ ಸುಮಾರು 7,000 ಕೋಟಿ ರೂ. ಮೌಲ್ಯದ ಚಹಾವನ್ನು ರಫ್ತು ಮಾಡಿತ್ತು.

ಅಮೆರಿಕ-ಇಸ್ರೇಲ್ ಮತ್ತು ಇರಾನ್ ನಡುವಿನ ಕಾಳಗದಿಂದ ಇರಾಕ್, ಜೋರ್ಡಾನ್, ಲೆಬನಾನ್, ಸಿರಿಯಾ, ಯೆಮೆನ್ ಸೇರಿ ಹಲವು ರಾಷ್ಟ್ರಗಳಿಗೆ ಸರಕುಗಳನ್ನು ರಫ್ತು ಮಾಡಲು ಸಾಧ್ಯವಾಗುತ್ತಿಲ್ಲ. ಹತ್ತಾರು ದೇಶಗಳಿಗೆ ಉತ್ಪನ್ನಗಳ ಸಾಗಣೆಗೆ ಈಗಾಗಲೇ ತಡೆಹಿಡಿಯಲಾಗಿದೆ. ಇದು ಭಾರತಕ್ಕೆ ದೊಡ್ಡ ಸಮಸ್ಯೆಯನ್ನು ಸೃಷ್ಟಿಸಿದೆ. ಈಗ, ಇಂಧನ ಬೆಲೆ ಹೆಚ್ಚಾದರೆ ಸಾರಿಗೆ ವೆಚ್ಚ ಹೆಚ್ಚುತ್ತದೆ ಇದರಿಂದ, ಆಹಾರ ಸೇರಿದಂತೆ ದೈನಂದಿನ ವಸ್ತುಗಳ ಬೆಲೆಯೂ ಏರಬಹುದು.

ಇನ್ನು ಇರಾನ್‌ನಲ್ಲಿ ಸುಮಾರು 10,000 ಭಾರತೀಯ ವಿದ್ಯಾರ್ಥಿಗಳು ಮತ್ತು ವೃತ್ತಿಪರರು ಹಾಗೂ ಇಸ್ರೇಲ್‌ನಲ್ಲಿ ಸುಮಾರು 25,000 ಕಾರ್ಮಿಕರು, ವಿದ್ಯಾರ್ಥಿಗಳು ಹಾಗೂ ಸಂಶೋಧಕರು ಇದ್ದಾರೆ. ಬೃಹತ್ ಸಂಖ್ಯೆಯ ಭಾರತೀಯರು ಉಭಯ ರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ಧದಲ್ಲಿ ಸಿಲುಕಿದ್ದಾರೆ. ಯುದ್ಧ ವಿಸ್ತಾರವಾದರೆ ಮಧ್ಯಪ್ರಾಚ್ಯ ದೇಶಗಳಲ್ಲಿ ಲಕ್ಷಾಂತರ ಭಾರತೀಯರ ಉದ್ಯೋಗದ ಮೇಲೆ ಪರಿಣಾಮ ಬೀಳುವ ಸಾಧ್ಯತೆ ಇದೆ.

ಇನ್ನು, ಇಂಡಿಯಾ ಮಿಡಲ್ ಈಸ್ಟ್ ಯೂರೋಪ್ ಎಕನಾಮಿಕ್ ಕಾರಿಡಾರ್ ಯೋಜನೆಗೆ ಈಗಾಗಲೇ ಅಡ್ಡಿಯುಂಟಾಗಿದೆ. ಏಕೆಂದರೆ, ಈ ಕಾರಿಡಾರ್‌ಗೆ ಅರಬ್ ರಾಷ್ಟ್ರಗಳು ಮತ್ತು ಇಸ್ರೇಲ್‌ನ ಹೈಫಾ ಬಂದರಿನ ಮೂಲಕ ಸಂಪರ್ಕ ಬೇಕಾಗಿದೆ. ಪ್ರಸ್ತುತ ಸಂಘರ್ಷವು ಛಾಬಹಾರ್ ಬಂದರು ಯೋಜನೆ, ಅಫ್ಘಾನಿಸ್ತಾನ, ಮಧ್ಯ ಏಷ್ಯಾ ಯುರೇಷಿಯಾದ ವ್ಯಾಪಾರ ಸಂಪರ್ಕದ ಅಂತಾರಾಷ್ಟ್ರೀಯ ಉತ್ತರ-ದಕ್ಷಿಣ ಸಾರಿಗೆ ಕಾರಿಡಾರ್ ಮೇಲಿನ ಭಾರತದ ಹೂಡಿಕೆಯ ಮೇಲೆ ಪರಿಣಾಮ ಬೀರಲಿದೆ. ಇಂತಹ ಪರಿಸ್ಥಿತಿಯಲ್ಲಿ ಭಾರತಕ್ಕೆ ಇರುವ ಉತ್ತಮ ಮಾರ್ಗ ಸಂಘರ್ಷವನ್ನು ಕೊನೆಗೊಳಿಸಲು, ಕದನ ವಿರಾಮಕ್ಕಾಗಿ ಅಂತಾರಾಷ್ಟ್ರೀಯ ಕರೆ ಕೊಡುವುದು. ಆದರೆ, ಅದನ್ನು ಮಾಡುವ ಧೈರ್ಯ ಮೋದಿಗಿಲ್ಲ!

ಒಟ್ಟಾರೆ, ಇರಾನ್-ಇಸ್ರೇಲ್-ಅಮೆರಿಕ ನಡುವಿನ ಉದ್ವಿಗ್ನತೆ ಕೇವಲ ಮೂರು ದೇಶಗಳ ಸಮಸ್ಯೆಯಲ್ಲ. ಇದು ಜಾಗತಿಕ ಭದ್ರತೆ, ತೈಲ ಸರಬರಾಜು ಮತ್ತು ಆರ್ಥಿಕತೆ ಮೇಲೆ ಪರಿಣಾಮ ಬೀರುವ ಪ್ರಮುಖ ಬೆಳವಣಿಗೆಯಾಗಿದೆ. ದೀರ್ಘಕಾಲದ ಇಸ್ರೇಲ್-ಇರಾನ್ ಸಂಘರ್ಷವು ಭಾರತದ ಸರಕು ಸಾಗಣೆ (ಆಮದು-ರಫ್ತು) ಯೋಜನೆಗಳ ಮೇಲೆ ಪರಿಣಾಮ ಬೀರಬಹುದು. ಜಗತ್ತಿನ ಹಲವು ದೇಶಗಳಿಗೆ ದೊಡ್ಡ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ. ಸದ್ಯಕ್ಕೆ ತೈಲ ಆಮದು ಮಾಡಿಕೊಂಡು ಪರಿಸ್ಥಿತಿ ನಿಭಾಯಿಸುತ್ತಿದ್ದರೂ, ಈ ಯುದ್ಧ ಮುಂದುವರೆದರೆ ಭಾರತದ ಆರ್ಥಿಕತೆಯ ಸ್ಥಿರತೆಗೆ ದೊಡ್ಡ ಸವಾಲು ಎದುರಾಗಲಿದೆ.

ಸಿಬಿಐ, ಇ.ಡಿಗೆ ಚಾಟಿ ಬೀಸಿದ 'ಎಂಟೆದೆಯ ಬಂಟ' ನ್ಯಾಯಾಧೀಶ ಜಿತೇಂದ್ರ ಸಿಂಗ್

ಪ್ರಜಾಪ್ರಭುತ್ವದಲ್ಲಿ ತನಿಖಾ ಸಂಸ್ಥೆಗಳು ಮತ್ತು ಅಧಿಕಾರದ ದುರ್ಬಳಕೆಯ ಬಗ್ಗೆ ತೀವ್ರ ಚರ್ಚೆ ನಡೆಯುತ್ತಿರುವ ಪ್ರಸ್ತುತ ಸನ್ನಿವೇಶದಲ್ಲಿ, ನ್ಯಾಯಾಧೀಶ ಜಿತೇಂದ್ರ ಸಿಂಗ್ ಅವರ ನಡೆ ನ್ಯಾಯಾಂಗದ ಮೇಲಿನ ಜನಸಾಮಾನ್ಯರ ನಂಬಿಕೆಯನ್ನು ಮತ್ತಷ್ಟು ಗಟ್ಟಿಗೊಳಿಸಿದೆ. ''ತನಿಖೆಯು ಸತ್ಯವನ್ನು ಹೊರತರಬೇಕೇ ಹೊರತು, ತನಿಖಾ ವೈಫಲ್ಯಗಳನ್ನು ಮುಚ್ಚಿಹಾಕಲು ಬಳಸುವ ತಂತ್ರವಾಗಬಾರದು'' ಎಂಬ ಅವರ ತೀಕ್ಷ್ಣ ಮಾತುಗಳು ಅವರ ವ್ಯಕ್ತಿತ್ವಕ್ಕೆ ಕನ್ನಡಿ ಹಿಡಿಯುತ್ತವೆ

ದೇಶದ ರಾಜಕೀಯ ಇತಿಹಾಸದಲ್ಲಿ ತೀವ್ರ ಸಂಚಲನ ಸೃಷ್ಟಿಸಿದ್ದ ಹಾಗೂ ದೆಹಲಿಯ ಆಡಳಿತಾರೂಢ ಸರ್ಕಾರದ ಬುಡವನ್ನೇ ಅಲುಗಾಡಿಸಿದ್ದ ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಮತ್ತು ಮನೀಶ್ ಸಿಸೋಡಿಯಾ ಸೇರಿದಂತೆ 23 ಜನರನ್ನು ದೋಷಮುಕ್ತಗೊಳಿಸಿರುವ ರೌಸ್ ಅವೆನ್ಯೂ ನ್ಯಾಯಾಲಯದ ವಿಶೇಷ ನ್ಯಾಯಾಧೀಶ ಜಿತೇಂದ್ರ ಸಿಂಗ್ ಅವರ ಹೆಸರು ಇದೀಗ ದೇಶಾದ್ಯಂತ ಪ್ರತಿಧ್ವನಿಸುತ್ತಿದೆ. ಕೇಂದ್ರೀಯ ತನಿಖಾ ದಳದ (ಸಿಬಿಐ) ಕಾರ್ಯವೈಖರಿಯನ್ನು ಕಟುವಾಗಿ ಟೀಕಿಸಿ, 598 ಪುಟಗಳ ಐತಿಹಾಸಿಕ ತೀರ್ಪು ನೀಡಿರುವ ಅವರು, ನ್ಯಾಯಾಂಗ ವಲಯದಲ್ಲಿ ಎಂಟೆದೆಯ ಬಂಟ ಎಂದೇ ಬಿಂಬಿತವಾಗುತ್ತಿದ್ದಾರೆ.

ದೆಹಲಿಯ ಉನ್ನತ ನ್ಯಾಯಾಂಗ ಸೇವೆಯ (ಡಿಎಚ್‌ಜೆಎಸ್) ಹಿರಿಯ ಅಧಿಕಾರಿಯಾಗಿದ್ದ ಜಿತೇಂದ್ರ ಸಿಂಗ್ (ಜಿತೇಂದ್ರ ಪ್ರತಾಪ್ ಸಿಂಗ್), ಅಕ್ಟೋಬರ್ 2024ರಲ್ಲಿ ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶರಾಗಿ ನೇಮಕಗೊಂಡರು. ದೆಹಲಿ ವಿಶ್ವವಿದ್ಯಾಲಯದಲ್ಲಿ ಕಾನೂನು ಪದವಿ ಪಡೆದಿರುವ ಇವರು, ಪ್ರಸ್ತುತ ನವದೆಹಲಿಯ ರೌಸ್ ಅವೆನ್ಯೂ ನ್ಯಾಯಾಲಯದಲ್ಲಿ ಸಂಸದರು ಮತ್ತು ಶಾಸಕರ (ಎಂಪಿ/ಎಂಎಲ್‌ಎ) ವಿರುದ್ಧದ ಪ್ರಕರಣಗಳ ವಿಶೇಷ ನ್ಯಾಯಾಧೀಶರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಯಾವುದೇ ರಾಜಕೀಯ ಒತ್ತಡಗಳಿಗೆ ಮಣಿಯದೆ, ಆಮಿಷಗಳಿಗೆ ಬಲಿಯಾಗದೆ, ಕೇವಲ ದಾಖಲೆಗಳು, ಸಾಕ್ಷ್ಯಾಧಾರಗಳು ಮತ್ತು ಸಾಂವಿಧಾನಿಕ ಮೌಲ್ಯಗಳ ಆಧಾರದ ಮೇಲೆ ವಸ್ತುನಿಷ್ಠವಾಗಿ ತೀರ್ಪು ನೀಡುವ ಅವರ ದಿಟ್ಟತನ ಈ ಪ್ರಕರಣದಲ್ಲಿ ಎದ್ದು ಕಾಣುತ್ತದೆ.

ಸಿಬಿಐಗೆ ಚಾಟಿ ಏಟು

ಅಬಕಾರಿ ಪ್ರಕರಣದ ತೀರ್ಪಿನಲ್ಲಿ ನ್ಯಾಯಾಧೀಶರು ಕೇವಲ ಆರೋಪಿಗಳನ್ನು ಬಿಡುಗಡೆ ಮಾಡಿಲ್ಲ; ಬದಲಾಗಿ, ದೇಶದ ಅತ್ಯುನ್ನತ ತನಿಖಾ ಸಂಸ್ಥೆಗಳು ಹೇಗೆ ದಾರಿ ತಪ್ಪಿವೆ ಎಂಬುದನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದ್ದಾರೆ. ಸಿಬಿಐ ತನಿಖೆಯನ್ನು ''ಪೂರ್ವನಿಯೋಜಿತ ಮತ್ತು ನಾಟಕೀಯ'' ಎಂದು ಬಣ್ಣಿಸಿರುವ ಅವರು, ಸಾಕ್ಷ್ಯಾಧಾರಗಳಿಲ್ಲದೆ, ಕೇವಲ ಅಪ್ರೂವರ್ (ಮಾಫಿ ಸಾಕ್ಷಿ) ಹೇಳಿಕೆಗಳನ್ನು ಅತಿಯಾಗಿ ಅವಲಂಬಿಸಿ ಪ್ರಕರಣ ದಾಖಲಿಸಿರುವುದನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದ್ದಾರೆ. ಆರೋಪಿಗಳ ವಿರುದ್ಧ ಮೇಲ್ನೋಟಕ್ಕೆ ಅಥವಾ ಸಣ್ಣ ಗುಮಾನಿಯನ್ನೂ ಸಾಬೀತುಪಡಿಸಲು ಪ್ರಾಸಿಕ್ಯೂಷನ್ ವಿಫಲವಾಗಿದೆ ಎಂದು ತಮ್ಮ ತೀರ್ಪಿನಲ್ಲಿ ಸ್ಪಷ್ಟಪಡಿಸಿದ್ದಾರೆ.

ಸರ್ಕಾರದ ನೀತಿಯೊಂದರ ವೈಫಲ್ಯವನ್ನೇ ಕ್ರಿಮಿನಲ್ ಪಿತೂರಿ ಎಂದು ಪರಿಗಣಿಸಲಾಗದು ಎಂಬುದನ್ನು ಅವರು ಒತ್ತಿಹೇಳಿದ್ದಾರೆ. ಸಿಬಿಐ ಮಂಡಿಸಿದ ವಾದವನ್ನು ''ಆರ್ಥಿಕವಾಗಿ ಅನಕ್ಷರಸ್ಥ'' ಎಂದು ಕರೆದಿರುವ ಅವರು, ತನಿಖಾಧಿಕಾರಿಯ ಕಾರ್ಯವೈಖರಿಯನ್ನು ''ಸಾಂಸ್ಥಿಕ ದುರ್ನಡತೆ'' ಎಂದು ಖಂಡಿಸಿದ್ದಾರೆ. ಕೇವಲ ಆರೋಪಿಗಳನ್ನು



ಬಿಡುಗಡೆ ಮಾಡಿ ಸುಮ್ಮನಾಗದೆ, ಸಾಕ್ಷ್ಯಾಧಾರಗಳಿಲ್ಲದೆ ವಿನಾಕಾರಣ ಪ್ರಕರಣ ದಾಖಲಿಸಿದ ತನಿಖಾಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಗೆ ಶಿಫಾರಸು ಮಾಡುವ ಮೂಲಕ ಜಿತೇಂದ್ರ ಸಿಂಗ್ ತಮ್ಮ ಖಚಿತ ನಿಲುವನ್ನು ಪ್ರದರ್ಶಿಸಿದ್ದಾರೆ. ಜೊತೆಗೆ, ತನಿಖಾ ಸಂಸ್ಥೆಗಳು ಬಳಸಿದ ಸೌತ್ ಗ್ರೂಪ್ ಎಂಬ ಪದಪ್ರಯೋಗವನ್ನೂ ಆಕ್ಷೇಪಿಸಿರುವ ಅವರು, ''ಆರೋಪಿಗಳನ್ನು ಕಳಂಕಿತ ಪದಗಳಿಂದ ಕರೆಯಬಾರದು, ನ್ಯಾಯಾಲಯದ ಭಾಷೆ ಸದಾ ತಟಸ್ಥವಾಗಿರಬೇಕು'' ಎಂದು ಕಟ್ಟುನಿಟ್ಟಿನ ಪಾಠ ಮಾಡಿದ್ದಾರೆ.

ಪ್ರಜಾಪ್ರಭುತ್ವದಲ್ಲಿ ತನಿಖಾ ಸಂಸ್ಥೆಗಳು ಮತ್ತು ಅಧಿಕಾರದ ದುರ್ಬಳಕೆಯ ಬಗ್ಗೆ ತೀವ್ರ ಚರ್ಚೆ ನಡೆಯುತ್ತಿರುವ ಪ್ರಸ್ತುತ ಸನ್ನಿವೇಶದಲ್ಲಿ, ನ್ಯಾಯಾಧೀಶ ಜಿತೇಂದ್ರ ಸಿಂಗ್ ಅವರ ನಡೆ ನ್ಯಾಯಾಂಗದ ಮೇಲಿನ ಜನಸಾಮಾನ್ಯರ ನಂಬಿಕೆಯನ್ನು ಮತ್ತಷ್ಟು ಗಟ್ಟಿಗೊಳಿಸಿದೆ. ''ತನಿಖೆಯು ಸತ್ಯವನ್ನು ಹೊರತರಬೇಕೇ ಹೊರತು, ತನಿಖಾ ವೈಫಲ್ಯಗಳನ್ನು ಮುಚ್ಚಿಹಾಕಲು ಬಳಸುವ ತಂತ್ರವಾಗಬಾರದು'' ಎಂಬ ಅವರ ತೀಕ್ಷ್ಣ ಮಾತುಗಳು ಅವರ ವ್ಯಕ್ತಿತ್ವಕ್ಕೆ ಕನ್ನಡಿ ಹಿಡಿಯುತ್ತವೆ. ವಸ್ತುನಿಷ್ಠತೆ, ಸಾಂವಿಧಾನಿಕ ಹಕ್ಕುಗಳ ರಕ್ಷಣೆ, ಕಾನೂನಿನ ಆಳ್ವಿಕೆ ಹಾಗೂ ವ್ಯಕ್ತಿ ಸ್ವಾತಂತ್ರ್ಯಕ್ಕೆ ಅವರು ನೀಡುತ್ತಿರುವ ಆದ್ಯತೆ, ಭಾರತೀಯ ನ್ಯಾಯಾಂಗ ವ್ಯವಸ್ಥೆಗೆ ಒಂದು ಹೊಸ ಭರವಸೆಯಾಗಿದೆ.

ಹಿಂದಿನ ದಿಟ್ಟ ತೀರ್ಪುಗಳು

ಜಿತೇಂದ್ರ ಸಿಂಗ್ ಅವರು ನ್ಯಾಯಪರವಾದ ತೀರ್ಪುಗಳನ್ನು ನೀಡುತ್ತಿರುವುದು ಇದೇ ಮೊದಲೇನಲ್ಲ. ತಮ್ಮ ವೃತ್ತಿಜೀವನದುದ್ದಕ್ಕೂ ಅವರು ಪಕ್ಷಪಾತರಹಿತ ನಿಲುವನ್ನು ಪ್ರದರ್ಶಿಸಿದ್ದಾರೆ:

ಅಮಾನತುಲ್ಲಾ ಖಾನ್ ಪ್ರಕರಣ: ನವೆಂಬರ್ 2024ರಲ್ಲಿ, ದೆಹಲಿ ವಕ್ಫ್ ಬೋರ್ಡ್ ನೇಮಕಾತಿ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇ.ಡಿ) ಸಲ್ಲಿಸಿದ್ದ ಚಾರ್ಜ್‌ಶೀಟ್ ಅನ್ನು, ಕಾಯ್ದೆಯ ಅಡಿ ಸೂಕ್ತ ಪೂರ್ವಾನುಮತಿ ಇಲ್ಲದ ಕಾರಣಕ್ಕೆ ತಿರಸ್ಕರಿಸಿ, ಆಪ್ ಶಾಸಕ ಅಮಾನತುಲ್ಲಾ ಖಾನ್ ಬಿಡುಗಡೆಗೆ ಆದೇಶಿಸಿದ್ದರು.

ಸತ್ಯೇಂದ್ರ ಜೈನ್ / ಬಾನ್ಸುರಿ ಸ್ವರಾಜ್: ಆಪ್ ನಾಯಕ ಸತ್ಯೇಂದ್ರ ಜೈನ್ ಅವರು ಬಿಜೆಪಿ ಸಂಸದೆ ಬಾನ್ಸುರಿ ಸ್ವರಾಜ್ ವಿರುದ್ಧ ಹೂಡಿದ್ದ ಮಾನನಷ್ಟ ಮೊಕದ್ದಮೆಯನ್ನು ವಜಾಗೊಳಿಸುವಾಗಲೂ, ''ತನಿಖಾ ಸಂಸ್ಥೆಗಳು ನೀಡುವ ಮಾಹಿತಿಯು ನಿಖರವಾಗಿರಬೇಕು, ಸತ್ಯಕ್ಕೆ ದೂರವಾದ ಹಾಗೂ ಸನ್ಸೇಷನಲ್ ಆಗಿರಬಾರದು'' ಎಂದು ತನಿಖಾ ಸಂಸ್ಥೆಗಳಿಗೆ ಎಚ್ಚರಿಕೆ ನೀಡಿದ್ದರು.

ಭನ್ವರ್ ಜಿತೇಂದ್ರ ಸಿಂಗ್ ಪ್ರಕರಣ: ಕಾಂಗ್ರೆಸ್ ನಾಯಕ ಭನ್ವರ್ ಜಿತೇಂದ್ರ ಸಿಂಗ್ ವಿರುದ್ಧದ ಪ್ರಕರಣವನ್ನು ವಜಾಗೊಳಿಸಿದ್ದ ಮ್ಯಾಜಿಸ್ಟ್ರೇಟ್ ಆದೇಶವನ್ನು ಬದಿಗೊತ್ತಿ, ಅವರ ವಿರುದ್ಧ ಪ್ರಕರಣ ದಾಖಲಿಸಲು ಆಧಾರಗಳಿವೆ ಎಂದು ತಿಳಿಸಿ, ಮರುಪರಿಶೀಲಿಸುವಂತೆ ಆದೇಶಿಸಿದ್ದರು.

ಬಾನ್ಸುರಿ ಸ್ವರಾಜ್ ಪ್ರಕರಣ: ತನಿಖಾ ಸಂಸ್ಥೆಗಳ ಹೊಣೆಗಾರಿಕೆಗೆ ಎಚ್ಚರಿಕೆ

ಜುಲೈ 2025ರಲ್ಲಿ, ಆಪ್ ನಾಯಕ ಸತ್ಯೇಂದ್ರ ಜೈನ್ ಅವರ ವಿರುದ್ಧ ನೀಡಿದ್ದ ಹೇಳಿಕೆಗೆ ಸಂಬಂಧಿಸಿದಂತೆ ಬಿಜೆಪಿ ಶಾಸಕಿ ಬಾನ್ಸುರಿ ಸ್ವರಾಜ್ ವಿರುದ್ಧ ದಾಖಲಾಗಿದ್ದ ಮಾನನಷ್ಟ ಮೊಕದ್ದಮೆಯನ್ನು ನ್ಯಾಯಾಧೀಶ ಜಿತೇಂದ್ರ ಸಿಂಗ್ ವಜಾಗೊಳಿಸಿದರು. ಬಾನ್ಸುರಿ ಅವರ ಹೇಳಿಕೆಯು ಜಾರಿ ನಿರ್ದೇಶನಾಲಯ (ಇ.ಡಿ) ಜೂನ್ 2022ರಲ್ಲಿ ಮಾಡಿದ್ದ ಟ್ವೀಟ್‌ನ ಪ್ರತಿಧ್ವನಿಯಾಗಿದೆಯೇ ಹೊರತು, ಜೈನ್ ಅವರ ಮಾನಹಾನಿ ಮಾಡುವ ಯಾವುದೇ ಸ್ವತಂತ್ರ ದುರುದ್ದೇಶವನ್ನು ಹೊಂದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿತು. ಇದೇ ವೇಳೆ ಇ.ಡಿಯಂತಹ ತನಿಖಾ ಸಂಸ್ಥೆಗಳಿಗೆ ಕಟುವಾದ ಎಚ್ಚರಿಕೆ ನೀಡಿದ ನ್ಯಾಯಾಧೀಶರು, ''ಸಂಸ್ಥೆಗಳು ನೀಡುವ ಮಾಹಿತಿಯು ನಿಖರ ಹಾಗೂ ವಿಶ್ವಾಸಾರ್ಹವಾಗಿರಬೇಕು. ಸತ್ಯಗಳನ್ನು ತಪ್ಪಾಗಿ ಅಥವಾ ಕೇವಲ ಕುತೂಹಲ ಕೆರಳಿಸುವಂತೆ ಬಿಂಬಿಸುವುದು ಅಧಿಕಾರದ ದುರ್ಬಳಕೆಯಾಗುತ್ತದೆ ಹಾಗೂ ಸಂವಿಧಾನದ 21ನೇ ವಿಧಿಯಡಿ ಇರುವ ವ್ಯಕ್ತಿಯ ಪ್ರತಿಷ್ಠೆಯ ಹಕ್ಕಿನ ಉಲ್ಲಂಘನೆಯಾಗುತ್ತದೆ'' ಎಂದು ಸ್ಪಷ್ಟಪಡಿಸಿದರು.

ಡಿ.ಕೆ. ಶಿವಕುಮಾರ್ ಪ್ರಕರಣ: ನ್ಯಾಯಾಲಯದ ಘನತೆ ಎತ್ತಿಹಿಡಿದ ನಡೆ

ನವೆಂಬರ್ 2024ರಲ್ಲಿ, ಕರ್ನಾಟಕದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಇತರರ ವಿರುದ್ಧದ ಅಕ್ರಮ ಹಣ ವರ್ಗಾವಣೆ ಪ್ರಕರಣದ ವಿಚಾರಣೆ ವೇಳೆ ಇ.ಡಿ ಪರ ವಕೀಲರೊಬ್ಬರು ನ್ಯಾಯಾಧೀಶರನ್ನು ಉದ್ದೇಶಿಸಿ ನಿಂದನಾತ್ಮಕವಾಗಿ ಹಾಗೂ ಜೋರು ಧ್ವನಿಯಲ್ಲಿ ಮಾತನಾಡಿದ್ದರು. ಇದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ ಜಿತೇಂದ್ರ ಸಿಂಗ್ ಅವರು, ನ್ಯಾಯಾಲಯದ ಘನತೆಯನ್ನು ಕಾಪಾಡುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಲು ಇ.ಡಿಯ ವಿಶೇಷ ನಿರ್ದೇಶಕರಿಗೆ ಮುಂದಿನ ವಿಚಾರಣೆಗೆ ಖುದ್ದಾಗಿ ಹಾಜರಾಗುವಂತೆ ಸಮನ್ಸ್ ಜಾರಿ ಮಾಡಿದರು. ನ್ಯಾಯಾಲಯದ ಈ ಕಠಿಣ ನಡೆಯ ಬೆನ್ನಲ್ಲೇ ಎಚ್ಚೆತ್ತ ಜಾರಿ ನಿರ್ದೇಶನಾಲಯವು, ಕೇವಲ ಎರಡೇ ದಿನಗಳಲ್ಲಿ ''ತಮ್ಮ ವಕೀಲರ ನಡವಳಿಕೆ ಹಾಗೂ ಸುಳ್ಳು ಸಲ್ಲಿಕೆಗಳ ಕುರಿತು ಅವರಿಗೆ ವಿಶೇಷ ಕಾರ್ಯಕ್ರಮದ ಮೂಲಕ ಅರಿವು ಮೂಡಿಸಲಾಗುವುದು'' ಎಂದು ನ್ಯಾಯಾಲಯಕ್ಕೆ ಭರವಸೆ ನೀಡಬೇಕಾಯಿತು.

ಜಾಗೀರಜಾಡಲದಿನ್ನಿ ಬೃಹತ್ ಆರೋಗ್ಯ ಶಿಬಿರ ಯಶಸ್ವಿ ಆರೋಗ್ಯ ಮತ್ತು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ - ಡಾ. ಮಲ್ಲನಗೌಡ ವಿ. ಪಾಟೀಲ್

ದೇವದುರ್ಗ : ಮಲದಕಲ್ ಗೆಳೆಯರ ಬಳಗವು ಅರಕೇರಾ



ತಾಲೂಕಿನ ಜಾಗೀರಜಾಡಲದಿನ್ನಿ ಗ್ರಾಮದಲ್ಲಿ ದೇವದುರ್ಗದ ನಂದಿ ಆಸ್ಪತ್ರೆ , ಆರ್.ಆರ್.ಆಸ್ಪತ್ರೆ , ಗ್ರಾ.ಪಂ ಜಾಡಲದಿನ್ನಿ ಹಾಗೂ ಜ್ಞಾನವೃಕ್ಷ ಟ್ರಸ್ಟ್ ದೇವದುರ್ಗದ ಸಹಯೋಗದಲ್ಲಿ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವಿಂದು ಯಶಸ್ವಿಯಾಗಿ ಜರುಗಿತು.

ಶಿಬಿರವನ್ನು ಉದ್ದೇಶಿಸಿ ಮಾತನಾಡಿದ ಡಾ. ಮಲ್ಲನಗೌಡ ವಿ. ಪಾಟೀಲ್ ಅವರು, ''ಈ ಭಾಗದ ಜನರು ತಮ್ಮ ಸುಂದರ ನಾಳೆಯ ಭವಿಷ್ಯಕ್ಕಾಗಿ ಆರೋಗ್ಯ ಮತ್ತು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದು ಕರೆ ನೀಡಿದರು.

ತಾಲೂಕಿನ ಜನರಲ್ಲಿ ಶಿಕ್ಷಣದ ಕೊರತೆಯಿಂದ ಆರೋಗ್ಯದ ಬಗ್ಗೆ ಸಮರ್ಪಕ ಜಾಗೃತಿ ಇಲ್ಲದಿರುವುದು ಆತಂಕಕಾರಿ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ನಿಜಾನಂದ ಯೋಗಾಶ್ರಮ ಮಲದಕಲ್ ದ ಶ್ರೀಗಳಾದ ಗುರುಬಸವ ರಾಜಗುರುಗಳು ಮಾತನಾಡಿ ನಿಸ್ವಾರ್ಥ ಸೇವಾ ಮನೋಭಾವದಿಂದ ನಡೆಯುತ್ತಿರುವ ಇಂತಹ ಶಿಬಿರಗಳು ಸಮಾಜಕ್ಕೆ ಮಾದರಿಯಾಗಿವೆ ಎಂದರು.

ಸಹಾಯಕ ಪ್ರಾಧ್ಯಾಪಕರಾದ ಡಾ.ಮಾರುತಿ ಕುಮಾರ್ ರವರು ಮಾತನಾಡಿ ದೇವದುರ್ಗ ತಾಲೂಕಿನಲ್ಲಿನ ಬಡತನ ಮತ್ತು ಶಿಕ್ಷಣದ ಹಿನ್ನಡೆಯಿಂದ ವಿದ್ಯಾರ್ಥಿಗಳು ಇನ್ನೂ ಹಿಂದುಳಿದಿದ್ದಾರೆ . ತಾಲೂಕಿಗೆ ಹಿಂದುಳಿದ ಎಂಬ ಹಣೆಪಟ್ಟಿ ತೆಗೆಯಲು ಸಮಾಜದ ಎಲ್ಲ ವರ್ಗಗಳು ಒಗ್ಗೂಡಿ ಕಾರ್ಯನಿರ್ವಹಿಸಬೇಕು. ಸರ್ಕಾರಿ ಹುದ್ದೆಗಳಲ್ಲಿ ಇರುವವರು ಸಮಾಜಮುಖಿ ಕಾರ್ಯಗಳಲ್ಲಿ ಹೆಚ್ಚು ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಶಿಬಿರದಲ್ಲಿ ಪರಿಣಿತ ವೈದ್ಯರು ಉಚಿತವಾಗಿ ಇಸಿಜಿ (), ರಕ್ತದೊತ್ತಡ () ಹಾಗೂ ಶುಗರ್ ಪರೀಕ್ಷೆಗಳನ್ನು ನಡೆಸಿ ಅಗತ್ಯವಿರುವವರಿಗೆ ಉಚಿತ ಔಷಧಿಗಳನ್ನು ವಿತರಿಸಿದರು. ಅರಕೇರಾ ತಾಲೂಕಿನ ಸುತ್ತಮುತ್ತಲಿನ ಗ್ರಾಮಗಳ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರದ ಸದುಪಯೋಗ ಪಡೆದುಕೊಂಡರು.

ಈ ಕಾರ್ಯಕ್ರಮದಲ್ಲಿ ಜಾಡಲದಿನ್ನಿ ಗ್ರಾಮದ ಸಂಗಾಪುರ ಮಠದ ಗುರುಗಳಾದ ವೆಂಕೋಬ ತಾತ , ಕೃಣ್ಣಪ್ಪ ತಾತನವರು ದಿವ್ಯ ಸಾನಿಧ್ಯವನ್ನು ವಹಿಸಿದ್ದು. ಈ ಸಂದರ್ಭದಲ್ಲಿ ದೇವದುರ್ಗದ ಖ್ಯಾತ ವೈದ್ಯರಾದ ಡಾ. ಸಾಬಣ್ಣ ನಾಯಕ, ಡಾ. ಅಕ್ಷತಾ ಎಸ್ ನಾಯಕ, ಮುಖಂಡರಾದ ಬಸವರಾಜ್ ಪೂಜಾರಿ, ಕೆ ಭಗವಂತರಾಯ ನಾಯಕ, ಪ್ರಭು ದೊರೆ ನಾಗೋಲಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಕೆ . ಮುರಳಿ , ಸೇರಿದಂತೆ ಜಾಡಲದಿನ್ನಿ ಗ್ರಾಮ ಗುರು-ಹಿರಿಯರು ಮತ್ತು ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

ಮಲದಕಲ್ ಗೆಳೆಯರ ಬಳಗದ ಸದಸ್ಯರಾದ ಶ್ರೀ ವಿಜಯ ಕುಮಾರ್ ಮಾಶಿಹಾಳ ರವರು ಕಾರ್ಯಕ್ರಮದ ಕುರಿತಾದ ಪ್ರಾಸ್ತಾವಿಕ ನುಡಿಗಳನ್ನು ಹೇಳಿದರು.ಕಾರ್ಯಕ್ರಮದ ನಿರೂಪಣೆಯನ್ನು ಹನುಮಂತರಾಯ ನಾಯಕ ಜಾಡಲದಿನ್ನಿ ನಿರ್ವಹಿಸಿದರು.

ಈ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಅರಕೇರಾ ತಾಲೂಕಿನ ವಿವಿಧ ಸುತ್ತಮುತ್ತಲಿನ ಗ್ರಾಮಗಳ 1000ಕ್ಕೂ ಹೆಚ್ಚಿನ ಜನರು ಪಾಲ್ಗೊಂಡು ತಮ್ಮ ಆರೋಗ್ಯವನ್ನು ತಪಾಸಣೆ ಮಾಡಿಕೊಂಡರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR